ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 52 ಸಂಚಿಕೆ- 52 | PAGE- 8 ಪುಟ-8 | ಮಂಗಳವಾರ 01.04.2025 | RS.2/- ಬೆಲೆ 2/-

## ನದಿಯಲ್ಲಿ ಮುಳುಗಿ ಮೂವರು ಬಾಲಕರ ಸಾವು







ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.31-ಆಲಮಟ್ಟಿ ಜಲಾಶಯದ ಕೆಳಗಿನ ಭಾಗದ ಕೃಷ್ಣಾ ನದಿಯಲ್ಲಿ ಸ್ನಾನ ಮಾಡಲು ಹೋಗಿದ್ದ ಮೂವರು ವಿದ್ಯಾರ್ಥಿಗಳು ನೀರಲ್ಲಿ ಮುಳುಗಿ ಮೃತಪಟ್ಟ ಘಟನೆ ರವಿವಾರ ನಡೆದಿದೆ.

ರವಿವಾರ ಮಧ್ಯಾಹ್ನ ನಡೆದ ಈ ದುರ್ಘಟನೆಯಲ್ಲಿ ಬಾಗಲಕೋಟೆ ತಾಲ್ಲೂಕಿನ ಇಲಾಳ ಗ್ರಾಮದ ಡಿಪ್ಲೊಮಾ ವಿದ್ಯಾರ್ಥಿ ಪರನಗೌಡ ಮಲ್ಲಪ್ಪ ಬೀಳಗಿ(17), ಎಸ್.ಎಸ್.ಎಲ್.ಸಿ ಪರೀಕ್ಷಾರ್ಥಿ ಮಲ್ಲಪ್ಪ ಬಸಪ್ಪ ಬಗಲಿ(15) ಹಾಗೂ 9ನೇ ತರಗತಿ ವಿದ್ಯಾರ್ಥಿ ಸೋಮಶೇಖರ ಬೊಮ್ಮಣ್ಣ ದೇವರಮನಿ(14) ಸಾವನ್ನಪ್ಪಿದ್ದು, ಇವರ ಜೊತೆ-ಗಿದ್ದ ಇಬ್ಬರು ವಿದ್ಯಾರ್ಥಿಗಳನ್ನು ಪಕ್ಕದಲ್ಲಿದ್ದ ಜನ ರಕ್ಷಣೆ ಮಾಡಿದ್ದಾರೆ.

ಇಲಾಳದ ಬೊಮ್ಮಲಿಂಗೇಶ್ವರ ಜಾತ್ರೆ ಮುಂದಿನ ಸೋಮವಾರ(ಎ.7) ನಡೆಯಲಿದ್ದು, ಆ ಪ್ರಯುಕ್ತ ಯುಗಾದಿ ಪಾಡ್ಯೆ ದಿನವಾದ ರವಿವಾರ ಬೊಮ್ಮಲಿಂಗೇಶ್ವರ ದೇವರ ಮೂರ್ತಿಯನ್ನು ಪಲ್ಲಕ್ಕಿಯೊಂದಿಗೆ ನದಿ ಸ್ನಾನಕ್ಕೆ ತೆಗೆದುಕೊಂಡು ಹೋದಾಗ 5 ಜನ ಬಾಲಕರು ನದಿ ನೀರಲ್ಲಿ ಜಳಕಕ್ಕೆ ಎಂದು ಮುಂದಕ್ಕೆ ಸಾಗಿದ್ದಾರೆ. ಈಜು ಬಾರದ ಈ ಬಾಲಕರು ಆಳವಾದ ತಗ್ಗಿಗೆ ಇಳಿಯುತ್ತಿದ್ದಂತೆ ನೀರಲ್ಲಿ ಮುಳುಗಿದ್ದಾರೆ. ಇದನ್ನು ನೋಡಿದ ಪಕ್ಕದಲ್ಲಿದ್ದ ಜನ ತಕ್ಷಣ ನೀರಿಗಿಳಿದು ಇಬ್ಬರನ್ನು ರಕ್ಷಿಸಿದ್ದಾರೆ.

(2ನೇ ಪುಟ ನೋಡಿ)

## ಇಂದಿನಿಂದ ನಂದಿನ ಹಾಲು,ಮೊಸರಿನ ದರ ಲೀ.ಗೆ 4 ರೂ. ಹೆಚ್ಚಳ



ಬೆಂಗಳೂರು,ಮಾ.31: ಹಾಲು ಒಕ್ಕೂಟಗಳ ಮನವಿಗೆ ಸ್ಪಂದಿಸಿ ರಾಜ್ಯ ಸರ್ಕಾರ ಇತ್ತೀಚೆಗೆ ತೆಗೆದು-ಕೊಂಡಿದ್ದ ತೀರ್ಮಾನದಂತೆ ಏ.1 ರಿಂದಲೇ ರಾಜ್ಯಾದ್ಯಂತ ನಂದಿನಿ ಹಾಲು ಮತ್ತು ಮೊಸರಿನ ಮಾರಾಟ ದರ ಪ್ರತಿ ಲೀಟರ್ 4 ರೂ. ಹೆಚ್ಚಳ ಆಗಲಿದೆ.

ಈ ಹಿಂದೆ 2023ರ ಆಗಸ್ಟ್ 3 ಹಾಗೂ 2024ರ ಜೂನ್ 2ರಲ್ಲಿ ಹಾಗೂ 2025 ಮಾರ್ಚ್‌ನಲ್ಲಿ ಏರಿಕೆ ಮಾಡಲಾಗಿತ್ತು. ಈಗ ಮತ್ತೆ 4 ರೂ. ಏರಿಕೆ ಮಾಡಲಾಗಿದೆ. ಈ ಮೂಲಕ ರೈತರಿಗೆ ಲಾಭ ಕೊಟ್ಟರೂ ಗ್ರಾಹಕರ ಮೇಲೆ ಹೊಡೆತ ಬಿದ್ದಿದೆ.

ನೂತನ ಪರಿಷ್ಕೃತ ದರವು ಮಂಗಳವಾರ ಜಾರಿಯಾಗಲಿದ್ದು, ಜನ ಸಾಮಾನ್ಯರಿಗೆ ಹಾಲಿನ ದರ ಏರಿಕೆಯ ಬರೆ ಬೀಳಲಿದೆ. ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ರಾಜ್ಯದ ಜನರಿಗೆ ಹಾಲಿನ ದರ ಏರಿಕೆಯ ಬಿಸಿ ತಟ್ಟಲಿದೆ.ಬಸ್, ಮೆಟ್ರೊ, ವಿದ್ಯುತ್ ಬಳಿಕ ಕೆಎಂಎಫ್ ನಂದಿನಿ ಹಾಲಿನ ದರ ಏರಿಕೆ ದೊಡ್ಡ ಹೊರೆಯಾಗಿದೆ.

ಹಾಲು ಒಕ್ಕೂಟ ಹಾಗೂ ರೈತರಿಂದ ಹಾಲು ದರ ಹೆಚ್ಚಳಕ್ಕೆ ಬೇಡಿಕೆ ನಿರಂತವಾಗಿ ಹೆಚ್ಚಿದ ಹಿನ್ನೆಲೆ ಪ್ರತಿ ಲೀಟರ್ ಹಾಲಿನ ದರ 4ರೂ. ಹೆಚ್ಚಳ ಮಾಡಲಾಗಿದೆ. ರೈತರಿಗೆ ಇದರಿಂದ ಅನುಕೂಲವಾದರೂ ಗ್ರಾಹಕರಿಗೆ ಇದೊಂದು ಬರೆ ಅಂತ ಜನರು ಆಕ್ರೋಶ ಹೊರಹಾಕಿದ್ದಾರೆ.

ದರ ಪರಿಷ್ಕರಿಸುವಂತೆ ಕರ್ನಾಟಕ ಹಾಲು ಮಹಾಮಂಡಳ (ಕೆಎಂಎಫ್) ಸಲ್ಲಿಸಿದ್ದ ಪ್ರಸ್ತಾವಕ್ಕೆ ಸಚಿವ ಸಂಪುಟ ಸಭೆ ಕಳೆದ ಗುರುವಾರ ಒಪ್ಪಿಗೆ ನೀಡಿತ್ತು.ಹೆಚ್ಚಳ ಮಾಡಿದ ಸಂಪೂರ್ಣ ಮೊತ್ತವನ್ನು ಹಾಲು ಉತ್ಪಾದಕರಿಗೆ ನೇರವಾಗಿ ನೀಡಲಾಗುತ್ತದೆ ಸದ್ಯ ರೈತರಿಗೆ ಪ್ರತಿ ಲೀಟರ್ ಹಾಲು ಶೇಖರಣೆಗೆ ಕೆಎಂಎಫ್ 31.68 ದರ ನೀಡುತ್ತಿದೆ. ಹಾಲಿನ ಮಾರಾಟ ದರ ಪರಿಷ್ಕರಣೆಯ ನಂತರ 35.68 ಸಿಗಲಿದೆ. 2024ರ ಜೂನ್ 26ರಂದು ಪ್ರತಿ ಲೀಟರ್ ಹಾಲಿಗೆ ಹೆಚ್ಚುವರಿಯಾಗಿ 50 ಮಿಲಿಯಷ್ಟು ನೀಡಿ ದರವನ್ನು 2ರಂತೆ (42ರಿಂದ 44) ಹೆಚ್ಚಿಸಲಾಗಿತ್ತು. ಈ ಹೆಚ್ಚಳವನ್ನು ಹಿಂಪಡೆದು, ಮೊದಲಿದ್ದ ದರಕ್ಕೆ (42) 4 ಹೆಚ್ಚಿಸಲಾಗುತ್ತದೆ.

ಹಾಲು ಉತ್ಪಾದನಾ ವೆಚ್ಚ ಹೆಚ್ಚುತ್ತಿರುವ ಕಾರಣ ಮಾರಾಟ ದರ ಹೆಚ್ಚಿಸುವಂತೆ ರೈತರು ಬಹಳ ದಿನಗಳಿಂದ ಒತ್ತಡ ಹಾಕುತ್ತಿದ್ದರು. ಹಾಲು ಉತ್ಪಾದನೆ ಮತ್ತು ಸಂಸ್ಕರಣಾ ವೆಚ್ಚ ಪರಿಗಣಿಸಿ, ಹೈನೋದ್ಯಮಕ್ಕೆ ಪ್ರೊ?ತ್ಸಾಹ ನೀಡುವ ಉದ್ದೇಶದಿಂದ ದರ ಪರಿಷ್ಕರಿಸುವಂತೆ ಹಾಲು ಒಕ್ಕೂಟಗಳೂ ಪ್ರಸ್ತಾವ ಸಲ್ಲಿಸಿದ್ದವು.

ಪಶು ಆಹಾರ ಉತ್ಪಾದನೆಗೆ ಬಳಸುವ ಮೆಕ್ಕೆಜೋಳ, ಅಕ್ಕಿತೌಡು, ಹತ್ತಿಕಾಳು ಹಿಂಡಿ, ಖನಿಜ ಪದಾರ್ಥಗಳ ಬೆಲೆ ಶೇ 35ರಿಂದ ಶೇ 40ರಷ್ಟು ಹೆಚ್ಚಳವಾಗಿದೆ. ಹೈನುರಾಸುಗಳ ನಿರ್ವಹಣಾ ವೆಚ್ಚ ಕೂಡಾ ಅಧಿಕವಾಗಿದೆ. ಹಾಲು ಒಕ್ಕೂಟದವರು 5 ಹೆಚ್ಚಳಕ್ಕೆ ಬೇಡಿಕೆ ಇಟ್ಟಿದ್ದರು. ಹಾಗೆಂದು, ಲಾಭ, ನಷ್ಟದ ಲೆಕ್ಕಾಚಾರದಲ್ಲಿ ದರ ಪರಿಷ್ಕರಿಸಿಲ್ಲ. ಹಾಲು ಉತ್ಪಾದಕರಿಗೆ ನೆರವು ನೀಡಬೇಕೆಂಬ ಉದ್ದೇಶದಿಂದ ದರ ಹೆಚ್ಚಳಕ್ಕೆ ಸರ್ಕಾರ ಒಪ್ಪಿಗೆ ನೀಡಿದೆ ಎಂಬುದು ಸರ್ಕಾರದ ಸಮರ್ಥನೆಯಾಗಿದೆ.

### ಜನರ ಆಕ್ರೋಶ :

ಒಂದು ಕಡೆಯಲ್ಲಿ ಗ್ಯಾರಂಟಿ ಮೂಲಕ ಫಲಾನುಭವಿಗಳಿಗೆ ಅನುಕೂಲ ಕಲ್ಪಿಸಿದರೆ ಮತ್ತೊಂದು ಕಡೆ ಬೆಲೆ ಏರಿಕೆ ಮೂಲಕ ಜನರ ಜೋಬನ್ನು ಸರ್ಕಾರ ಬರಿದು ಮಾಡುತ್ತಿದೆ ಎಂಬ ಆರೋಪ ಕೇಳಿ ಬರುತ್ತಿದೆ. ಬಸ್ ದರ, ವಿದ್ಯುತ್ ದರ, ಮೆಟ್ರೊ ದರ ಹಾಗೂ ಹಾಲಿನ ದರ ಏರಿಕೆ-ಯ ಶಾಕ್ ನೀಡಿದ್ದು, ಸರ್ಕಾರದ ಈ ನಿರ್ಧಾರ ಜನಾಕ್ರೋಶಕ್ಕೂ ಕಾರಣವಾಗಿದೆ.

### ಪರಿಷ್ಕೃತ ನೂತನ ದರ

*ಟೋನ್ಡ್ ಹಾಲು ಒಂದು ಲೀಟರ್ 44 ರೂ. ಹೊಸ ದರ 48 ರೂ.

(2ನೇ ಪುಟ ನೋಡಿ)

## ಮಾಜಿ ಸಚಿವ ರಾಜಶೇಖರ ಪಾಟೀಲರೊಂದಿಗೆ ರಂಜಾನ್ ಶುಭಾಶಯ ಹಂಚಿಕೊಂಡ ಮುಸ್ಲಿಂ ಬಾಂಧವರು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಮಾ.31:ಮುಸ್ಲಿಂ ಸಮುದಾಯದವರು ಒಂದು ತಿಂಗಳ ಕಾಲ ರಮಜಾನ್ ಅಂಗವಾಗಿ ಉಪವಾಸ ಮಾಡಿದ ನಂತರ ಇಂದು ಪಟ್ಟಣದ ಈದ್ಗಾ ಮೈದಾನದಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಶ್ರದ್ಧಾ ಭಕ್ತಿಯಿಂದ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದ ನಂತರ ಮಾಜಿ ಸಚಿವ ರಾಜಶೇಖರ ಪಾಟೀಲ ಹುಮನಾಬಾದರಿಗೆ ಈದ್ ನ ಶುಭಾಶಯ ಕೋರಿ ರಂಜಾನ್ ಹಬ್ಬವನ್ನು ಸಂಭ್ರಮದಿಂದ ಆಚರಣೆ ಮಾಡಿದರು.

ಮಾಜಿ ಸಚಿವ ರಾಜಶೇಖರ ಪಾಟೀಲರೊಂದಿಗೆ ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಪಾಟೀಲ, ಡಾ.ಚಂದ್ರಶೇಖರ ಪಾಟೀಲ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ, ಪುರಸಭೆ ಸದಸ್ಯ ಅಫ್ಸರ್ ಮಿಯಾ, ಯಾಸಿನ ಅಲಿ, ಸೇರಿದಂತೆ ಇತರ ಮುಖಂಡರು, ಸಮಾಜದ ಬಾಂಧವರು ರಂಜಾನ್ ಶುಭಾಶಯಗಳನ್ನು ಪರಸ್ಪರ ಕೋರಿದರು.

ಭಾವೈಕ್ಯತೆ, ಸಹೋದರತೆಯನ್ನು ಸಾರುವ ರಂಜಾನ್ ಹಬ್ಬ ಮುಸ್ಲಿಂ ಧರ್ಮಿಯರಿಗೆ ಪವಿತ್ರವಾದ ಹಬ್ಬ. ರಂಜಾನ್ ತಿಂಗಳಿನಲ್ಲಿ ಇಸ್ಲಾಂನ್ನು ಪಾಲಿಸುವ ಎಲ್ಲ ಸಹೋದರ-ಸಹೋದರಿಯರು ಉಪವಾಸವಿದ್ದು ಈ ತಿಂಗಳನ್ನು ಆಚರಿಸುತ್ತಾರೆ. ಹಾಗೂ ಬಡ ಬಗ್ಗರಿಗೆ ದಾನ ಧರ್ಮ ಮಾಡುವ ಮೂಲಕ ದೇವರ ಕೃಪೆಗೆ ಪಾತ್ರರಾಗುತ್ತಾರೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲರು ನುಡಿದರು. ಹಾಗೂ ಎಲ್ಲ ಮುಸ್ಲಿಂ ಬಾಂಧವರಿಗೆ ರಂಜಾನ್ ಹಬ್ಬದ ಶುಭಾಶಯ ಕೋರಿದರು.

## ಇಂದಿನಿಂದ ಯುಪಿಐ, ಮಿನಿಮಮ್ ಬ್ಯಾಂಕ್ ಬ್ಯಾಲೆನ್ಸ್ ನಿಯಮ ಬದಲು

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮಾ.31: ನಾಳೆಯಿಂದ ಆದಾಯ ತೆರಿಗೆ ಸೇರಿದಂತೆ ಯುಪಿಐ ಮತ್ತು ಮಿನಿಮಮ್ ಬ್ಯಾಂಕ್ ಬ್ಯಾಲೆನ್ಸ್ ನಿಯಮಗಳಲ್ಲಿ ಬದಲಾವಣೆಯಾಗಲಿದೆ.

ಇದೇ ಏ.1 ರಿಂದ ಹಣಕಾಸು ನಿಯಮಗಳಲ್ಲಿ ಹಲವಾರು ಬದಲಾವಣೆಗಳು ಜಾರಿಗೆ ಬರಲಿದ್ದು, ತೆರಿಗೆದಾರರು, ಯುಪಿಐ ಬಳಕೆದಾರರು, ಕ್ರೆಡಿಟ್ ಕಾರ್ಡ್ ಹೊಂದಿರುವವರು ಮತ್ತು ಪಿಂಚಣಿದಾರರ ಮೇಲೆ ಇದು ಪರಿಣಾಮ ಬೀರಲಿದೆ. 2025-26ರ ಹಣಕಾಸು ವರ್ಷ ಪ್ರಾರಂಭವಾಗುತ್ತಿದ್ದಂತೆ, ಆದಾಯ ತೆರಿಗೆ, ಕ್ರೆಡಿಟ್ ಕಾರ್ಡ್ಗಳು, ಯುಪಿಐ ಭದ್ರತೆ, ಜಿಎಸ್‌ಟಿ ಹಾಗೂ ಬ್ಯಾಂಕಿಂಗ್ ಸಂಬಂಧಿಸಿದ ನಿಯಮಗಳಲ್ಲಿ ಬದಲಾವಣೆ ತರಲಿದೆ.

2025ರ ಕೇಂದ್ರ ಬಜೆಟ್‌ನಲ್ಲಿ ಪರಿಷ್ಕೃತ ಆದಾಯ ತೆರಿಗೆ

(2ನೇ ಪುಟ ನೋಡಿ)

## ಏಪ್ರಿಲ್-ಜೂನ್ ನಲ್ಲಿ ಕರ್ನಾಟಕ ಸೇರಿದಂತೆ ದೇಶಾದ್ಯಂತ ಅಧಿಕ ಬಿಸಿಲು- ಮುನ್ನೆಚ್ಚರಿಕೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮಾ.31: ಏಪ್ರಿಲ್-ಜೂನ್ ನಲ್ಲಿ ಕರ್ನಾಟಕ ಸೇರಿದಂತೆ ದೇಶಾದ್ಯಂತ ಅಧಿಕ ಬಿಸಿಲು ಇರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಸೋಮವಾರ ತಿಳಿಸಿದೆ. ಪಶ್ಚಿಮ ಮತ್ತು ಪೂರ್ವ ಭಾರತದ ಕೆಲವು ಪ್ರದೇಶಗಳನ್ನು ಹೊರತುಪಡಿಸಿ ದೇಶದ ಬಹುತೇಕ ಭಾಗಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ತಾಪಮಾನ ಇರಲಿದೆ ಎಂದು ನಿರೀಕ್ಷಿಸಿದೆ.ಬಹುತೇಕ ಪ್ರದೇಶಗಳಲ್ಲಿ ಕನಿಷ್ಠ ತಾಪಮಾನ ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ. ಏಪ್ರಿಲ್‌ನಿಂದ ಜೂನ್‌ವರೆಗೆ ಉತ್ತರ ಮತ್ತು ಪೂರ್ವ ಭಾರತ, ಮಧ್ಯಭಾರತದ ಬಹುತೇಕ ಭಾಗಗಳು ಮತ್ತು ವಾಯುವ್ಯ ಭಾರತದ ಬಯಲು ಪ್ರದೇಶಗಳು ಸಾಮಾನ್ಯಕ್ಕಿಂತ ಎರಡರಿಂದ ನಾಲ್ಕು ಪಟ್ಟು ಬಿಸಿಗಾಳಿ ಇರುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುಖ್ಯಸ್ಥ ಮೃತ್ಯುಂಜಯ್ ಮೊಹಾಪಾತ್ರ

(2ನೇ ಪುಟ ನೋಡಿ)

## ಉಪ ಸಭಾಧ್ಯಕ್ಷರ ಹುದ್ದೆ ಖಾಲಿ ಇರುವುದು ಸಂವಿಧಾನದ ಉಲ್ಲಂಘನೆ: ಸಾಗರ್ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 31 : ಲೋಕಸಭೆಯಲ್ಲಿ 2019ರಿಂದಲೂ ಉಪಸಭಾಧ್ಯಕ್ಷರ ಹುದ್ದೆ ಖಾಲಿಯಿದ್ದು, ಇದು ಸಂವಿಧಾನದ 93ನೇ ವಿಧಿಯ ಉಲ್ಲಂಘನೆಯಾಗಿದೆ ಎಂದು ಸಂಸದ ಸಾಗರ್ ಖಂಡ್ರೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಸಂಸತ್ತಿನ ಕೆಳಮನೆ ಸಾಂವಿಧಾನಿಕವಾಗಿ, ಪ್ರಜಾಪ್ರಭತ್ವದ ತತ್ವದಲ್ಲಿ ನಡೆಯಬೇಕು.

ಆದರೆ ಕೇಂದ್ರ ಸರ್ಕಾರ ಸರ್ವಾಧಿಕಾರಿ ಧೋರಣೆ ತಳೆದಿದೆ ಎಂದು ಹೇಳಿದ್ದಾರೆ.

ಸಂಸತ್ತು ಪ್ರಜಾಸತ್ತಾತ್ಮಕವಾಗಿ ನಡೆಯಬೇಕಾದರೆ, ಎಲ್ಲ ಜನಪ್ರತಿನಿಧಿಗಳಿಗೂ ಪಕ್ಷಭೇದವಿಲ್ಲದೆ ಸಮಾನ ಅವಕಾಶ ದೊರಕಬೇಕು. ಸದಸ್ಯರು ಸಾಂವಿಧಾನಿಕ ಕರ್ತವ್ಯ ನಿಭಾಯಿಸುವಂತಹ ವಾತಾವರಣ ಇರಬೇಕು, ಆದರೆ ಇತ್ತೀಚಿನ ಕೆಲವು ಪ್ರವೃತ್ತಿಗಳು ಈ ವ್ಯವಸ್ಥೆಯ ಪಾವಿತ್ರ್ಯತೆಗೆ ಧಕ್ಕೆಯಾಗುತ್ತಿವೆ, ಪ್ರಜಾಪ್ರಭುತ್ವದ ಮೂಲ ತತ್ವಗಳನ್ನೇ ಅಪಹಾಸ್ಯ ಮಾಡುತ್ತಿವೆ ಎಂದು ತಿಳಿಸಿದ್ದಾರೆ.

ಸದನದಲ್ಲಿ ಪ್ರತಿಪಕ್ಷದ ಸದಸ್ಯರಿಗೆ ಮಾತನಾಡಲು ಸೂಕ್ತ ಅವಕಾಶ ಕಲ್ಪಿಸದೆ, ಅವರ ಹಕ್ಕನ್ನೇ ಮೊಟಕುಗೊಳಿಸಲಾಗುತ್ತಿದೆ. ಇದು ಸಂಸದೀಯ ಕಲಾಪದ ಚರ್ಚೆಯ ಸ್ವರೂಪವನ್ನು ದುರ್ಬಲಗೊಳಿಸುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಪ್ರತಿಪಕ್ಷಗಳ ಸಂಸದರು ಪ್ರಮುಖ ವಿಚಾರಗಳನ್ನು ಪ್ರಸ್ತಾಪಿಸಿದಾಗ, ಅವರ ಮಾತುಕತೆಗಳು ಕೇಳದ ರೀತಿಯಲ್ಲಿ ಮೈಕ್ರೊಫೋನ್ ಗಳನ್ನು ಆಫ್ ಮಾಡಲಾಗುತ್ತದೆ. ಪ್ರತಿಪಕ್ಷ ಸದಸ್ಯರ ಧ್ವನಿಯನ್ನೇ ದಮನ ಮಾಡುವ ಅಪಾಯಕಾರಿ ಪ್ರವೃತ್ತಿ ಬೆಳೆಯುತ್ತಿದೆ. ಆದರೆ ಆಡಳಿತ ಪಕ್ಷದ ಸದಸ್ಯರಿಗೆ ಮುಕ್ತ ಅವಕಾಶ ನೀಡಲಾಗುತ್ತಿದೆ. ಈ ತಾರತಮ್ಯ ಪ್ರವೃತ್ತಿ ಪ್ರಜಾಪ್ರಭುತ್ವಕ್ಕೆ ಮಾರಕ ಎಂದು ತಿಳಿಸಿದ್ದಾರೆ.

(2ನೇ ಪುಟ ನೋಡಿ)

## ಏ.2 ರಂದು ವಕ್ಫ್ ತಿದ್ದುಪಡಿ ಮಸೂದೆ ಮಂಡನೆಗೆ ಕೇಂದ್ರದ ತಯಾರಿ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮಾ.31: ದೇಶಾದ್ಯಂತ ತೀವ್ರ ಚರ್ಚೆಗೆ ಕಾರಣವಾಗಿರುವ ವಕ್ಫ್ ತಿದ್ದುಪಡಿ ಮಸೂದೆ ಮಂಡನೆಗೆ ಕೇಂದ್ರ ಸರ್ಕಾರ ಸಕಲ ತಯಾರಿ ಮಾಡಿಕೊಂಡಿದೆ. ಏಪ್ರಿಲ್ 4ಕ್ಕೆ ಬಜೆಟ್ ಅಧಿವೇಶನ ಅಂತ್ಯವಾಗಲಿದ್ದು, ಏಪ್ರಿಲ್ 2ಕ್ಕೆ ವಕ್ಫ್ ತಿದ್ದುಪಡಿ ಮಸೂದೆ ಲೋಕಸಭೆಯಲ್ಲಿ ಮಂಡನೆಯಾಗಲಿದೆ. ಇದು ದೇಶದ ಮುಸ್ಲಿಂ ಸಮುದಾಯದಲ್ಲಿ ಪ್ರತಿಭಟನೆಗೆ ಕಾರಣವಾಗಿದೆ.

ಈ ಮಸೂದೆಯು ವಕ್ಫ್ ಆಸ್ತಿಗಳ ಆಡಳಿತ ಮತ್ತು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಹೊಸ ನಿಯಮಗಳನ್ನು ಜಾರಿಗೆ ತರಲಿದೆ ಎಂದು ಸರ್ಕಾರ ಹೇಳಿದೆ. ಆದರೂ, ಇದು ಮುಸ್ಲಿಮರ ಧಾರ್ಮಿಕ ಸ್ವಾತಂತ್ರ್ಯ ಮತ್ತು ಆಸ್ತಿ ಹಕ್ಕುಗಳ ಮೇಲೆ ದಾಳಿ ಎಂದು ವಿರೋಧ ಪಕ್ಷಗಳು ಮತ್ತು ಮುಸ್ಲಿಂ ನಾಯಕರು ಆರೋಪಿಸಿದ್ದಾರೆ.

ವಕ್ಫ್ ತಿದ್ದುಪಡಿ ಮಸೂದೆ ಜಾರಿಯಾಗುವುದರಿಂದ ಆಗುವ ಬದಲಾವನಣೆಗಳು:

1. ವಕ್ಫ್ ಆಸ್ತಿಗಳ ಸರ್ವೆ

(2ನೇ ಪುಟ ನೋಡಿ)

## ವಕ್ಫ್ ತಿದ್ದುಪಡಿ ವಿರೋಧಿಸಿ: ಕಪ್ಪು ಪಟ್ಟಿ ಧರಿಸಿ ರಂಜಾನ್ ಪ್ರಾರ್ಥನೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.31: ವಕ್ಫ್ ತಿದ್ದುಪಡಿ ಮಸೂದೆ 2024 ಅನ್ನು ವಿರೋಧಿಸಿ ಸೋಮವಾರ ರಂಜಾನ್ ಪ್ರಾರ್ಥನೆ ಸಲ್ಲಿಸುವಾಗ ಕರ್ನಾಟಕದ ಸಚಿವರು ತಮ್ಮ ಬೆಂಬಲಿಗರೊಂದಿಗೆ ಕಪ್ಪು ಪಟ್ಟಿ ಧರಿಸಿ ಪ್ರತಿಭಟಿಸಿದರು.

ವಕ್ಫ್ ಮತ್ತು ಪ್ರವಾಸೋದ್ಯಮ ಸಚಿವ ಬಿ.ಝಡ್. ಜಮೀರ್ ಅಹ್ಮದ್ ಖಾನ್ ಮತ್ತು ಪುರಸಭೆ ಆಡಳಿತ ಮತ್ತು ಹಜ್ ಸಚಿವ ಕೆ. ರೆಹಮಾನ್ ಖಾನ್ ಮತ್ತು ಅವರ ನೂರಾರು ಬೆಂಬಲಿಗರು ಬೆಂಗಳೂರು ಮತ್ತು ಬೀದರ್‌ನಲ್ಲಿ ಕ್ರಮವಾಗಿ ಕಪ್ಪು ಪಟ್ಟಿ ಧರಿಸಿ ಬೆಳಗಿನ ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು.ಸಚಿವ ಜಮೀರ್ ಅಹ್ಮದ್ ಖಾನ್ ಬೆಂಗಳೂರಿನ ಚಾಮರಾಜಪೇಟೆ ಮೈದಾನದಲ್ಲಿ ತೋಳಿಗೆ ಕಪ್ಪು ಪಟ್ಟಿ ಧರಿಸಿ ನಮಾಜ್ ಮಾಡಿದರು. ಅಂತೆಯೇ ಅವರ ನೂರಾರು ಬೆಂಬಲಿಗರು ಸಹ ಕಪ್ಪು ಪಟ್ಟಿ ಧರಿಸಿ ಪ್ರಾರ್ಥನೆಯಲ್ಲಿ ಭಾಗವಹಿಸಿದರು.

ನಮಾಜ್ ಬಳಿಕ ಮಾತನಾಡಿದ ಸಚಿವ ಜಮೀರ್ ಅಹ್ಮದ್

(2ನೇ ಪುಟ ನೋಡಿ)

## ದಕ್ಷಿಣ ಭಾರತದ ಅತಿ ದೊಡ್ಡ ಅಂಗಾಂಗ ಮರು ಪಡೆಯುವ ಕೇಂದ್ರ ಬೆಂಗಳೂರಿನಲ್ಲಿ ಸ್ಥಾಪನೆ



ಕಲಬುರ್ಗಿ, ಮಾ. 31: ದಾನಗಳಲ್ಲಿ ಶ್ರೇಷ್ಠ ದಾನ ಅಂಗಾಂಗ ದಾನ. ವೈದ್ಯಕೀಯ ಶಿಕ್ಷಣ ಇಲಾಖೆಯು ಈ ಅಂಗಾಂಗ ದಾನ ಯೋಜನೆಗೆ ಹೊಸ ರೂಪ ನೀಡಲು ಕ್ರಮ ಕೈಗೊಂಡಿದೆ. ಮತ್ತೊಬ್ಬರ ಬಾಳಿಗೆ ಬೆಳಕಾಗುವ ಮಹತ್ವದ ಯೋಜನೆಗೆ ಇಲಾಖೆ ಮುಂದಾಗಿದೆ.

ವೈದ್ಯಕೀಯ ಶಿಕ್ಷಣ ಇಲಾಖೆಯು ತನ್ನ ಅಸ್ತಿತ್ವದಲ್ಲಿರುವ ಸೌಲಭ್ಯಗಳನ್ನು ನವೀಕರಿಸಲು ಮತ್ತು ಅಂಗಾಂಗ ಮರು ಪಡೆಯುವ ಕೇಂದ್ರ ಸ್ಥಾಪಿಸಲು 1 ಕೋಟಿ ರೂ. ಅನುದಾನ ಮಂಜೂರು ಮಾಡಿದೆ. ಈ ಸಂಬಂಧ ಆದೇಶ ಕೂಡ ಹೊರಡಿಸಲಾಗಿದೆ. ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆ 125ನೇ ವರ್ಷಾಚರಣೆ ಸಂದರ್ಭದಲ್ಲಿಯೇ ಈ ಮಹತ್ವದ ಕೇಂದ್ರ ಇಲ್ಲಿ ಆರಂಭವಾಗುತ್ತಿರುವುದು ಮತ್ತೊಂದು ಗಮನಾರ್ಹ ಸಂಗತಿಯಾಗಿದೆ.

ಮುಂದಿನ ನಾಲ್ಕರಿಂದ ಆರು ತಿಂಗಳಲ್ಲಿ ಈ ಅಂಗಾಂಗ ಮರು ಪಡೆಯುವಿಕೆ ಕೇಂದ್ರವು ಕಾರ್ಯಾರಂಭ ಮಾಡಲಿದೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ್ ಪ್ರಕಾಶ್ ಪಾಟೀಲ್ ಪತ್ರಿಕಾ ಪ್ರಕಟಣೆಯಲ್ಲಿ ಸೋಮವಾರ ಮಾಹಿತಿ ನೀಡಿದ್ದಾರೆ.

"ಕಸಿ ಮಾಡಲು ಅಂಗಾಂಗಗಳ ಖರೀದಿಯನ್ನು ಸುಗಮಗೊಳಿಸುವ ಮೂಲಕ ಅಂಗಾಂಗ ಮರುಪಡೆಯುವಿಕೆ ಕೇಂದ್ರವು ಆಸ್ಪತ್ರೆಗಳಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ" ಎಂದು ಸಚಿವರು ತಿಳಿಸಿದ್ದಾರೆ.

ಮೃತ ದಾನಿಗಳಿಂದ ಅಂಗಗಳನ್ನು ಸಂಗ್ರಹಿಸುವ ವಿಶೇಷ ಘಟಕವಾಗಿ ಕಾರ್ಯನಿರ್ವಹಿಸುತ್ತದೆ, ಈ ಕೇಂದ್ರದಲ್ಲಿ ಐಸಿಯು, ಶಸ್ತ್ರಚಿಕಿತ್ಸಾ ಕೊಠಡಿ, ಪ್ರಯೋಗಾಲಯ ಸೌಲಭ್ಯಗಳು ಮತ್ತು ವಿವಿಧ ಹಂತದ ತನಿಖಾ ಸಾಮರ್ಥ್ಯಗಳನ್ನು ಹೊಂದಿರುವ ಉದ್ದೇಶಿತ-ನಿರ್ಮಿತ ಸಮಗ್ರ ಸೇವೆ ದೊರೆಯಲಿದೆ.ದಕ್ಷಿಣ ಭಾರತದ ಅತಿ ದೊಡ್ಡ ಆಸ್ಪತ್ರೆ ಅಪಘಾತ ಮತ್ತು ತುರ್ತು ಆರೈಕೆ ಕೇಂದ್ರವನ್ನು ಹೊಂದಿರುವ ವಿಕ್ಟೋರಿಯಾ ಆಸ್ಪತ್ರೆ, ಗ್ಯಾಸ್ಟ್ರೋ ಎಂಟರಾಲಜಿ ಸಂಸ್ಥೆ ಮತ್ತು ಮೂತ್ರಶಾಸ್ತ್ರ ಅಂಗಾಂಗ ಕಸಿ ಸಂಸ್ಥೆ, ಮಿಂಟೋ ಆಸ್ಪತ್ರೆಯಲ್ಲಿ ಪ್ರಾದೇಶಿಕ ನೇತ್ರಶಾಸ್ತ್ರ ಸಂಸ್ಥೆ ಮತ್ತು ಸ್ಕಿನ್ ಬ್ಯಾಂಕ್ - ಹೀಗೆ ಎಲ್ಲವನ್ನೂ ಹೊಂದಿರುವ ಆಸ್ಪತ್ರೆಗಳ ಪೈಕಿ ನಮ್ಮ ವಿಕ್ಟೋರಿಯಾ ಆಸ್ಪತ್ರೆ ದಕ್ಷಿಣ ಭಾರತದ ಅತಿದೊಡ್ಡ ಆಸ್ಪತ್ರೆಗಳಲ್ಲಿ ಒಂದಾಗಿದೆ. ಇಲ್ಲಿ ಈಗ ನವೀಕೃತ ಕೇಂದ್ರ ಬರಲಿದೆ.

ಸಂಭಾವ್ಯ ದಾನಿಗಳ ಗುರುತಿಸುವಿಕೆ ಮತ್ತು ಸುರಕ್ಷಿತ ಅಂಗಾಂಗ ದಾನ ಪ್ರಕ್ರಿಯೆಗೆ ಕುಟುಂಬ ಸಮಾಲೋಚನೆ, ಉನ್ನತ ಮಟ್ಟದ ಐಸಿಯು ಆರೈಕೆ ಮತ್ತು ಕಾನೂನು ಕ್ರಮಗಳು ಅಗತ್ಯವಿರುತ್ತದೆ. ಈ ನಿಟ್ಟಿನಲ್ಲಿ ಸಮಗ್ರ ಅಭಿವೃದ್ಧಿಗೆ ಅನುದಾನ ಒದಗಿಸಲಾಗಿದೆ.

"ಈ ಯೋಜನೆಯು ಅತ್ಯಂತ ಅರ್ಥಪೂರ್ಣವಾಗಿದೆ. ಇದು ಬಡ ರೋಗಿಗಳಿಗೆ ಅನುಕೂಲವಾಗಲಿದೆ"ಎಂದು ಡಾ. ಪಾಟೀಲ್ ತಿಳಿಸಿದ್ದಾರೆ.

ಸಮಗ್ರ ಕೇಂದ್ರವಾಗಿ ಕಾರ್ಯ ನಿರ್ವಹಣೆ

"ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಸಮಗ್ರ ಅಂಗಾಂಗ ಮರುಪಡೆಯುವಿಕೆ ಕೇಂದ್ರವನ್ನು ಪ್ರಾರಂಭಿಸುವುದರಿಂದ ಅಂಗಾಂಗ ದಾನ ಕಾರ್ಯಕ್ರಮವನ್ನು ಹೆಚ್ಚಿಸಲು ನಮಗೆ ಅವಕಾಶ ಸಿಗುತ್ತದೆ. ಇದರಿಂದ ಬಡವರಿಗೆ ಅನುಕೂಲ ಕಲ್ಪಿಸಲಾಗುವುದು ಎಂದು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ದೀಪಕ್ ಹೇಳಿದ್ದಾರೆ.

"ಈ ಕೇಂದ್ರವು ಮೀಸಲಾದ ಸಿಬ್ಬಂದಿ, ಐಸಿಯು ಮತ್ತು ಹಾಸಿಗೆಗಳನ್ನು ಹೊಂದಿರುತ್ತದೆ. ಬೇಡಿಕೆ ಬಂದ ಕೂಡಲೇ ಕುಟುಂಬವು ಅನುಮೋದನೆ ನೀಡಿದ ನಂತರ ಐಸಿಯುಗಳಿಂದ ಮೀಸಲಾದ ಕೇಂದ್ರಕ್ಕೆ ಸ್ಥಳಾಂತರಿಸಲಾಗುತ್ತದೆ" ಎಂದು ಡಾ. ದೀಪಕ್ ಹೇಳಿದರು.

(2ನೇ ಪುಟ ನೋಡಿ)

## ದೆಹಲಿಯಲ್ಲಿ ನೂತನ ಕರ್ನಾಟಕ ಭವನ ಕಟ್ಟಡ; ಏ. 2 ರಂದು ಸಿಎಂ ಸಿದ್ದರಾಮಯ್ಯ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮಾ.31: ದೆಹಲಿಯ ಚಾಣಕ್ಯಪುರಿ ಪ್ರದೇಶದಲ್ಲಿರುವ 'ಕಾವೇರಿ' ಎಂಬ ಹೆಸರಿನ ಹೊಸ ಕರ್ನಾಟಕ ಭವನ ಕಟ್ಟಡವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ (ಏ.2) ಉದ್ಘಾಟಿಸಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

51 ವರ್ಷ ಹಳೆಯದಾದ ಮೂರು ಅಂತಸ್ತಿನ ಕಟ್ಟಡವನ್ನು ಕೆಡವಿ ಅದೇ ಜಾಗದಲ್ಲಿ ಅಂದಾಜು 82 ಕೋಟಿ ರೂ. ವೆಚ್ಚದಲ್ಲಿ ಐದು ಅಂತಸ್ತಿನ ನೂತನ ಕಟ್ಟಡ ಕಟ್ಟುವುದಕ್ಕೆ ಕರ್ನಾಟಕ ಸರ್ಕಾರ 2019ರಲ್ಲಿ ಅನುಮೋದನೆ ನೀಡಿತ್ತು. ಆಗ ಎಚ್‌ಡಿ ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದರು. ಇದೀಗ ಕಟ್ಟಡ ನಿರ್ಮಾಣದ ವೆಚ್ಚ 140 ಕೋಟಿ ರೂ.ಗೆ ಏರಿದೆ. 50 ವರ್ಷಕ್ಕೂ ಹಳೆಯದಾದ ಕರ್ನಾಟಕ ಭವನ ಕಟ್ಟಡವನ್ನು ನವದೆಹಲಿ ಮುನ್ಸಿಪಲ್ ಕೌನ್ಸಿಲ್ ಅಸುರಕ್ಷಿತ ಎಂದು ಘೋಷಿಸಿತ್ತು. ಉದ್ಘಾಟನಾ ಸಮಾರಂಭದಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್, ಪ್ರಹ್ಲಾದ್ ಜೋಶಿ, ಎಚ್‌ಡಿ ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ ಮತ್ತು ವಿ ಸೋಮಣ್ಣ ಭಾಗವಹಿಸಲಿದ್ದಾರೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ.ಕರ್ನಾಟಕದ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ರಾಜ್ಯ ಸಚಿವರಾದ ಎಚ್‌ಸಿ ಮಹದೇವಪ್ಪ ಮತ್ತು ಸತೀಶ್ ಜಾರಕಿಹೊಳಿ ಕೂಡ ಉಪಸ್ಥಿತರಿರುತ್ತಾರೆ.

## ಒಂದನೇ ಪುಟದಿಂದ

## ಪಡೆಯುವ ಕೇಂದ್ರ ಬೆಂಗಳೂರಿನಲ್ಲಿ ಸ್ಥಾಪನೆ

ಸಾಗಣೆಗೆ ಅನುಕೂಲವಾಗಲೆಂದು ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಹೆಲಿಪ್ಯಾಡ್ ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

**ಆಸ್ಪತ್ರೆಯ ವಿಶೇಷತೆಗಳು**

- ಬಡವರಿಗೆ ಮತ್ತು ಹೆಚ್ಚು ಅರ್ಹರಿಗೆ ಉಪಯೋಗ
- 70 ಐಸಿಯು ಹಾಸಿಗೆ ಲಭ್ಯ
- 1000 ಸಾಮಾನ್ಯ ಹಾಸಿಗೆ ಸೌಲಭ್ಯ
- 40 ಸಾಮೂಹಿಕ ಅಪಘಾತ ಚಿಕಿತ್ಸಾ ಹಾಸಿಗೆ ಸೌಲಭ್ಯ
- ಸಾಗಣೆಗೆ ಅನುಕೂಲವಾಗಲೆಂದು ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಹೆಲಿಪ್ಯಾಡ್ ನಿರ್ಮಿಸಲು ಕ್ರಮ
- ಸೌಲಭ್ಯ ಅಭಿವೃದ್ಧಿ, ಸ್ಥಾಪನೆಗೆ 1 ಕೋಟಿ ರೂ. ಅನುದಾನ ಮಂಜೂರು

# ದರ ಲೀ.ಗೆ 4 ರೂ. ಹೆಚ್ಚಳ

*ಹೋಮೋಜಿನೆಸ್ಡ್ ಟೋನ್ಡ್ ಹಾಲು ಅರ್ಧ ಲೀಟರ್ ಹಳೆ ದರ 24ರೂ. ಹೊಸ ದರ– 26 ರೂ.
*ಹೋಮೋಜಿನೆಸ್ಡ್ ಟೋನ್ಡ್ ಹಾಲು ಒಂದು ಲೀಟರ್ 45 ರೂ. ಹೊಸ ದರ ದರ 49 ರೂ.
*ಹೋಮೋಜಿನೆಸ್ಡ್ ಹಸುವಿನ ಹಾಲು ಅರ್ಧ ಲೀಟರ್ 26 ರೂ. ಹೊಸ ದರ 28 ರೂ.
*ಹೋಮೋಜಿನೆಸ್ಡ್ ಹಸುವಿನ ಹಾಲು ಒಂದು ಲೀಟರ್ ಹಿಂದಿನ ದರ 48 ರೂ. ಹೊಸ ದರ –52 ರೂ
*ಸ್ಪೆಷಲ್ ಹಾಲು ಅರ್ಧ ಲೀಟರ್ 27 ರೂ, ಹೊಸ ದರ 29ರೂ
*ಸ್ಪೆಷಲ್ ಹಾಲು ಒಂದು ಲೀಟರ್ 50 ರೂ, ಹೊಸ ದರ 54 ರೂ
*ಶುಭಂ ಹಾಲು ಅರ್ಧ ಲೀಟರ್ 27 ರೂ, ಹೊಸ ದರ 29 ರೂ.
*ಶುಭಂ ಹಾಲು ಒಂದು ಲೀಟರ್ 50 ರೂ, ಹೊಸ ದರ 54 ರೂ.
*ಸಮೃದ್ಧಿ ಹಾಲು ಅರ್ಧ ಲೀಟರ್ 28 ರೂ, ಹೊಸ ದರ 30 ರೂ.
*ಸಮೃದ್ಧಿ ಹಾಲು ಒಂದು ಲೀಟರ್ 56 ರೂ. ಹೊಸ ದರ 60 ರೂ.

# ದೇಶಾದ್ಯಂತ ಅಧಿಕ ಬಿಸಿಲು- ಮುನ್ನೆಚ್ಚರಿಕೆ

ಆನ್ ಲೈನ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ವಾಯವ್ಯ ಭಾರತದ ಪ್ರದೇಶಗಳಲ್ಲಿ ಬೇಸಿಗೆಯಲ್ಲಿ ಬಿಸಿಗಾಳಿ ಎರಡು ಪಟ್ಟು ಹೆಚ್ಚಾಗಿರುತ್ತದೆ ಎಂದು ಐಎಂಡಿ ಅಧಿಕಾರಿಯೊಬ್ಬರು ಈ ಹಿಂದೆಯೇ ಹೇಳಿದ್ದರು.

ರಾಜಸ್ಥಾನ, ಗುಜರಾತ್, ಹರಿಯಾಣ, ಪಂಜಾಬ್, ಮಧ್ಯಪ್ರದೇಶ, ಮಹಾರಾಷ್ಟ್ರ, ಉತ್ತರ ಪ್ರದೇಶ, ಬಿಹಾರ, ಜಾರ್ಖಂಡ್, ಪಶ್ಚಿಮ ಬಂಗಾಳ, ಒಡಿಶಾ, ಛತ್ತೀಸ್‌ಗಢ, ತೆಲಂಗಾಣ, ಆಂಧ್ರಪ್ರದೇಶ ಮತ್ತು ಕರ್ನಾಟಕ ಮತ್ತು ತಮಿಳುನಾಡಿನ ಉತ್ತರ ಭಾಗಗಳಲ್ಲಿ ಹೆಚ್ಚಿನ ಬಿಸಿಲು ದಾಖಲಾಗುವ ಸಾಧ್ಯತೆಯಿದೆ ಎನ್ನಲಾಗಿದೆ.

ಏಪ್ರಿಲ್‌ನಲ್ಲಿ ಭಾರತದ ಬಹುತೇಕ ಭಾಗಗಳು ಸಾಮಾನ್ಯಕ್ಕಿಂತ ಹೆಚ್ಚಿನ ತಾಪಮಾನಕ್ಕೆ ಸಾಕ್ಷಿಯಾಗಬಹುದು. ಆದಾಗ್ಯೂ ದಕ್ಷಿಣ ಮತ್ತು ವಾಯುವ್ಯ ಭಾಗದ ಕೆಲವು ಪ್ರದೇಶಗಳಲ್ಲಿ ಸಾಮಾನ್ಯ ತಾಪಮಾನ ಇರಬಹುದು.

ವಾಯುವ್ಯ ಮತ್ತು ಈಶಾನ್ಯದ ಕೆಲವು ಸ್ಥಳಗಳನ್ನು ಹೊರತುಪಡಿಸಿ, ದೇಶದ ಬಹುತೇಕ ಭಾಗಗಳಲ್ಲಿ ಕನಿಷ್ಠ ತಾಪಮಾನವು ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ ಎಂದು ಮೊಹಾಪಾತ್ರ ಹೇಳಿದ್ದಾರೆ. ದೇಶದಲ್ಲಿ ಅತೀವ ಬಿಸಿಲಿನ ಹಿನ್ನೆಲೆಯಲ್ಲಿ ಈ ಬೇಸಿಗೆಯಲ್ಲಿ ಶೇ. 9 ರಿಂದ 10 ರಷ್ಟು ಗರಿಷ್ಠ ವಿದ್ಯುತ್ ಬೇಡಿಕೆಗೆ ಭಾರತ ಸಿದ್ಧವಾಗಬೇಕು ಎಂದು ತಜ್ಞರು ಎಚ್ಚರಿಸಿದ್ದಾರೆ.

# ಕಪ್ಪು ಪಟ್ಟಿ ಧರಿಸಿ ರಂಜಾನ್ ಪ್ರಾರ್ಥನೆ

ಖಾನ್, "ಜನರು ಭಾನುವಾರ ಯುಗಾದಿಯನ್ನು ಆಚರಿಸಿದರು, ಮತ್ತು ಇಂದು ರಂಜಾನ್ ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ನಾನು ಎಲ್ಲರಿಗೂ ನನ್ನ ಶುಭಾಶಯಗಳನ್ನು ಕೋರುತ್ತೇನೆ. ಬಕ್ರೀದ್ ಜೊತೆಗೆ ಮುಸ್ಲಿಮರ ಪ್ರಮುಖ ಹಬ್ಬಗಳಲ್ಲಿ ಒಂದಾದ ರಂಜಾನ್ ಸಮಯದಲ್ಲಿ ನಾವು 30 ದಿನಗಳ ಕಾಲ ಉಪವಾಸ ಮಾಡುತ್ತೇವೆ. ಹಿಂದೂಗಳಿಗೆ, ಭಾನುವಾರ ಆಚರಿಸಲಾದ ಯುಗಾದಿಯು ಹೊಸ ವರ್ಷದ ಆರಂಭವನ್ನು ಸೂಚಿಸುವ ಮಹತ್ವದ ಹಬ್ಬವಾಗಿದೆ.

ನಮ್ಮ ಧಾರ್ಮಿಕ ಬೋಧಕರು ಪ್ರಾರ್ಥನೆಗಳನ್ನು ನಡೆಸಿದ ನಂತರ, ನಾವು ದುವಾ (ಆಶೀರ್ವಾದ)ವನ್ನು ನಿರ್ವಹಿಸಿದ್ದೇವೆ. ದುವಾ ಸಮಯದಲ್ಲಿ, ಮುಸ್ಲಿಮರು, ಹಿಂದೂಗಳು ಮತ್ತು ಕ್ರಿಶ್ಚಿಯನ್ನರು – ಎಲ್ಲಾ ಸಮುದಾಯಗಳು ಸಹೋದರ ಸಹೋದರಿಯರಂತೆ ಒಟ್ಟಿಗೆ ಬದುಕಲು ಒಗ್ಗಟ್ಟಿನಿಂದ ಪ್ರಾರ್ಥಿಸಿದೆ. ನಮ್ಮ ಧಾರ್ಮಿಕ ಮುಖ್ಯಸ್ಥರು ಸಹ ಅದಕ್ಕಾಗಿ ಪ್ರಾರ್ಥಿಸಿದರು ಎಂದು ಹೇಳಿದರು.

ಇದೇ ವೇಳೆ "ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿ ವರ್ಷ ಬೆಳಿಗ್ಗೆ ಪ್ರಾರ್ಥನೆಗಳಿಗೆ ಹಾಜರಾಗುತ್ತಾರೆ. ಆದರೆ, ಈ ಬಾರಿ ಅವರು ಅನಾರೋಗ್ಯದಿಂದ ಬಳಲುತ್ತಿದ್ದರಿಂದ ಸೇರಲು ಸಾಧ್ಯವಾಗಲಿಲ್ಲ. ಅವರು ಬೆಳಿಗ್ಗೆ 9.30 ಕ್ಕೆ ನನಗೆ ಕರೆ ಮಾಡಿ ಕಾರ್ಯಕ್ರಮದಲ್ಲಿ ಹಾಜರಾಗಲು ಸಾಧ್ಯವಾಗುತ್ತಿಲ್ಲ ಎಂದು ಬೇಸರ ಮಾಡಿಕೊಂಡರು. ಅಂತೆಯೇ ಎಲ್ಲಾ ಸಮುದಾಯದ ಸದಸ್ಯರಿಗೆ ತಮ್ಮ ಶುಭಾಶಯಗಳನ್ನು ತಿಳಿಸಿದರು. ನಮ್ಮ ಧಾರ್ಮಿಕ ಮುಖ್ಯಸ್ಥರು ಅವರ ಉತ್ತಮ ಆರೋಗ್ಯ ಮತ್ತು ದೀರ್ಘಾಯುಷ್ಯಕ್ಕಾಗಿ ವಿಶೇಷ ಪ್ರಾರ್ಥನೆಗಳನ್ನು ಸಲ್ಲಿಸಿದರು ಎಂದು ಹೇಳಿದರು.

ವಕ್ಫ್ ಮಸೂದೆಗೆ ವಿರೋಧ

ಅಂತೆಯೇ ಕೇಂದ್ರ ಸರ್ಕಾರದ ಪ್ರಸ್ತಾವಿತ ವಕ್ಫ್ ಮಸೂದೆಯ ವಿರುದ್ಧ ಶಾಂತಿಯುತ ಪ್ರತಿಭಟನೆಯಾಗಿ ದೇಶಾದ್ಯಂತ ಧಾರ್ಮಿಕ ಮುಖಂಡರು ಕಪ್ಪು ಪಟ್ಟಿಗಳನ್ನು ಧರಿಸಲು ಜನರಿಗೆ ಸೂಚನೆ ನೀಡಿದ್ದಾರೆ ಎಂದು ಸಚಿವರು ವಿವರಿಸಿದರು. "ವಕ್ಫ್ ಕಾಯ್ದೆ ಇಂದು ನಿನ್ನೆ ಜಾರಿಗೆ ಬಂದಿದ್ದಲ್ಲ; ಇದು ಬ್ರಿಟಿಷ್ ಆಳ್ವಿಕೆಯ ಕಾಲದಿಂದಲೂ ಬಂದಿದೆ. ಕೇಂದ್ರ ಸರ್ಕಾರ ಈ ಹೊಸ ಮಸೂದೆಯನ್ನು ಮಂಡಿಸಬಾರದು ಎಂಬುದು ನಮ್ಮ ಬೇಡಿಕೆಯಾಗಿದೆ. ನಮ್ಮ ರಾಜ್ಯ ಸರ್ಕಾರ ಈಗಾಗಲೇ ಒಂದು ನಿಲುವನ್ನು ತೆಗೆದುಕೊಂಡಿದೆ ಮತ್ತು ಕಳೆದ ವಿಧಾನಸಭಾ ಅಧಿವೇಶನದಲ್ಲಿ, ನಾವು ಅದನ್ನು ಬೆಂಬಲಿಸದಿರಲು ನಿರ್ಧರಿಸಿದ್ದೇವೆ" ಎಂದು ಅವರು ಹೇಳಿದರು.

ಪ್ರಮುಖ ಇಸ್ಲಾಮಿಕ್ ವಿದ್ವಾಂಸ ಮೌಲಾನಾ ಮೊಹಮ್ಮದ್ ಮಕ್ಸೂದ್ ಇಮ್ರಾನ್ ರಶಾದಿ ಕೂಡ ಈ ವಿಷಯದ ಬಗ್ಗೆ ಪ್ರತಿಕ್ರಿಯಿಸುತ್ತಾ, "ಮುಂದಿನ ಎರಡು ಮೂರು ದಿನಗಳಲ್ಲಿ, ವಕ್ಫ್ ತಿದ್ದುಪಡಿ ಮಸೂದೆಯನ್ನು ಸಂಸತ್ತಿನಲ್ಲಿ ಮಂಡಿಸಲಾಗುವುದು. ನಾವು ಯಾವುದೇ ಮೌಖಿಕ ಹೇಳಿಕೆಗಳನ್ನು ನೀಡುತ್ತಿಲ್ಲ, ಆದರೆ ಕಪ್ಪು ಪಟ್ಟಿಗಳನ್ನು ಧರಿಸುವ ಮೂಲಕ, ಈ ಬೆಳವಣಿಗೆ ಸರಿಯಲ್ಲ ಎಂಬ ಸಂದೇಶವನ್ನು ನಾವು ಕಳುಹಿಸುತ್ತಿದ್ದೇವೆ. ಸಂವಿಧಾನವು ನಮಗೆ ಪ್ರತಿಭಟಿಸುವ ಹಕ್ಕನ್ನು ನೀಡುತ್ತದೆ ಮತ್ತು ವಕ್ಫ್ ತಿದ್ದುಪಡಿ ಮಸೂದೆ ಸ್ವೀಕಾರಾರ್ಹವಲ್ಲ ಎಂದು ವ್ಯಕ್ತಪಡಿಸಲು ನಾವು ಈ ಹಕ್ಕನ್ನು ಬಳಸುತ್ತಿದ್ದೇವೆ" ಎಂದು ಜಮೀರ್ ಹೇಳಿದರು.

ವಿವಿಧ ಸಮುದಾಯಗಳ ನಡುವೆ ಏಕತೆ ಮತ್ತು ಪರಸ್ಪರ ಗೌರವದ ಮಹತ್ವವನ್ನು ಅವರು ಒತ್ತಿ ಹೇಳಿದರು. "ರಂಜಾನ್ ಹಬ್ಬವು ಬಡವರು ಮತ್ತು ಶ್ರೀಮಂತರನ್ನು ಒಟ್ಟುಗೂಡಿಸುತ್ತದೆ, ಶ್ರೀಮಂತರು ಅಗತ್ಯವಿರುವವರಿಗೆ ಸಹಾಯ ಮಾಡುವುದನ್ನು ಖಚಿತಪಡಿಸುತ್ತದೆ. ನಿನ್ನೆಯಷ್ಟೇ ಯುಗಾದಿಯನ್ನು ಆಚರಿಸಲಾಯಿತು, ಮತ್ತು ಇಂದು ರಂಜಾನ್ ಹಬ್ಬ. ಭಾರತವು ಕೋಮು ಸೌಹಾರ್ದತೆಗೆ ಉತ್ತಮ ಉದಾಹರಣೆಯಾಗಿದೆ. ಈ ಸಂದೇಶವು ಜಗತ್ತನ್ನು ತಲುಪಬೇಕು. ಹಿಂದೂಗಳು ವಿಶೇಷ ಸಂದರ್ಭಗಳಲ್ಲಿ ಮುಸ್ಲಿಮರಿಗೆ ಮಾಡುವಂತೆಯೇ ಮುಸ್ಲಿಮರು ಹಿಂದೂಗಳನ್ನು ಸ್ವಾಗತಿಸುತ್ತಾರೆ ಮತ್ತು ಅವರ ಶುಭಾಶಯಗಳನ್ನು ತಿಳಿಸುತ್ತಾರೆ. ಸದ್ಭಾವನೆ ಮತ್ತು ಏಕತೆಯ ಸಂಕೇತವಾಗಿ ಪೊಲೀಸ್ ಸಿಬ್ಬಂದಿ, ನೆರೆಹೊರೆಯವರು ಮತ್ತು ಆಸ್ಪತ್ರೆ ಸಿಬ್ಬಂದಿಗೆ ಉಡುಗೊರೆಗಳನ್ನು ನೀಡಲು ನಾನು ನನ್ನ ಮುಸ್ಲಿಂ ಸಹೋದರರರನ್ನು ಪ್ರೋತ್ಸಾಹಿಸಿದ್ದೇನೆ ಎಂದರು.

ಏತನ್ಮಧ್ಯೆ, ಕರ್ನಾಟಕ ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ಮಂಗಳೂರಿನ ಬಾವುಟಗದ್ದೆ ಈದ್ಗಾ ಮಸೀದಿಯಲ್ಲಿ ಬೆಳಿಗ್ಗೆ ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು. ಆದರೆ ಅವರು ಕಪ್ಪು ಪಟ್ಟಿ ಧರಿಸಲಿಲ್ಲ.

# ಬ್ಯಾಂಕ್ ಬ್ಯಾಲೆನ್ಸ್ ನಿಯಮ ಬದಲು

ಸ್ಲ್ಯಾಬ್‌ಗಳು ಮತ್ತು ಕಡಿತಗಳನ್ನು ಪರಿಚಯಿಸಿದೆ. ಅವುಗಳನ್ನು ಈದೀಗ ಜಾರಿಗೆ ತರಲಾಗುತ್ತಿದ್ದು, ಹೊಸ ತೆರಿಗೆ ಪದ್ಧತಿಯಡಿಯಲ್ಲಿ ವರ್ಷಕ್ಕೆ 12 ಲಕ್ಷ ರೂ.ವರೆಗೆ ಗಳಿಸುವವರು ಆದಾಯ ತೆರಿಗೆ ಪಾವತಿಸುವುದರಿಂದ ವಿನಾಯಿತಿ ಪಡೆಯುತ್ತಾರೆ. ಅದಕ್ಕೂ ಹೆಚ್ಚು ಸಂಬಳ ಪಡೆಯುವವರು 75,000 ರೂ.ಗಳ ಪ್ರಯೋಜನ ಪಡೆಯುತ್ತಾರೆ, ಇದರಿಂದಾಗಿ 12.75 ಲಕ್ಷ ರೂ.ವರೆಗಿನ ವಾರ್ಷಿಕ ಆದಾಯವು ತೆರಿಗೆ ಮುಕ್ತವಾಗಿರುತ್ತದೆ.

ಯುಪಿಐ ನಿಯಮಗಳು:

ಏ.1 ರಿಂದ ನಿಷ್ಕ್ರಿಯ ಮೊಬೈಲ್ ಸಂಖ್ಯೆಗಳಿಂದ ಯುಪಿಐ ವಹಿವಾಟು ನಡೆಸಲಾಗುವುದಿಲ್ಲ. ಭದ್ರತೆಯನ್ನು ಹೆಚ್ಚಿಸಲು, ಬ್ಯಾಂಕ್‌ಗಳು ಮತ್ತು ಫೋನ್ ಪೇ ಮತ್ತು ಗೂಗಲ್ ಪೇನಂತಹ ಥರ್ಡ್ ಪಾರ್ಟಿ ಅಪ್ಲಿಕೇಶನ್‌ಗಳಲ್ಲಿ ದೀರ್ಘಕಾಲದವರೆಗೆ ಬಳಕೆಯಾಗದೆ ಉಳಿದಿರುವ ಮೊಬೈಲ್ ಸಂಖ್ಯೆಗಳಿಗೆ ಲಿಂಕ್ ಮಾಡಲಾದ ಖಾತೆಗಳನ್ನು ಹಂತಹಂತವಾಗಿ ರದ್ದುಗೊಳಿಸಲು ಸೂಚಿಸಲಾಗಿದೆ. ಹೀಗಾಗಿ ಏ.1ರ ಮೊದಲು ಮೊಬೈಲ್ ಸಂಖ್ಯೆಗಳನ್ನು ನವೀಕರಿಸಬೇಕು ಎಂದು ಭಾರತೀಯ ರಾಷ್ಟ್ರೀಯ ಪಾವತಿ ನಿಗಮ ಆದೇಶಿಸಿದೆ.

ಪಿಂಚಣಿ ಯೋಜನೆ:

ಮತ್ತೊಂದು ಮಹತ್ವದ ಆರ್ಥಿಕ ಬದಲಾವಣೆಯೆಂದರೆ ಹಳೆಯ ಪಿಂಚಣಿ ವ್ಯವಸ್ಥೆಯನ್ನು ಬದಲಾಯಿಸುವ ಏಕೀಕೃತ ಪಿಂಚಣಿ ಯೋಜನೆ. 2024ರ ಆಗಸ್ಟ್ನಲ್ಲಿ ಪರಿಚಯಿಸಲಾದ ಯುಪಿಎಸ್, ಏ.1 ರಿಂದ ಅಧಿಕೃತವಾಗಿ ಜಾರಿಗೆ ಬರಲಿದೆ. ಈ ಬದಲಾವಣೆಯಿಂದ ಸುಮಾರು 23 ಲಕ್ಷ ಕೇಂದ್ರ ಸರ್ಕಾರಿ ನೌಕರರ ಮೇಲೆ ಪರಿಣಾಮ ಬೀರಲಿದೆ. ಕನಿಷ್ಠ 25 ವರ್ಷಗಳ ಸೇವೆಯನ್ನು ಹೊಂದಿರುವವರು ತಮ್ಮ ಕೊನೆಯ 12 ತಿಂಗಳ ಸರಾಸರಿ ಮೂಲ ವೇತನದ ಶೇ.50 ರಷ್ಟಕ್ಕೆ ಸಮಾನವಾದ ಪಿಂಚಣಿಯನ್ನು ಪಡೆಯಲಿದ್ದಾರೆ.

ಕನಿಷ್ಠ ಬ್ಯಾಲೆನ್ಸ್:

ಬ್ಯಾಂಕಿಂಗ್ ವಲಯದಲ್ಲಿ, ಎಸ್‌ಬಿಐ, ಪಂಜಾಬ್ ನ್ಯಾಷನಲ್ ಬ್ಯಾಂಕ್ ಮತ್ತು ಕೆನರಾದಂತಹ ಪ್ರಮುಖ ಬ್ಯಾಂಕ್‌ಗಳು ಕನಿಷ್ಠ ಬ್ಯಾಲೆನ್ಸ್ ನಿಯಮಗಳನ್ನು ನವೀಕರಿಸುತ್ತಿದ್ದು, ಪರಿಷ್ಕೃತ ಕನಿಷ್ಠ ಬ್ಯಾಲೆನ್ಸ್ ಕಾಯ್ದುಕೊಳ್ಳಲು ಸಾಧ್ಯವಾಗದಿದ್ದರೆ ಗ್ರಾಹಕರು ಹೊಸ ಬ್ಯಾಂಕಿಂಗ್ ಮಾರ್ಗಸೂಚಿಗಳ ಪ್ರಕಾರ ದಂಡ ಪಾವತಿಸಬೇಕಾಗುತ್ತದೆ.

## ಸಂವಿಧಾನದ ಉಲ್ಲಂಘನೆ: ಸಾಗರ್ ಖಂಡ್ರೆ

ತಿಳಿಸಿದ್ದಾರೆ. ಬಜೆಟ್ ಮೇಲಿನ ಚರ್ಚೆಯಲ್ಲಿ ಕೆಲವು ಪ್ರಮುಖ ಸಚಿವಾಲಯಗಳನ್ನು ಹೊರಗಿಡಲಾಗುತ್ತಿದೆ, ಇದರಿಂದ ಹಣಕಾಸು ಮೇಲ್ವಿಚಾರಣೆ ಮತ್ತು ಪಾರದರ್ಶಕತೆ ತೀವ್ರವಾಗಿ ಕುಗ್ಗುತ್ತಿದೆ. ತುರ್ತು ಮತ್ತು ಜನರಿಗೆ ಉಪಯುಕ್ತವಾದ ವಿಷಯಗಳ ಬಗ್ಗೆ ಚರ್ಚೆ ನಡೆಸಲು ಇರುವ ನಿಯಮ 193ನ್ನು ಸಮರ್ಪಕವಾಗಿ ಬಳಸಲು ಅವಕಾಶ ನೀಡುತ್ತಿಲ್ಲ. ಸರ್ಕಾರ ತನ್ನ ಹೊಣೆಗಾರಿಕೆಯಿಂದ ನುಣುಚಿಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ್ದಾರೆ. ಸಂಸದೀಯ ಸ್ಥಾಯಿ ಸಮಿತಿಗಳ ಸ್ವಾಯತ್ತತೆಯನ್ನು ಸಹ ಕಸಿದು ಕೊಳ್ಳಲಾಗುತ್ತಿದೆ, ಮತ್ತು ಕೆಲವು ಸಂದರ್ಭಗಳಲ್ಲಿ ಸ್ಪೀಕರ್ ಕಚೇರಿಯಿಂದಲೇ ವರದಿಗಳ ತಿದ್ದುಪಡಿಯ ಸೂಚನೆ ನೀಡಲಾಗುತ್ತಿದೆ. ಶೂನ್ಯ ವೇಳೆಯಲ್ಲಿ ತುರ್ತು ವಿಷಯಗಳನ್ನು ಪ್ರಸ್ತಾಪಿಸಲು ಸಂಸದರಿಗೆ ನೀಡಲಾಗುತ್ತಿದ್ದ ಅವಕಾಶವನ್ನು ನಿರ್ಬಂಧಿಸಲಾಗುತ್ತಿದೆ ಇದು ಸರ್ಕಾರದ ದಮನಕಾರಿ ಪ್ರವೃತ್ತಿ ಎಂದು ಸಾಗರ್ ಖಂಡ್ರೆ ಬಣ್ಣಿಸಿದ್ದಾರೆ. ಖಾಸಗಿ ಸದಸ್ಯರ ಮಸೂದೆಗಳು ಮತ್ತು ನಿರ್ಣಯಗಳಿಗೆ ಗಣನೀಯ ಹಿನ್ನಡೆ–ಯಾಗುತ್ತಿದ್ದು, ಚರ್ಚೆಗಾಗಿ ಬೇಕಾದಷ್ಟು ಸಮಯ ಲಭಿಸುತ್ತಿಲ್ಲ. ಸಂಸದ್ ಟಿವಿಯಲ್ಲಿ ಪ್ರತಿಪಕ್ಷ ನಾಯಕರು ಮತ್ತು ಸದಸ್ಯರು ಮಾತನಾಡುವಾಗ ಅವರತ್ತ ಕ್ಯಾಮರಾ ಕೇಂದ್ರೀಕರಿಸದೆ, ಸಭಾಧ್ಯಕ್ಷರು ಮತ್ತು ಸದನದ ಇತರ ದೃಶ್ಯಗಳನ್ನು ತೋರಿಸಲಾಗುತ್ತದೆ ಇದು ಸರ್ವಥಾ ಸಮರ್ಥನೀಯವಲ್ಲ ಎಂದು ಹೇಳಿದ್ದಾರೆ. ಸಲಹಾ ಸಮಿತಿ ಸಭೆಗಳನ್ನು ನಿಯಮಿತವಾಗಿ ಕರೆಯದೆ, ನಿರ್ಲಕ್ಷಿಸಲಾಗುತ್ತಿದೆ. ಈ ಬೆಳವಣಿಗೆಳಿಂದ ನಮ್ಮ ಸಂಸದೀಯ ವ್ಯವಸ್ಥೆಯ ಮೂಲಭೂತ ತತ್ವಗಳಿಗೆ ಧಕ್ಕೆಯಾಗುತ್ತಿದ್ದು, ತಕ್ಷಣ ಸರಿಪಡಿಸುವ ಅಗತ್ಯವಿದೆ ಎಂದು ಒತ್ತಾಯಿಸಿದ್ದಾರೆ. ನ್ಯಾಯಸಮ್ಮತತೆ, ಪಾರದರ್ಶಕತೆ ಮತ್ತು ಸಂವಿಧಾನದ ನಿಯಮಗಳ ಅನುಸರಣೆಯನ್ನು ಮರುಸ್ಥಾಪಿಸಲು ತಕ್ಷಣವೇ ಕ್ರಮ ಕೈಗೊಳ್ಳಬೇಕು. ಪ್ರತಿಯೊಬ್ಬ ಜನಪ್ರತಿನಿಧಿಗೂ ಸದನದಲ್ಲಿ ಧ್ವನಿ ಎತ್ತಲು ಅವಕಾಶ ನೀಡಬೇಕು ಎಂದು ಸಾಗರ್ ಖಂಡ್ರೆ ಆಗ್ರಹಿಸಿದ್ದಾರೆ.

# ಮೂವರು ಬಾಲಕರ ಸಾವು

ಅಷ್ಟರೊಳಗೆ ಮೂವರು ನೀರಲ್ಲಿ ಮುಳುಗಿ ಸಾವನ್ನಪ್ಪಿದರು. ಸಾವನ್ನಪ್ಪಿದವರಲ್ಲಿ ಸೋಮಶೇಖರ ದೇವರಮನಿ ಮೃತದೇಹ ರವಿವಾರ ಸಂಜೆ ಪತ್ತೆಯಾಗಿದ್ದು, ಇನ್ನಿಬ್ಬರ ಮೃತದೇಹಗಳ ಶೋಧ ಕಾರ್ಯ ಸೋಮವಾರವೂ ಮುಂದುವರೆದಿದೆ. ಮಧ್ಯಾಹ್ನ 4 ಗಂಟೆವರೆಗೂ ಮೃತದೇಹ ಪತ್ತೆಯಾಗಿರಲಿಲ್ಲ. ಅಗ್ನಿಶಾಮಕದಳದ ಅಧಿಕಾರಿ ಪರಶುರಾಮ ಲಮಾಣಿ ನೇತೃತ್ವದ ತಂಡ ಇಬ್ಬರು ಬಾಲಕರ ಮೃತದೇಹ ಪತ್ತೆ ಕಾರ್ಯ ನಡೆಸಿದ್ದು, ಇಲಾಳ ಗ್ರಾಮದ ಯುವಕರು ಸಹ ಪತ್ತೆ ಕಾರ್ಯದಲ್ಲಿ ತೊಡಗಿದ್ದಾರೆ. ಘಟನಾ ಸ್ಥಳಕ್ಕೆ ಹೆಚ್ಚುವರಿ ಎಸ್.ಪಿ.ಮಹಾಂತೇಶ ದಿಡ್ಡಿ, ಡಿ.ವೈ.ಎಸ್.ಪಿ. ಗಜಾನನ ಸುತಾರ, ಗ್ರಾಮೀಣ ಸಿಪಿಐ ಏಚ್.ಆರ್.ಪಾಟೀಲ, ಪಿ.ಎಸ್.ಐ ಆರ್.ಡಿ.ಲಮಾಣಿ ಭೇಟಿ ನೀಡಿದ್ದರು.

# ಮಂಡನೆಗೆ ಕೇಂದ್ರದ ತಯಾರಿ

ಮತ್ತು ನಿಯಂತ್ರಣ:ಹಿಂದಿನ ಕಾನೂನು (1995): ವಕ್ಫ್ ಆಸ್ತಿಗಳ ಸರ್ವೆಯನ್ನು ರಾಜ್ಯ ಸರ್ಕಾರವು ನೇಮಿಸಿದ ಸರ್ವೆ ಆಯುಕ್ತರು ನಡೆಸುತ್ತಿದ್ದರು. ಈ ಪ್ರಕ್ರಿಯೆಯಲ್ಲಿ ಸರ್ಕಾರದ ನೇರ ಹಸ್ತಕ್ಷೇಪ ಕಡಿಮೆ ಇತ್ತು.ಹೊಸ ತಿದ್ದುಪಡಿ (2024): ಈ ಜವಾಬ್ದಾರಿಯನ್ನು ಜಿಲ್ಲಾಧಿಕಾರಿಗಳಿಗೆ ವರ್ಗಾಯಿಸಲಾಗಿದೆ. ಜಿಲ್ಲಾಧಿಕಾರಿಗಳ ಮೇಲ್ವಿಚಾರಣೆಯಲ್ಲಿ ರಾಜ್ಯದ ಕಂದಾಯ ಕಾನೂನುಗಳಿಗೆ ಅನುಗುಣವಾಗಿ ಸರ್ವೆ ನಡೆಯಲಿದೆ. ಇದರಿಂದ ಸರ್ಕಾರಕ್ಕೆ ವಕ್ಫ್ ಆಸ್ತಿಗಳ ಮೇಲೆ ಹೆಚ್ಚಿನ ನಿಯಂತ್ರಣ ಸಿಗಲಿದೆ.2. ವಕ್ಫ್ ಘೋಷಣೆಗೆ ಷರತ್ತುಗಳು:

ಹಿಂದಿನ ಕಾನೂನು: ವಕ್ಫ್ ಘೋಷಿಸಲು ಯಾವುದೇ ನಿರ್ದಿಷ್ಟ ಅವಧಿಯ ಷರತ್ತು ಇರಲಿಲ್ಲ. ಯಾರಾದರೂ ಮುಸ್ಲಿಂ ವ್ಯಕ್ತಿ ತಮ್ಮ ಆಸ್ತಿಯನ್ನು ವಕ್ಫ್ ಆಗಿ ಘೋಷಿಸಬಹುದಿತ್ತು.ಹೊಸ ತಿದ್ದುಪಡಿ: ಇಸ್ಲಾಂ ಧರ್ಮವನ್ನು ಕನಿಷ್ಠ ಐದು ವರ್ಷಗಳ ಕಾಲ ಪಾಲಿಸಿದ ವ್ಯಕ್ತಿಯೊಬ್ಬರಿಗೆ ಮಾತ್ರ ವಕ್ಫ್ ಘೋಷಿಸುವ ಅಧಿಕಾರವನ್ನು ನೀಡಲಾಗಿದೆ. ಇದರಿಂದ ದುರುಪಯೋಗವನ್ನು ತಡೆಗಟ್ಟುವ ಉದ್ದೇಶವಿದೆ.3. ಮಹಿಳೆಯರಿಗೆ ಆಸ್ತಿ ಹಕ್ಕು:

ಹಿಂದಿನ ಕಾನೂನು: ಮಹಿಳೆಯರಿಗೆ ವಕ್ಫ್ ಆಸ್ತಿಯಲ್ಲಿ ಹಕ್ಕುಗಳನ್ನು ಸ್ಪಷ್ಟವಾಗಿ ಖಾತ್ರಿಪಡಿಸುವ ಯಾವುದೇ ನಿರ್ದಿಷ್ಟ ಉಲ್ಲೇಖ ಇರಲಿಲ್ಲ.


ಹೊಸ ತಿದ್ದುಪಡಿ: ಮಹಿಳೆಯರಿಗೆ ವಕ್ಫ್ ಆಸ್ತಿಯಲ್ಲಿ ಸಮಾನ ಹಕ್ಕುಗಳನ್ನು ಖಾತ್ರಿಪಡಿಸುವ ನಿಬಂಧನೆ ಸೇರಿಸಲಾಗಿದೆ. ಇದು ಲಿಂಗ ಸಮಾನತೆಯತ್ತ ಒಂದು ಹೆಜ್ಜೆ ಎಂದು ಪರಿಗಣಿಸಲಾಗಿದೆ.4. ವಕ್ಫ್ ಮಂಡಳಿಯ ರಚನೆ:

ಹಿಂದಿನ ಕಾನೂನು: ಕೇಂದ್ರ ಮತ್ತು ರಾಜ್ಯ ವಕ್ಫ್ ಮಂಡಳಿಗಳಲ್ಲಿ ಮಹಿಳೆಯರು ಅಥವಾ ಮುಸ್ಲಿಮೇತರ ಸದಸ್ಯರನ್ನು ಸೇರಿಸುವ ಕಡ್ಡಾಯ ನಿಯಮ ಇರಲಿಲ್ಲ.ಹೊಸ ತಿದ್ದುಪಡಿ: ಕೇಂದ್ರ ವಕ್ಫ್ ಮಂಡಳಿಯಲ್ಲಿ ಕನಿಷ್ಠ ಇಬ್ಬರು ಮಹಿಳೆಯರು ಮತ್ತು ಇಬ್ಬರು ಮುಸ್ಲಿಮೇತರ ಸದಸ್ಯರನ್ನು ನೇಮಿಸುವುದು ಕಡ್ಡಾಯವಾಗಿದೆ. ಇದೇ ರೀತಿ ರಾಜ್ಯ ವಕ್ಫ್ ಮಂಡಳಿಗಳಲ್ಲಿಯೂ ಈ ಬದಲಾವಣೆಯನ್ನು ತರಲಾಗಿದೆ.5. ಲೆಕ್ಕಪರಿಶೋಧನೆ (ಆಡಿಟ್):

ಹಿಂದಿನ ಕಾನೂನು: ವಕ್ಫ್ ಮಂಡಳಿಗಳ ಖಾತೆಗಳ ಲೆಕ್ಕಪರಿಶೋಧನೆಯನ್ನು ಮಂಡಳಿಯೇ ನೇಮಿಸಿದ ಲೆಕ್ಕಪರಿಶೋಧಕರು ಮಾಡುತ್ತಿದ್ದರು. ರಾಜ್ಯ ಸರ್ಕಾರಕ್ಕೂ ಆಡಿಟ್ ಮಾಡುವ ಅವಕಾಶ ಇತ್ತು.

ಹೊಸ ತಿದ್ದುಪಡಿ: ರಾಜ್ಯ ಸರ್ಕಾರವು ರಚಿಸುವ ಲೆಕ್ಕಪರಿಶೋಧಕರ ಸಮಿತಿಯೇ ಆಡಿಟ್ ನಡೆಸಬೇಕು ಎಂದು ತಿದ್ದುಪಡಿ ತರಲಾಗಿದೆ. ಇದರಿಂದ ಸರ್ಕಾರದ ಮೇಲ್ವಿಚಾರಣೆ ಹೆಚ್ಚಾಗಲಿದೆ.6. ಆಸ್ತಿಯ ನೋಂದಣಿ ಮತ್ತು ಪಾರದರ್ಶಕತೆ:ಹಿಂದಿನ ಕಾನೂನು: ವಕ್ಫ್ ಆಸ್ತಿಗಳ ನೋಂದಣಿ ಮತ್ತು ವಿವರಗಳ ಸಲ್ಲಿಕೆಗೆ ಕಡ್ಡಾಯ ಸಮಯಮಿತಿ ಇರಲಿಲ್ಲ.ಹೊಸ ತಿದ್ದುಪಡಿ: ಎಲ್ಲ ವಕ್ಫ್ ಆಸ್ತಿಗಳನ್ನು ಕಾಯಿದೆಯಡಿ ನೋಂದಾಯಿಸುವುದು ಕಡ್ಡಾಯವಾಗಿದ್ದು, ಆರು ತಿಂಗಳೊಳಗೆ ವಿವರಗಳನ್ನು ಸಲ್ಲಿಸಬೇಕು. ಪ್ರತಿ ಐದು ವರ್ಷಗಳಿಗೊಮ್ಮೆ ಸರ್ವೆ ನಡೆಸುವ ನಿಯಮವೂ ಜಾರಿಗೆ ಬರಲಿದೆ.

## ನೌಕರರ ಸಮಸ್ಯೆಗಳಆಗೆ ಧ್ವನಿಯಾಗಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.31:ಸರಕಾರಿ ನೌಕರರ ಸಮಸ್ಯೆಗಳಿಗೆ ಸರಕಾರಿ ನೌಕರರ ಸಂಘದ ಪದಾಧಿಕಾರಿಗಳು ಧ್ವನಿಯಾಗಬೇಕು ಎಂದು ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ ಹೇಳಿದರು.

ಪಟ್ಟಣದ ತಾಲೂಕು ಸರಕಾರಿ ನೌಕರರ ಸಂಘದ ಕಚೇರಿಯಲ್ಲಿ ತಾಲೂಕು ಸರಕಾರಿ ನೌಕರರ ಸಂಘದ ನೂತನ ಸಂಘಟನಾ ಕಾರ್ಯದರ್ಶಿಯಾಗಿ ನೇಮಕಗೊಂಡ ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಮಾರುತಿ ಜಾಬನೂರ ಅವರಿಗೆ ನೇಮಕಾತಿ ಪತ್ರ ವಿತರಿಸಿ ಅವರು ಮಾತನಾಡಿದರು.

ನ್ಯಾಯಯುತ ಏನೇ ಬೇಡಿಕೆಗಳು, ಸಮಸ್ಯೆ ಕಂಡು ಬಂದಲ್ಲಿ ನೌಕರರ ನೆರವಿಗೆ ತಕ್ಷಣ ಪದಾಧಿಕಾರಿಗಳು ಧಾವಿಸಬೇಕು ಎಂದು ಸಲಹೆ ನೀಡಿದರು. ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ಮಾತನಾಡಿ, ತಾಲೂಕಿನಲ್ಲಿ ಎಲ್ಲ ಸರಕಾರಿ ನೌಕರರನ್ನು ವಿಶ್ವಾಸಕ್ಕೆ ಪಡೆದು ಸಂಘವನ್ನು ಬಲಪಡಿಸುವ ಪ್ರಯತ್ನ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್, ಸಹಾಯಕ ಕೃಷಿ ನಿರ್ದೇಶಕ ಪಿ.ಎಂ. ಮಲ್ಲಿಕಾರ್ಜುನ, ತಾಲೂಕು ಸರಕಾರಿ ನೌಕರರ ಸಂಘದ ಕಾರ್ಯದರ್ಶಿ ರಾಜಪ್ಪ ಪಾಟೀಲ್ ಸೇರಿದಂತೆ ಹಲವರು ಇದ್ದರು.

## ಏ.3 ರಂದು ಅಂಬೇಡ್ಕರ್ ಜಯಂತಿ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.31: ಇಲ್ಲಿಯ ತಹಸೀಲ್ ಕಚೇರಿಯಲ್ಲಿ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೆಯ ಜಯಂತ್ಯುತ್ಸವ ಅಂಗವಾಗಿ ಏ.3ರಂದು ಗುರುವಾರ ಮಧ್ಯಾಹ್ನ 12 ಗಂಟೆಗೆ ಪೂರ್ವಭಾವಿ ಸಭೆ ಕರೆಯಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ



ನಿರ್ದೇಶಕ ಸತೀಶಕುಮಾರ ಸಂಗನ್ ತಿಳಿಸಿದ್ದಾರೆ.

ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ ಅವರ ಅಧ್ಯಕ್ಷತೆಯಲ್ಲಿ ಸಭೆ ಜರುಗಲಿದ್ದು ತಾಲೂಕಿನ ಎಲ್ಲ ಇಲಾಖೆಗಳ ಅನುಷ್ಠಾನ ಅಧಿಕಾರಿಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಎಲ್ಲ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಅಮುಲ್ಯವಾದ ಸಲಹೆ ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸುವಂತೆ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಅಲ್ಲಮಪ್ರಭು ಶರಣ ಸಮೂಹಕ್ಕೆ ಮಾರ್ಗದರ್ಶಕರಾಗಿದ್ದರು: ಪವಾಡಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಶರಣ ಸಮೂಹಕ್ಕೆ ಮಾರ್ಗದರ್ಶಕರಾಗಿ ಅಲ್ಲಮಪ್ರಭು ದೇವರು ಶಿವಪಥವನ್ನು ಸಾರಿದ ರೀತಿ ಆಧ್ಯಾತ್ಮಿಕ ಕ್ಷೇತ್ರದಲ್ಲಿಯೇ ಅನುಪಮವಾಗಿದೆ ಎಂದು ಭಾಲ್ಕಿ ಉಪವಿಭಾಗದ ಡಿವೈಎಸ್‌ಪಿ ಶಿವಾನಂದ ಪವಾಡಶೆಟ್ಟಿ ಅಭಿಪ್ರಾಯ ಪಟ್ಟರು.

ತಾಲೂಕಿನ ಸಂಗಮ ಗ್ರಾಮದ ನೀಲಾಂಬಿಕಾ ಆಶ್ರಮದಲ್ಲಿ ನಡೆದ ಅಲ್ಲಮಪ್ರಭು ದೇವರ ಜಯಂತ್ಯುತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಭಕ್ತವತ್ಸಲರಾಗಿರುವ ಪ್ರಭುದೇವರು ಬಸವಣ್ಣ, ಸಿದ್ದರಾಮ, ಮುಕ್ತಾಯಕ್ಕ ಸೇರಿದಂತೆ ಅನೇಕರಿಗೆ ಭಕ್ತಿಯ ಮಾರ್ಗ ತೋರಿದ್ದರು ಎಂದರು.

ಸಾನಿಧ್ಯವಹಿಸಿ ಮಾತನಾಡಿದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು, ಬಸವಣ್ಣನವರದ್ದು ಆಯಸ್ಕಾಂತದಂತೆ ಆಕರ್ಷಿಸುವ ಗುಣ. ಅಲ್ಲಮ, ಸಿದ್ದರಾಮ ಬಸವಣ್ಣನ ಕೆಲಸ ಕಾರ್ಯಗಳಿಂದ ಆಕರ್ಷಿತರಾಗಿಯೇ ಕಲ್ಯಾಣಕ್ಕೆ ಬಂದಿದ್ದು, ಕಲ್ಯಾಣ ನಾಡಿನ ಜನಸಾಮಾನ್ಯರಿಗೆ ಜಂಗಮ ದಾಸೋಹ ಹಾಗೂ ಗುರುವಿನ ಮಹತ್ವ ಸಾರಲು ಬಸವಣ್ಣ ಅಲ್ಲಮಪ್ರಭು ದೇವರ ಅನುಗ್ರಹ ಪಡೆಯುವಂತೆ ಶೂನ್ಯ ಸಂಪಾದನೆಯಲ್ಲಿ ವಿವರಿಸಲಾಗಿದೆ. ನಾವೆಲ್ಲರೂ ಬಸವಾದಿ ಶರಣ ವಚನಗಳಿಂದ ಬದುಕು ಕಟ್ಟಿಕೊಳ್ಳಬೇಕಿದೆ ಎಂದರು. ನಿವೃತ್ತ ಉಪನ್ಯಾಸಕ ಶಿವರುದ್ರಯ್ಯಸ್ವಾಮಿ ಅಲ್ಲಮಪ್ರಭು ದೇವರ ಕುರಿತು ಉಪನ್ಯಾಸ ಮಂಡಿಸಿದರು. ಔರಾದ್ ಕಸಾಪ ಅಧ್ಯಕ್ಷ ಬಿ.ಎಂ ಅಮರವಾಡಿ ಅವರಿಗೆ ಸನ್ಮಾನಿಸಲಾಯಿತು. ಶಾಲಾ ಮಕ್ಕಳಿಂದ ನಡೆದ ವಚನ ನೃತ್ಯಗಳು ಎಲ್ಲರ ಮನಸೂರೆಗೊಂಡವು.

ಈ ಸಂದರ್ಭದಲ್ಲಿ ನೀಲಾಂಬಿಕಾ ಆಶ್ರಮದ ಪೂಜ್ಯ ಡಾ. ಮಹಾದೇವಮ್ಮ ತಾಯಿ, ನೀಲಾಂಬಿಕಾ ತಾಯಿ, ದೇವಮ್ಮ ತಾಯಿ, ವಿಶ್ವನಾಥ ಬಿರಾದಾರ, ಮಲ್ಲಿಕಾರ್ಜುನ ದಾನಾ, ವೈಜಿನಾಥ ರಾಜ–ಗೀರೆ, ಸಿದ್ದಯ್ಯ ಕಾವಡಿಮಠ, ಓಂಪ್ರಕಾಶ ಬಿರಾದಾರ, ರಾಜಕುಮಾರ ಬಿರಾದಾರ, ಸುರೇಶ ಸೋಲಪುರೆ, ಸಂಗಮೇಶ ಮುರ್ಕೆ, ನಾಗಯ್ಯ ಸ್ವಾಮಿ, ನೀಲಕಂಠ ಬಿರಾದಾರ, ಪ್ರೇಮಲಾ ಸ್ವಾಮಿ, ಅನೀಲಕುಮಾರ ಹೊಳಸಮುದ್ರ, ಡಾ. ಸಂಜೀವಕುಮಾರ ಜುಮ್ಮಾ, ಸಂಜುಕುಮಾರ ಮೇಂಗಾ ಸೇರಿದಂತೆ ಇನ್ನಿತರರಿದ್ದರು.

"ಅಲ್ಲಮಪ್ರಭು ಶರಣ ಪರಂಪರೆಯ ಮಹಾಪ್ರಭೆ, ಭಕ್ತನಾದವನು ಸ್ವತಃ ಶಿವನಾಗಬೇಕೆಂಬ ಅವರ ವಿಚಾರ ಉತ್ಕೃಷ್ಟವಾದದ್ದು. ಶೂನ್ಯ ಸಿಂಹಾಸನ ಸ್ಥಾನಕ್ಕೆ ಪ್ರಭುದೇವರ ಬರುವಿಕೆಗೆ ಸುಮಾರು 12 ವರ್ಷಗಳ ಕಾಲ ಸ್ವತಃ ಬಸವಣ್ಣ ಕಾದಿದ್ದು ಅಲ್ಲಮನ ವ್ಯಕ್ತಿತ್ವ ಪರಿಚಯಿಸುತ್ತದೆ."

**–ಪೂಜ್ಯ ಗುರುಬಸವ ಪಟ್ಟದ್ದೇವರು,**
**ಪೀಠಾಧಿಪತಿಗಳು ಹಿರೇಮಠ ಸಂಸ್ಥಾನ ಭಾಲ್ಕಿ**

# ವಿಮಾ ಪಾಲಿಸಿ ಪರಿಹಾರ ಪಾವತಿಸಲು ಇನ್ಸೂರೆನ್ಸ್ ಕಂಪನಿಗೆ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮಾ.31: ಫಿರ್ಯಾದುದಾರರಿಗೆ ವಿಮಾ ಪಾಲಿಸಿ ಪರಿಹಾರ ಪಾವತಿಸಲು ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಇನ್ಸೂರೆನ್ಸ್ ಕಂಪನಿಗೆ ಆದೇಶ ನೀಡಿದೆ.

ಗ್ರಾಹಕ ಫಿರ್ಯಾದು ಸಂಖ್ಯೆ: 32/2024 ರಲ್ಲಿನ ಅಂತಿಮ ತೀರ್ಪಿನ ಸಾರಾಂಶದನ್ವಯ ಫಿರ್ಯಾದುದಾರರಾದ ಪಾರ್ವತಿ ಗಂಡ ದಿ:ಯಂಕಪ್ಪ ಸಾ:ವರನಖೇಡ್, ಹುಲಿಹೈದರ್, ತಾ:ಕನಕಗಿರಿ ಇವರ ಗಂಡನಾದ ದಿ.ಯಂಕಪ್ಪ ಇವರು ತಮ್ಮ ಜೀವಿತ ಕಾಲದಲ್ಲಿ ದಿ: 2–10–2023 ರಂದು ಎದುರುದಾರರಾದ ಹೆಚ್.ಡಿ.ಎಫ್.ಸಿ ಸ್ಟಾ??ಂರ್ಡ್ ಲೈಫ್ ಇನ್ಸೂರೆನ್ಸ್ ಕಂಪನಿ ಲಿಂ. ಮುಂಬೈ (HDFC Standad Life Insurance Company Ltd., Mumbai) ಇವರಲ್ಲಿ ಅರ್ಧ ವಾರ್ಷಿಕ ಪ್ರಿಮಿಯಂ ರೂ. 1,50,000 ಗಳನ್ನು ಪಾವತಿಸಿ ಜೀವ ವಿಮಾ ಪಾಲಸಿಯನ್ನು ಪಡೆದುಕೊಂಡಿದ್ದರು. ಆದರೆ ಪಾಲಸಿದಾರರಾದ ಯಂಕಪ್ಪ ಇವರು ದಿನಾಂಕ:21–01–2024 ರಂದು ಹೃದಯಘಾತದಿಂದ ನಿಧನ ಹೊಂದಿರುತ್ತಾರೆ. ನಾಮಿನಿಯಾದ ಪಾಲಸಿದಾರರ ಪತ್ನಿ ಪಾರ್ವತಿ ಎದುರುದಾರ ಜೀವ ವಿಮಾ ಕಂಪನಿಯಲ್ಲಿ ಜೀವ ವಿಮಾ ಪಾಲಸಿಯನ್ನು ಪಡೆದ ವಿಷಯ ತಿಳಿದು ಕ್ಲೇಮ್ ಫಾರ್ಂ ಭರ್ತಿ ಮಾಡಿ, ಎಲ್ಲಾ ದಾಖಲಾತಿಗಳನ್ನು ಎದುರುದಾರರ ಕಂಪನಿಗೆ ನೀಡಿ ವಿಮಾ ಪರಿಹಾರ ಮೊತ್ತ ರೂ. 43,36,636 ಗಳನ್ನು ಪಾವತಿಸುವಂತೆ ವಿನಂತಿಸಿಕೊಂಡಿರುತ್ತಾರೆ.

ಎದುರುದಾರ ವಿಮಾ ಕಂಪನಿಯವರು ಈ ಕ್ಲೇಮ್‌ನ್ನು ಸ್ವೀಕರಿಸಿ ದೂರುದಾರಳಾದ ಪಾರ್ವತಿ ಗಂಡ

ದಿ:ಯಂಕಪ್ಪ ಅವರು ಈ ಪಾಲಸಿಯನ್ನು ಪಡೆಯುವ ಸಂದರ್ಭದಲ್ಲಿ ಅನಾರೋಗ್ಯ ಪೀಡಿತರಾಗಿದ್ದರು ಮತ್ತು ಮಧ್ಯವಸ್ಯನಿಯಾಗಿದ್ದರೆಂದು ತಿಳಿದುಬಂದಿರುವುದೆಂಬ ಕಾರಣಕ್ಕೆ ಪಾಲಸಿಯ ಕ್ಲೇಮ್‌ನ್ನು ತಿರಸ್ಕಾರ ಮಾಡಿರುತ್ತಾರೆ. ದೂರುದಾರರಿಗೆ ಎದುರುದಾರರು ವಿಮಾ ಪಾಲಸಿಯ ಪರಿಹಾರದ ಮೊತ್ತವನ್ನು ನೀಡದೇ ನಿರ್ಲಕ್ಷ ತೋರಿ ಸೇವಾ ನ್ಯೂನತೆ ಎಸಗಿದ್ದರಿಂದ ದೂರುದಾರಳು ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಅಯೋಗಕ್ಕೆ ವಿಮಾ ಕಂಪನಿ ವಿರುದ್ಧ ಪರಿಹಾರವನ್ನು ಕೋರಿ ದೂರನ್ನು ಸಲ್ಲಿಸಿರುತ್ತಾರೆ.

ಕೊಪ್ಪಳ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ದೂರನ್ನು ದಾಖಲಿಸಿಕೊಂಡ ನಂತರ ಜಿಲ್ಲಾ ಆಯೋಗದ ಅಧ್ಯಕ್ಷರಾದ ಜಿ.ಇ.ಸೌಭಾಗ್ಯಲಕ್ಷ್ಮೀ ಹಾಗೂ ಸದಸ್ಯರಾದ ರಾಜು. ಎನ್.ಮೇತ್ರಿ ಅವರು ವಾದ ಪ್ರತಿವಾದಗಳನ್ನು ಆಲಿಸಿ, ಎದುರುದಾರರಿಂದ ಸೇವಾ ನ್ಯೂನತೆ ಉಂಟಾಗಿರುವುದು ಸಾಬೀತಾಗಿರುವುದರಿಂದ ದೂರುದಾರರಿಗೆ ಎದುರುದಾರರು ಜೀವ ವಿಮಾ ಪಾಲಸಿ ಒಟ್ಟು ಮೊತ್ತ ರೂ. 43,36,636 ಪರಿಹಾರಗಳಿಗೆ ವಾರ್ಷಿಕ ಶೇ.6ರ ಬಡ್ಡಿ ಸಮೇತ ದೂರಿನ ದಿನಾಂಕದಿಂದ ಪಾವತಿಯಾಗುವವರೆಗೆ ನೀಡುವಂತೆ ಆದೇಶಿಸಿರುತ್ತಾರೆ. ಹಾಗೂ ದೂರುದಾರರಿಗೆ ಉಂಟಾದ ಮಾನಸಿಕ ಯಾತನೆಗಾಗಿ ರೂ. 5,000 ಗಳನ್ನು ಹಾಗೂ ದೂರಿನ ಖರ್ಚು ರೂ. 5,000 ಗಳನ್ನು ಈ ಅದೇಶದ ದಿನಾಂಕದಿಂದ 45 ದಿನಗಳ ಒಳಗಾಗಿ ಎದುರುದಾರರು ದೂರುದಾರರಿಗೆ ಪಾವತಿಸುವಂತೆ ಆದೇಶವನ್ನು ನೀಡಿರುತ್ತಾರೆ ಎಂದು ಕೊಪ್ಪಳ ಜಿಲ್ಲಾ ಗ್ರಾಹಕರ ಆಯೋಗದ ಸಹಾಯಕ ರಿಜಿಸ್ಟ್ರಾರ ಹಾಗೂ ಸಹಾಯಕ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಡಗರ ಸಂಭ್ರಮದಿಂದ ಆಚರಿಸಿದ ರಂಜಾನ್ ಹಬ್ಬ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮಾ 31 ರಂಜಾನ್ ಜಾನ ಹಬ್ಬದ ನಿಮಿತ್ತವಾಗಿ ಒಂದು ತಿಂಗಳ ಪರಿಯಂತರ (ರೂಜಾ) ಇದ್ದು ಕೊನೆಯ ದಿನದಂದು ಚಂದ್ರಮಾ ನೋಡಿ ಮರುದಿವಸ ರಂಜಾನ ಹಬ್ಬವನ್ನು ಅತಿ ಸಡಗರ ಸಂಭ್ರಮದಿಂದ ಹಾಗೂ ವೈಭವದಿಂದ ಆಚರಿಸಿದರು. ಅಂದು ನಗರದ ಹೊರ ಭಾಗದ ಈದ್ಗಾದ ವಿಶಾಲವಾದ ಮೈದಾನದಲ್ಲಿ ಅನೇಕ ಮುಸ್ಲಿಂ ಬಾಂಧವರು ಹೊಸ ಬಟ್ಟೆ ಧರಿಸಿ ಸುಗಂಧ ದ್ರವ್ಯಗಳನ್ನು ಲೇಪಿಸುವದರೊಂದಿಗೆ ಸಾಮೂಹಿಕ ವಿಶೇಷ ನಮಾಜ್ (ಪ್ರಾರ್ಥನೆ) ಮಾಡುವುದರೊಂದಿಗೆ ನಂತರ ಪರಸ್ಪರ ಆಲಿಂಗಿಸಿ ಕೊಂಡು ಹಬ್ಬದ ಶುಭಾಶಯಗಳನ್ನು ಕೋರುವುದು . ಅಲ್ಲದೆ ಅನೇಕ ಬಾಂಧವರನ್ನು ಬಂದು ಮಿತ್ರರನ್ನು ಮನೆಗೆ ಆಹ್ವಾನಿಸಿ ವಿಶೇಷವಾದ ಆಹಾರ ಅಂದರೆ ಗುಲ್ ಗುಲೆ. ಸುರುಕುಂಬ್ ಸೇವಿಸುವ ಮೂಲಕ ಡಾ. ಖದ್ದಿರೋದ್ದಿನ್ ಹಾಗೂ ಅವರ ಕುಟುಂಬದವರು ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುವ ಮೂಲಕ ಐಕ್ಯತೆ ಭಾವನೆ ಮೂಡಿಸುವ ಪವಿತ್ರ ಹಬ್ಬದ ಇದ್ದಾಗಿದೆ ಎಂದರು. ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯರಾದ ಶಂಕರ ಜಿ. ಕರಣೆ. ವಿಶ್ವನಾಥ ಮುಕ್ತಾ. ಶಿವರಾಜ ಬಾಲಕಿಲೆ. ನಾಗರಾಜ್ ಪಾಟೀಲ. ಪತ್ರಕರ್ತರಾದ ಮಾರ್ಥಂಡ್ ಜೋಶಿ. ಡಿ. ಕೆ. ಪ್ರಹ್ಲಾದ. ನಾಗಪ್ಪಾ ನಿಣ್ಣೆ. ರಾಜೇಂದ್ರ ಗೋಖಲೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.




ಬಸವಕಲ್ಯಾಣ :- ಇಲ್ಲಿನ ತಿಪುರಾಂತಿನ ಶರಣ ಉರಿಲಿಂಗ ಪೆದ್ದಿ ಶಾಖಾ ಮಠದಲ್ಲಿ ಸೌಹಾರ್ದ ಇಫ್ತಾರ್ ಕೂಟ ಹಮ್ಮಿಕೊಳ್ಳಲಾಯಿತ್ತು. ಮಠದ ಪೂಜ್ಯರಾದ ಶ್ರೀ ಪಂಚಾಕ್ಷರಿ ಮಹಾಸ್ವಾಮಿಜಿ. ಮಹಾಲಿಂಗ ದೇವರು ಸಮ್ಮುಖದಲ್ಲಿ ನಡೆಯಿತು. ಈ ಸಂದರ್ಭದಲ್ಲಿ ಅಕ್ಷರ ದಾಸೋಹ ಅಧಿಕಾರಿಗಳಾದ ಸಂಜೀವಕುಮಾರ ಕಾಂಗೆ. ಹುಲಸೂರಿನ ತಹಸೀಲ್ದಾರ ಶಿವಾನಂದ ಮೇತ್ರೆಣಟಿಜಜಜಿಟಿಜಜ. ಸಂಜೀವಕುಮಾರ ಜಾದವ್. ಡಾ. ಬಾಳ ಕೃಷ್ಣ ರಾಠೋಡ. ಖಲೀಲ್ ಅಹ್ಮದ್ ಗೊಬ್ಬರೆ. ಅಬ್ದುಲ್ ಖಾದರ. ದೀಲಿಪ ಶಿಂಥೆ. ಸೂಹೆಲ್. ಡಾ. ಜಭಿವೂಲಾ ಖಾನ್. ಅಂಕಣಕಾರರಾದ ನಾಗಪ್ಪಾ ನಿಣ್ಣೆ. ಹಾಗೂ ರಾಜಕುಮಾರ ಮದಕಟಿ. ರೇವಣಸಿದ್ದ ಡೊಂಗರೆ. ಫಯಾಜ್ ಖುರೇಷಿ. ಮಸ್ತಾನ್ ಸರ್. ಸೂರ್ಯಕಾಂತ.ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಅಲ್ಲಮ-ಬಸವಣ್ಣ ಭಾರತದ ಬಹುದೊಡ್ಡ ತತ್ವಜ್ಞಾನಿಗಳು: ಡಾ. ಶ್ರೀಕಾಂತ ಚೌಹಾಣ್



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: - ಮಾ 31 ಅಲ್ಲಮಪ್ರಭು ಮತ್ತು ಬಸವಣ್ಣನವರು ಭಾರತೀಯ ದಾರ್ಶನಿಕ ಪರಂಪರೆಯ ಬಹುದೊಡ್ಡ ತತ್ವಜ್ಞಾನಿಗಳು. ಆಧುನಿಕ ಕಾಲಘಟ್ಟದಲ್ಲಿ ಎದುರಾಗುತ್ತಿರುವ ಹಲವು ಬಿಕ್ಕಟ್ಟುಗಳನ್ನು ವಚನಗಳ ಸರಿಯಾದ ಅಧ್ಯಯನದಿಂದ ದಾಟಬಹುದು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಹಾಯಕ ಪ್ರಾಧ್ಯಾಪಕ ಡಾ ಶ್ರೀಕಾಂತ ಚೌಹಾಣ್ ಹೇಳಿದರು.

ಡಾ. ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದ ಸಹಯೋಗದಲ್ಲಿ ಇಲ್ಲಿನ ಅಲ್ಲಮಪ್ರಭು ಪಿಯು ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಅಲ್ಲಮನ ವಚನಗಳ ವಿವಿಧ ಆಯಾಮಗಳು ಕುರಿತ ಉಪನ್ಯಾಸ ಸಮಾರಂಭ ಉದ್ಘಾಟಿಸಿ ಮಾತನಾಡಿ ಸಾಮಾಜಿಕ ಪರಿವರ್ತನೆಯ ಅಂಶಗಳು ಒಳಗೊಂಡ ವಚನ ಸಾಹಿತ್ಯ ಮಾನವೀಯತೆ ಮತ್ತು ಸಮಾನತೆಯ ಆಶಯದಿಂದಾಗಿ ಸಾವಿರಾರು ವರ್ಷಗಳ ಕಾಲ ಮತ್ತೇ ಮತ್ತೇ ಅನುಸಂಧಾನಕ್ಕೆ ಒಳಪಡುತ್ತದೆ ಎಂದರು.

ಶ್ರೀ ಬಸವೇಶ್ವರ ಕಾಲೇಜು ಅಧ್ಯಾಪಕರಾದ ಡಾ. ಭೀಮಾಶಂಕರ ಬಿರಾದಾರ ಅವರು ಅಲ್ಲಮನ ವಚನಗಳ ತಾತ್ವಿಕ ಆಯಾಮ ಕುರಿತು ಮಾತನಾಡಿ , ಅಲ್ಲಮ ಕನ್ನಡ ಸಾಂಸ್ಕೃತಿಕ ಜಗತ್ತಿನ ಬಹುದೊಡ್ಡ ದಾರ್ಶನಿಕ ಪ್ರತಿಭೆ. ಕವಿತ್ವ ಹಾಗೂ ದಾರ್ಶನಿಕತೆ ಮೇಳೈಸಿಕೊಂಡ ಮಹಾಪ್ರತಿಭೆ. ಹಲವು ರೂಪಕ ಹಾಗೂ ಪ್ರತಿಮೆಗಳಿಂದಲೇ ಲೋಕದ ಅರಿವನ್ನು ವಿಸ್ತರಿಸಿದ್ದಾನೆ. ಅವನ ಭಾಷಿಕ ಶಕ್ತಿ ಅಗಾಧ ಎಂದರು.

ಮಹಾ ಸಂದೇಹಿಯಾದ ಅಲ್ಲಮನಲ್ಲಿ ಎಲ್ಲವೂ ಒರೆಗೆ ಹಚ್ಚುವ ಗುಣವಿತ್ತು. ನಿತ್ಯ ಸಂಚಾರಿ ಅಲ್ಲಮ ಭಾರತೀಯ ಪಂಥಗಳಾದ ಬೌದ್ಧ, ನಾಥ, ಶೈವ, ಸೂಫಿ ಈ ಎಲ್ಲ ಜ್ಞಾನ ಪರಂಪರೆ ಅರಿತರೂ ಯಾವೊಂದು ಚೌಕಟ್ಟಿಗೂ ಸಿಗದೇ ನಿತ್ಯ ಬಯಲಿನ ಜಾಯಮಾನ ಅವನಲ್ಲಿತ್ತು ಎಂದರು.

ಪ್ರತಿಷ್ಠಾನದ ಅಧ್ಯಕ್ಷ ಎಸ್. ಜಿ. ಹುಡೇದ ಮಾತನಾಡಿ, ಅಲ್ಲಮನ ವಚನಗಳು ಜೀವನದ ಬೆರಗು ಬಯಲುಗೊಳಿಸುತ್ತವೆ. ಅವರು ಜ್ಞಾನ ಹಾಗೂ ಅರಿವಿನ ಕಾರಣದಿಂದ ಅನುಭವ ಮಂಟಪದ ಅಧ್ಯಕ್ಷರಾಗಿದ್ದರು. ಎಲ್ಲ ಶರಣರ ವಿಚಾರಗಳನ್ನು ಪರೀಕ್ಷಿಸುವ ಮತ್ತು ವಿಮರ್ಶಿಸುವ ಸಾಮರ್ಥ್ಯ ಹೊಂದಿದ್ದರು ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಚಾರ್ಯರಾದ ಚಂದ್ರಕಾಂತ ಅಕ್ಕಣ್ಣ ಮಾತನಾಡಿ, ನಾಡಿನ ಶ್ರೇಷ್ಠ ದಾರ್ಶನಿಕ ಅಲ್ಲಮ ಇಡೀ ವಿಶ್ವದ ಎಲ್ಲ ತತ್ವಜ್ಞಾನಿಗಳ ಸಾಲಿನಲ್ಲಿ ನಿಲ್ಲುತ್ತಾನೆ. ಶರಣ ಚಳುವಳಿಯ ನೇತಾರ ಬಸವಣ್ಣನವರಾದರೆ ಅದನ್ನು ತಾತ್ವಿಕ ಗಟ್ಟಿಗೊಳಿಸಿದ್ದು ಅಲ್ಲಮ. ವಚನಕಾರರ ಸೈದ್ಧಾಂತಿಕ ಬದ್ಧತೆಗೆ ಅಲ್ಲಮ ಇಂಬು ಕೊಟ್ಟಿದ್ದ ಎಂದರು.

ಈ ಸಂದರ್ಭದಲ್ಲಿ ಹುಲಸೂರ ಸರ್ಕಾರಿ ಪ್ರೌಢಶಾಲೆ ಮುಖ್ಯೋಪಾಧ್ಯಾಯ ಸೂರ್ಯಕಾಂತ ಪಾಟೀಲ, ಲಕ್ಷ್ಮೀಬಾಯಿ ಪಾಟೀಲ, ನಾಗಪ್ಪ ನಿಣ್ಣೆ, ರೇವಣಸಿದ್ದಪ್ಪ ಡೋಂಗ-ರೆ, ಬಸವಣ್ಣೆಪ್ಪ ನೆಲೋಗಿ, ಅಂಬಾರಾಯ ಸೈದಾಪುರೆ, ಕುಪೇಂದ್ರ ಬಿರಾದಾರ, ಶಿವಪುತ್ರ ಸಂಗನಬಸವ, ಮಲ್ಲಿಕಾರ್ಜುನ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಶಾಲಿವಾನ ಕಾಕನಾಳೆ ಸ್ವಾಗತಿಸಿದರು. ಪ್ರತಿಷ್ಠಾನದ ಕಾರ್ಯದರ್ಶಿ ದೇವೇಂದ್ರ ಬರಗಾಲೆ ನಿರೂಪಿಸಿದರು. ರಾಜಶೇಖರ ಬಿರಾದಾರ ವಂದಿಸಿದರು.

# ನರೇಗಾ ಕೂಲಿ 21 ರೂ. ಹೆಚ್ಚಳ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಗ್ರಾಮೀಣ ಭಾಗದ ಕೂಲಿ ಕೆಲಸ ಮಾಡುವ ಕೂಲಿಕಾರರ ದಿನ ಕೂಲಿ ದರವನ್ನು ಹೆಚ್ಚಳ ಮಾಡಿ ಸರಕಾರ ಆದೇಶವನ್ನು ಹೊರಡಿಸಿದೆ ಎಂದು ತಾಲ್ಲೂಕು ಪಂಚಾಯತ ಕಾರ್ಯನಿರ್ವಹಕ ಅಧಿಕಾರಿ ದಿಪೀಕಾ ನಾಯಕ್ ತಿಳಿಸಿದರು.

ನರೇಗಾ ಯೋಜನೆಯಡಿ ಈಗಿರುವ 349 ರೂ ಕೂಲಿ ನೀಡಲಾಗುತ್ತಿದ್ದು, ಇದನ್ನು 370ಕ್ಕೆ ಹೆಚ್ಚಿಸಿ, 2025-2026ನೇ ಆರ್ಥಿಕ ವರ್ಷ ಏಪ್ರಿಲ್ 1 ರಿಂದ ಜಾರಿಗೊಳಿಸಲು ಸರಕಾರ ನಿರ್ದೇಶನ ನೀಡಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದರು.

# ವಿಧಾನ ಪರಿಷತ್ತಿನ ವಿವಿಧ ಹುದ್ದೆಗಳಿಗೆ ಏ.15ಕ್ಕೆ ಕನ್ನಡ ಪರೀಕ್ಷೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.29- ಕರ್ನಾಟಕ ವಿಧಾನ ಪರಿಷತ್ತಿನ ವಿವಿಧ ಹುದ್ದೆಗಳ ಭರ್ತಿಗಾಗಿ ಕಡ್ಡಾಯ ಕನ್ನಡ ಪರೀಕ್ಷೆಯನ್ನು ಏ.15ರಂದು ನಡೆಸಲಾಗುತ್ತದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಹೇಳಿದ್ದಾರೆ.

ಪರಿಷತ್ತಿನ ವಿವಿಧ ಹುದ್ದೆಗಳ ನೇಮಕಾತಿಗಾಗಿ ಮಾ.22ರಿಂದ 25ರವರೆಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿದ್ದು, ಅದಕ್ಕೆ ಹಾಜರಾದವರಿಗೆ ಮಾತ್ರ ಈ ಪರೀಕ್ಷೆ ಬರೆಯಲು ಅವಕಾಶ ನೀಡಲಾಗಿದೆ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ವಿನಾಯಿತಿ: 10ನೇ ತರಗತಿಯಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಕಲಿತವರು, ಕನ್ನಡ ಮಾಧ್ಯಮದಲ್ಲಿ ಓದಿದವರಿಗೆ ಈ ಪರೀಕ್ಷೆ ಯಿಂದ ವಿನಾಯಿತಿ ಇದೆ. ಅಲ್ಲದೆ, ಕೆಇಎ ನಡೆಸಿದ ಕನ್ನಡ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೂ ವಿನಾಯಿತಿ ಇರುತ್ತದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

# ಗೃಹಬಳಕೆ ವಸ್ತುಗಳ ದರ ಕಡಿಮೆ ಮಾಡಿ ಪುಣ್ಯ ಕಟ್ಟಿಕೊಳ್ಳಿ : ಸಿ.ಟಿ.ರವಿ



ಮಲ್ಲಮ್ಮ ನುಡಿ ವಾರ್ತೆ

ಚಿಕ್ಕಮಗಳೂರು, ಮಾ.29- ರಾಜ್ಯಸರ್ಕಾರ ಆಸ್ತಿತ್ವಕ್ಕೆ ಬಂದ ನಂತರ ಎಲ್ಲಾ ದರಗಳು ಹೆಚ್ಚಾಗುತ್ತಿವೆಯೇ ಹೊರತು ಇಳಿಮುಖ ಕಂಡೇ ಇಲ್ಲ, ಹಾಲಿನ ದರ, ವಿದ್ಯುತ್ ಶುಲ್ಕ ಹೆಚ್ಚಳವಾಗಿದೆ. ಏರಿಸಿ ಪಾಪ ಕಟ್ಟಿಕೊಳ್ಳುವುದಕ್ಕಿಂತ ಇಳಿಸಿ ಪುಣ್ಯ ಕಟ್ಟಿಕೊಳ್ಳಿ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಹೇಳಿದರು.

ತಾಲ್ಲೂಕು ಅತ್ತಿಗುಂಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಸುಮಾರು 1 ಕೋಟಿ ರೂ. ವೆಚ್ಚದಲ್ಲಿ ಆಡಳಿತ ಕಟ್ಟಡದ ನಿರ್ಮಾಣದ ಕಾರ್ಯಕ್ಕೆ ಮುಂದಾಗಿರುವುದನ್ನು ಶ್ಲಾಘಿಸಿದರು. ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಬೆಳ್ಳಿಪ್ರಕಾಶ್ ಅವರು 5 ಲಕ್ಷ ರೂ. ಅನುದಾನವನ್ನು ಎರಡು ಕಂತುಗಳಲ್ಲಿ ಕೊಡುವುದಾಗಿ ಭರವಸೆ ನೀಡಿದ್ದಾರೆ ಎಂದರು.

ಈ ಕಟ್ಟಡ ಜನರಿಗೆ ಉಪಯೋಗವಾಗುವ ನಿಟ್ಟಿನಲ್ಲಿ ಆಡಳಿತ ಕಚೇರಿ ಮತ್ತು ಬ್ಯಾಂಕಿನ ವಹಿವಾಟುಗಳನ್ನು ಮುಂದುವರೆಸಲು ಉತ್ತಮ ರೀತಿಯಲ್ಲಿ ಕಾಮಗಾರಿ ಕೈಗೊಂಡು ಗುಣಮಟ್ಟದ ಕಟ್ಟಡ ನಿರ್ಮಾಣವಾಗಲಿ ಎಂದು ಶುಭ ಹಾರೈಸಿದರು. ಐಡಿ ಪೀಠ ಪಂಚಾಯಿತಿಗೆ ನೀಡಿದ್ದ ಅನುದಾನ ವಾಪಾಸ್ ಪಡೆದಿರುವುದರಿಂದ ಕಾಮಗಾರಿ ಸ್ಥಗಿತವಾಗಿದೆ. ಇದು ಕಾರ್ಯರೂಪಕ್ಕೆ ಬಂದಿದ್ದರೆ ಪ್ರವಾಸೋದ್ಯಮಕ್ಕೆ ಹೆಚ್ಚು ಒತ್ತು ಸಿಗುತ್ತಿತ್ತು.

ಪ್ರವಾಸೋದ್ಯಮದಿಂದಲೇ ಈ ಭಾಗದಲ್ಲಿ ನೂರಾರು ಜನರು ಬದುಕು ಕಟ್ಟಿಕೊಳ್ಳಲು ನೆರವಾಗಿದ್ದು, 2019-20 ರಲ್ಲಿ ಹಾಕಿದ್ದ ಈ ಅನುದಾನ ವಾಪಾಸ್ ಹೋಗಿರುವುದನ್ನು ಮರಳಿ ನೀಡಬೇಕೆಂದು ಆಗ್ರಹಿಸಿದರು.

ವಿದ್ಯುತ್ ಕಣ್ಣುಮುಚ್ಚಾಲೆ ಬಗ್ಗೆ ಸಾರ್ವಜನಿಕರು ದೂರು ಸಲ್ಲಿಸಿದ್ದು, ಜಿಲ್ಲಾ ಉಸ್ತುವಾರಿ ಸಚಿವರೇ ಇಂಧನ ಸಚಿವರಾಗಿರುವುದರಿಂದ ಬೇಸಿಗೆಯಲ್ಲಿ ಗುಣಮಟ್ಟದ ವಿದ್ಯುತ್ ಸರಬರಾಜು ಮಾಡಬೇಕು ಎಂದು ಒತ್ತಾಯಿಸಿದ ಅವರು, ಮಳೆಗಾಲದಲ್ಲಿ ಮರ ಬಿದ್ದಿದೆ ಎಂಬ ಕಾರಣ, ಬೇಸಿಗೆಯಲ್ಲಿ ಓಲೇಜ್, ಪವರ್ ಸಾಕಾಗುವುದಿಲ್ಲ ಎಂಬ ಸಬೂಬು ಹೇಳಲಾಗುತ್ತಿದೆ. ವಿದ್ಯುತ್ ಬಿಲ್ ದರ ಮಾತ್ರ ಏರಿಕೆಯಾಗುತ್ತಿದೆ ಎಂದು ಆರೋಪಿಸಿದರು. ಈ ಭಾಗಕ್ಕೆ ಸುಸಜ್ಜಿತ ಬಸ್ ಕೊಡಬೇಕು, ತಳ್ಳುಮಾಡಲ್ ಬಸ್ ನೀಡಿರುವುದು ಜನರ ಬದುಕಿನ ಜೊತೆ ಚೆಲ್ಲಾಟವಾಡಿದಂತಾಗುತ್ತದೆ. ಅತ್ತಿಗುಂಡಿ ಶಾಲೆಯ ಶೌಚಾಲಯ ದುರಸ್ಥಿಯನ್ನು ಮೇಂಅಂತ್ಯದೊಳಗೆ ಪೂರ್ಣಗೊಳಿಸಬೇಕೆಂದು ಒತ್ತಾಯಿಸಿದರು. ಮಾಜಿ ಜಿ.ಪಂ ಸದಸ್ಯೆ ಜೆಸಂತ ಅನಿಲ್ ಕುಮಾರ್ ಮಾತನಾಡಿ, ಬಹು ವರ್ಷಗಳ ಕನಸಾಗಿದ್ದ ಕೃಷಿಪತ್ತಿನ ಸಹಕಾರ ಸಂಘದ ನೂತನ ಕಟ್ಟಡ ನಿರ್ಮಾಣಕ್ಕೆ ಇಂದು ಶಂಕುಸ್ಥಾಪನೆ ನೆರವೇರಿಸುವ ಮೂಲಕ ನನಸಾಗಿದೆ ಎಂದು ಹೇಳಿದರು. ಈ ಕೃಷಿಪತ್ತಿನ ಸಹಕಾರ ಸಂಘಕ್ಕೆ ನೂತನವಾಗಿ ಆಯ್ಕೆಯಾಗಿರುವ ಅಧ್ಯಕ್ಷರು, ಪದಾಧಿಕಾರಿಗಳು ನೂತನ ಕಟ್ಟಡ ನಿರ್ಮಾಣ ಕಾರ್ಯದಲ್ಲಿ ಸಕ್ರಿಯವಾಗಿ ಭಾಗವಹಿಸಿ ಉತ್ತಮ ಗುಣಮಟ್ಟದ ಕಟ್ಟಡ ನಿರ್ಮಾಣಕ್ಕೆ ಕೈಜೋಡಿಸಬೇಕೆಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಜಯ ಕರ್ನಾಟಕ ಸಂಘದ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್, ಮುಖಂಡ ಮಂಜು, ಸಂಘದ ಅಧ್ಯಕ್ಷ ಚಂಗಪ್ಪ ಬಿ.ಆರ್, ಉಪಾಧ್ಯಕ್ಷ ಸೈಯದ್ ಮುಕ್ತಿಯಾರ್ ಪಾಷ, ನಿರ್ದೇಶಕರುಗಳಾದ ಶಿವಕುಮಾರ್, ಧರ್ಮೇಶ್, ಹರೀಶ್, ಭಾಗ್ಯ, ಕಮಲ, ಶಾಂತಕುಮಾರ್, ಈಶ್ವರ, ಜಗದೀಶ್, ಅಣ್ಣು, ಅಬೀಬುಲ್ಲಾಖಾನ್ ಮತ್ತಿತರರು ಉಪಸ್ಥಿತರಿದ್ದರು.



ಹುಮನಾಬಾದ:- ತಾಲೂಕಿನ ಸೀತಾಳಗೇರಾ ಗ್ರಾಮದಲ್ಲಿ ಬೆಳಿಗ್ಗೆ ಹೊಸ ಹೊಸ ಬಟ್ಟೆಗಳನ್ನು ಧರಿಸಿ ದೇವರಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಿ, ಪವಿತ್ರ ರಂಜಾನ್ ಹಬ್ಬ ವೈಭವದಿಂದ ಆಚರಿಸಲಾಯಿತ್ತು. (ಮಲ್ಲಮ್ಮ ನುಡಿ ಚಿತ್ರ)



ಹುಮನಾಬಾದ:- ತಾಲೂಕಿನ ಸೀತಾಳಗೇರಾ ಗ್ರಾಮದಲ್ಲಿ ಬೆಳಿಗ್ಗೆ ಹೊಸ ಹೊಸ ಬಟ್ಟೆಗಳನ್ನು ಧರಿಸಿ ದೇವರಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಿ, ಪವಿತ್ರ ರಂಜಾನ್ ಹಬ್ಬ ವೈಭವದಿಂದ ಆಚರಿಸಲಾಯಿತ್ತು. (ಮಲ್ಲಮ್ಮ ನುಡಿ ಚಿತ್ರ)

# ಚನ್ನಮಲೇಶ್ವರರ ಮಹಿಮೆ ಅಪಾರ: ಭರನೂರ್ ಮಠದ ಚಿಕ್ಕ ಗುರು ನಂಜೇಶ್ವರರು



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಚನ್ನಮಲೇಶ್ವರ ಮೇಲೆ ಭಕ್ತಿ ಶ್ರದ್ಧೆ ಇಟ್ಟರೆ ಇಷ್ಟಾರ್ಥಗಳು ಸಿದ್ದಿಯಾಗುತ್ತವೆ ಕಾಳಗಿ ತಾಲೂಕಿನ ಭರನೂರ್ ಮಠದ ಚಿಕ್ಕಗುರು ನಂಜೇಶ್ವರರು ತಾಲೂಕಿನ ಇಟಗಾ ಗ್ರಾಮದ ಶ್ರೀ ಚನ್ನಮಲೇಶ್ವರ ಪಲ್ಲಕ್ಕಿ ಉತ್ಸವ ಅಂಗವಾಗಿ ಹಮ್ಮಿಕೊಂಡಿದ್ದ ಶಿವನುಗೋಷ್ಠಿ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ತಿಳಿಸಿದರು. ಚನ್ನಮಲೇಶ್ವರ ಮಠ ಪುರಾತನ ಮಠವಾಗಿದೆ, ಈ ಮಠದ ಪಲ್ಲಕ್ಕಿ ಉತ್ಸವ ಜೊತೆಗೆ ರಥೋತ್ಸವ ಕೂಡ ಆರಂಭಿಸಬೇಕು ಸಮಿತಿ ಅವರಿಗೆ ಸಲಹೆ ನೀಡಿದರು. ಶಾಸಕ ಡಾ. ಸಿದ್ದು ಪಾಟೀಲ್ ಶಿವನುಗೋಷ್ಠಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಟಗಾ ಗ್ರಾಮದ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುತ್ತೇನೆ ಎಂದರು. ದೇವಾಲಯದ ಎದುರುಗಡೆ ಇರುವ ಮಹಾದ್ವಾರ ನಿರ್ಮಾಣಕ್ಕೆ ಸಹಾಯ ಮಾಡುವುದಾಗಿ ತಿಳಿಸಿದರು. ಈ ಗ್ರಾಮದ ಎಲ್ಲಾ ಸಮಾಜದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದು ತಿಳಿಸಿದರು. ಪ್ರತಿ ವರ್ಷದಂತೆ ಈ ವರ್ಷವೂ ಕೂಡ ವೈಭವದಿಂದ ಪಲ್ಲಕ್ಕಿ ಉತ್ಸವ ಗ್ರಾಮದ ಎಲ್ಲಾ ಓಣಿಗಳಲ್ಲಿ ಸಂಚರಿಸಿತ್ತು. ಈ ಸಂದರ್ಭದಲ್ಲಿ ಚನ್ನಮಲೇಶ್ವರ ಮಠದ ಸಿದ್ದಯ್ಯ ಸ್ವಾಮಿ, ಈಶ್ವರಯ್ಯಾ ಸ್ವಾಮಿ, ಗ್ರಾಮ ಪಂಚಾಯತ್ ಅಧ್ಯಕ್ಷೆ ತೆಂಗೆಮ್ಮಾ, ಉಪಾಧ್ಯಕ್ಷೆ ಲಕ್ಷ್ಮೀ ಯಾಧವ, ಪಿಸ್ಐ ಬಾಷುಮಿಯಾ ಕೊಂಚೂರ್ ಸೇರಿದಂತೆ ಮಠದ ಸಮಿತಿಯವರು, ಗ್ರಾಮಸ್ಥರು, ಇದ್ದರು. ಇದ್ದಕ್ಕೂ ಮುನ್ನ ಹಾಸ್ಯ ಮನೋರಂಜನೆ ಕಾರ್ಯಕ್ರಮ ಜರುಗಿದವು.

# ಏಪ್ರಿಲ್ 15.ರ ವರೆಗೆ ಕಾಲುವೆಗೆ ನೀರು ಹರಿಸದಿದ್ದರೆ ಅಮರಣಾಂತ ಉಪವಾಸ ಸತ್ಯಾಗ್ರಹ: ಚನ್ನೂರು




ಹುಣಸಗಿ: ಕರ್ನಾಟಕ ರಕ್ಷಣಾ ವೇದಿಕೆ ಹುಣಸಗಿ ತಾಲೂಕು ಘಟಕದ ವತಿಯಿಂದ ಏಪ್ರಿಲ್ 15.ರ ವರೆಗೆ ಕಾಲುವೆಗೆ ನೀರು ಹರಿಸುವಂತೆ ಆಗ್ರಹಿಸಿ ಅಮರಣಾ0ತ ಉಪವಾಸ ಸತ್ಯಾಗ್ರಹವನ್ನು ನಾರಾಯಣಪುರ ಮುಖ್ಯ ಅಭಿಯಂತರರ ಕಚೇರಿಯ ಎದುರುಗಡೆ ಹಮ್ಮಿಕೊಳ್ಳುವದಾಗಿ ಮಾನ್ಯ ಉಪ ತಹಶೀಲ್ದಾರರು ಕೊಡೇಕಲ್, ಹಾಗೂ ಮುಖ್ಯ ಅಭಿಯಂತರರು ನಾರಾಯಣಪುರ ಅವರಿಗೆ ಮನವಿ ಸಲ್ಲಿಸಲಾಯಿತು

ಈ ಸಂದರ್ಭದಲ್ಲಿ ಕರವೇ ಹುಣಸಗಿ ತಾಲೂಕು ಅಧ್ಯಕ್ಷರಾದ ಶ್ರೀ ಬಸವರಾಜ ಚನ್ನೂರು, ಶಿವಲಿಂಗ ಸಾಹುಕಾರ್ ಪಟ್ಟಣಶೆಟ್ಟಿ, ರಾಜು ಅವರಾದಿ, ಶಿವಣಗೌಡ ಸದಬ, ಹನಮಗೌಡ ಮಾಲಿಪಾಟೀಲ್, ಬಸವರಾಜ ಕೊಂಡಗೂಳಿ, ಪ್ರಶಾಂತ್ ನಾಯಕ, ಹಣಮಂತ ದೊರಿ, ಸಂಗಮೇಶ್ ಕೊಡೇಕಲ್, ಬಸವರಾಜ್ ಕೊಡೇಕಲ್, ಬಸವರಾಜ ರಾಥೋಡ್, ಇನ್ನಿತರ ಉಪಸ್ಥಿತರಿದ್ದರು.

# ಮಹಾತ್ಮರ ಇತಿಹಾಸ ಸಾರುವ ಪುಸ್ತಕಗಳು ಹೆಚ್ಚಾಗಲಿ: ಬಂಡೆಪ್ಪ ಖಾಶೆಂಪುರ್

ಬೀದರ್: ಮಹಾಪುರುಷರ ಹೆಸರಿನಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು, ಉತ್ಸವಗಳನ್ನು ಆಗಾಗ್ಗೆ ಮಾಡುತ್ತಾ ಇರಬೇಕು. ಆಗ ಮಾತ್ರ ಸಮಾಜ ಜಾಗೃತವಾಗಲು ಸಾಧ್ಯವಾಗುತ್ತದೆ ಎಂದು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಹೇಳಿದರು.

ಬೀದರ್ ನಗರದ ಪೂಜ್ಯ ಡಾ. ಚನ್ನಬಸವ ಪಟ್ಟದ್ದೇವರು ಜಿಲ್ಲಾ ರಂಗಮಂದಿರದಲ್ಲಿ, ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದಿಂದ ಭಾನುವಾರ ಹಮ್ಮಿಕೊಂಡಿದ್ದ 'ಸಾಂಸ್ಕೃತಿಕ ವೀರ ಮಹಾತ್ಮ ಶ್ರೀ ಬೊಮ್ಮಗೊಂಡೇಶ್ವರರ ಉತ್ಸವದ ವೇದಿಕೆ ಕಾರ್ಯಕ್ರಮ' ದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮಹಾತ್ಮರ ಇತಿಹಾಸ ಸಾರುವ ಹಾಗೂ ಮಹಾತ್ಮರ ಜೀವನ ಚರಿತ್ರೆ ಮತ್ತು ಸಾಧನೆಗಳ ಬಗ್ಗೆ ತಿಳಿಸುವ ಪುಸ್ತಕಗಳು ಹೆಚ್ಚಿನ ಸಂಖ್ಯೆಯಲ್ಲಿ ಹೊರಬರಬೇಕು ಎಂದರು. ಎಲ್ಲಾ ಮಹಾಪುರುಷರು ಅವರ ವೈಯಕ್ತಿಕ ಜೀವನಕ್ಕಾಗಿಯೋ, ಕುಟುಂಬ, ಮಕ್ಕಳಿಗಾಗಿಯೋ ಏನನ್ನು ಮಾಡಲಿಲ್ಲ. ಮಾನವ ಕುಲದ ಒಳಿತಿಗಾಗಿ ಅವರು ಶ್ರಮಿಸಿದ್ದಾರೆ. ಬುದ್ಧ, ಬಸವ, ಅಂಬೇಡ್ಕರ್ ರವರು ಸೇರಿದಂತೆ ಅನೇಕ ಜನ ಮಹಾಪುರುಷರು ತಮ್ಮ ತಮ್ಮ ಕಾಲಘಟ್ಟದಲ್ಲಿ ಸಮಾಜದ ಒಳಿತಿಗಾಗಿ ದುಡಿದಿದ್ದಾರೆ.

ಅಂತಹ ಮಹಾತ್ಮರಲ್ಲಿ ಸಾಂಸ್ಕೃತಿಕ ವೀರ ಮಹಾತ್ಮ ಬೊಮ್ಮಗೊಂಡೇಶ್ವರರು ಒಬ್ಬರಾಗಿದ್ದಾರೆ. ಅವರ ಐತಿಹಾಸಿಕ ಚರಿತ್ರೆಯನ್ನು ಇಟ್ಟುಕೊಂಡು ದೊಡ್ಡ ಪುಸ್ತಕ ಬಿಡುಗಡೆ ಮಾಡಿರುವುದು ಖುಷಿಯ ವಿಷಯವಾಗಿದೆ. ಇದರ ಲೇಖಕರಾಗಿರುವ ಡಾ. ಸುನೀತಾ ಕೂಡ್ಲಿಕರರವರಿಗೆ ನಾನು ಧನ್ಯವಾದ ಮತ್ತು ಅಭಿನಂದನೆ ಸಲ್ಲಿಸುತ್ತೇನೆ ಎಂದು ಮಾಜಿ ಸಚಿವರಾದ ಬಂಡೆಪ್ಪ ಖಾಶೆಂಪುರ್ ರವರು ಹೇಳಿದರು.

ಕಾರ್ಯಕ್ರಮದಲ್ಲಿ ಅನೇಕ ಜನ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ವೇಳೆ ಸ್ವಾಮೀಜಿಗಳು, ಗೊಂಡ ಸಮಾಜದ ಮುಖಂಡರು, ವಿವಿಧ ಸಂಘ, ಸಂಸ್ಥೆಗಳ ಪ್ರಮುಖರು, ಸ್ಥಳೀಯ ಜನಪ್ರತಿನಿಧಿಗಳು ಸೇರಿದಂತೆ ಅನೇಕರಿದ್ದರು.

# ಬಸವಕಲ್ಯಾಣದಲ್ಲಿ ಭೌತಿಕ ಅನುಭವ ಮಂಟಪವಿತ್ತು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 31 : ಹನ್ನೆರಡನೆಯ ಶತಮಾನದಲ್ಲಿ ಬಸವಕಲ್ಯಾಣದಲ್ಲಿ ಭೌತಿಕ ಅನುಭವ ಮಂಟಪ ಇತ್ತು ಎಂದು ಕೌಠಾ(ಬಿ) ಬಸವ ಯೋಗಾಶ್ರಮದ ಬೆಲ್ದಾಳ ಸಿದ್ಧರಾಮ ಶರಣರು ನುಡಿದರು.

ನಗರದ ಗಾಂಧಿಗಂ???ನ ಬಸವೇಶ್ವರ ದೇವಸ್ಥಾನದಲ್ಲಿ ಶನಿವಾರ ನಡೆದ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ 'ವಚನ ಮಂಟಪ' ಮಾಸಿಕ ಚಿಂತನ-ಮಂಥನ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ 'ವಚನಗಳಲ್ಲಿ ಅನುಭವ ಮಂಟಪದ ಐತಿಹಾಸಿಕತೆ' ಕುರಿತು ಅವರು ಮಾತನಾಡಿದರು.

ಭೌತಿಕ ಅನುಭವ ಮಂಟಪವೇ ಇರಲಿಲ್ಲ. ವಚನಗಳಲ್ಲಿ ಎಲ್ಲೂ ಅನುಭವ ಮಂಟಪದ ಪ್ರಸ್ತಾಪವಿಲ್ಲ ಎಂದು ಚಿಂತಕಿ ವೀಣಾ ಬನ್ನಂಜೆ ಇತ್ತೀಚಿಗೆ ನೀಡಿರುವ ಹೇಳಿಕೆಯಲ್ಲಿ ಯಾವುದೇ ಹುರುಳಿಲ್ಲ ಎಂದು ತಿಳಿಸಿದರು.

ಬಸವಾದಿ ಶರಣರ ಬಹಳಷ್ಟು ವಚನಗಳಲ್ಲಿ ಅನುಭವ ಮಂಟಪದ ಪ್ರಸ್ತಾಪ ಇದೆ. ಬಸವಣ್ಣನವರ ಧರ್ಮಪತ್ನಿ ನೀಲಾಂಬಿಕೆ ಅವರ ವಚನದಲ್ಲಿ ಈ ಕುರಿತು ವಿಶೇಷವಾಗಿ ಉಲ್ಲೇಖಿಸಲಾಗಿದೆ. ಅನುಭವ ಮಂಟಪ ಭೌತಿಕವಾಗಿ ಅಸ್ತಿತ್ವದಲ್ಲಿ ಇತ್ತು ಎನ್ನುವುದನ್ನು ನಿರೂಪಿಸಲು ನೀಲಾಂಬಿಕೆ ಅವರ ಒಂದೇ ಒಂದು ವಚನ ಸಾಕು ಎಂದು ಹೇಳಿದರು.

ವಚನ ಪಠಣ ಮಾಡಿ ಕಾರ್ಯಕ್ರಮ ಉದ್ಘಾಟಿಸಿದ ಸಂಸದ ಸಾಗರ್ ಖಂಡ್ರೆ ಮಾತನಾಡಿ, ಪ್ರತಿಯೊಬ್ಬರೂ ವಚನಗಳ ಚಿಂತನ-ಮಂಥನದ ವಚನ ಮಂಟಪ ಕಾರ್ಯಕ್ರಮದ ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.

ಕಾರ್ಯಕ್ರಮ ಹೆಚ್ಚು ಹೆಚ್ಚು ವಿಸ್ತಾರಗೊಳ್ಳಲಿ. ಬಸವಾದಿ ಶರಣರ ತತ್ವ ಪಸರಿಸುವ ಆಶಯ ಈಡೇರಲಿ ಎಂದು ಶುಭ ಹಾರೈಸಿದರು.

ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದ್ದೇವರು ಮಾತನಾಡಿ, ಶರಣರು ವಚನಗಳ ಮೂಲಕ ಬದುಕಿನ ಸೂತ್ರ ನೀಡಿದ್ದಾರೆ. ಅವುಗಳನ್ನು ಪಾಲಿಸಿದ್ದಲ್ಲಿ ಬದುಕು ಸಾರ್ಥಕವಾಗುತ್ತದೆ ಎಂದು ಹೇಳಿದರು.

ಮಹಾಸಭಾ ಶರಣರ ವಚನಗಳ ಮೇಲೆ ಬೆಳಕು ಚೆಲ್ಲುವ ಮಾಸಿಕ ಕಾರ್ಯಕ್ರಮ ಆರಂಭಿಸಿರುವುದು ಶ್ಲಾಘನೀಯ ಎಂದರು.

ಹುಲಸೂರಿನ ಶಿವಾನಂದ ಸ್ವಾಮೀಜಿ ಮಾತನಾಡಿ, ಇಂದು ಕಾರ್ಯಕ್ರಮಗಳ ಸಂಘಟನೆ ಸುಲಭವಲ್ಲ. ಬಸವ ತತ್ವದ ಕಾರ್ಯಕ್ಕೆ ಎಲ್ಲರೂ ಸಹಕರಿಸಬೇಕು. ಒಳ್ಳೆಯ ಚಿಂತನೆಗಳನ್ನು ಬಿತ್ತುವ ಕಾರ್ಯಕ್ರಮಗಳಿಂದ ಮಾತ್ರ ಸುಂದರ ಸಮಾಜ ಕಟ್ಟಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ ಮಾತನಾಡಿ, ವಚನಗಳ ಚಿಂತನೆಯ ಕಾರ್ಯಕ್ರಮಕ್ಕೆ ವಚನಮಂಟಪ ಹೆಸರಿಟ್ಟಿರುವುದು ಅತ್ಯಂತ ಸೂಕ್ತವಾಗಿದೆ. ಇದು, ಐತಿಹಾಸಿಕ ಶೀರ್ಷಿಕೆ. ಜನಪದರು ವಚನ ಮಂಟಪ ಪದವನ್ನು ಬಳಸಿದ್ದರು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಮಾತನಾಡಿ, ಮಹಾಸಭಾ ಜಿಲ್ಲೆಯಲ್ಲಿ ಬಸವ ತತ್ವ ಪ್ರಸಾರದ ಕಾರ್ಯಗಳಲ್ಲಿ ತೊಡಗಿಸಿಕೊಂಡಿದೆ. ನಾಲ್ಕು ವರ್ಷಗಳಲ್ಲಿ 3 ಸಾವಿರ ಸದಸ್ಯತ್ವ ಮಾಡಿಸಿದ ಹಾಗೂ ಬಸವಕಲ್ಯಾಣದಲ್ಲಿ ರಾಷ್ಟ್ರೀಯ ಲಿಂಗಾಯತ ಪ್ರಥಮ ಮಹಾ ಅಧಿವೇಶನ ಯಶಸ್ವಿಯಾಗಿ ಸಂಘಟಿಸಿದ ಶ್ರೇಯ ಮಹಾಸಭಾದ ಬೀದರ್ ಜಿಲ್ಲಾ ಘಟಕಕ್ಕೆ ಇದೆ ಎಂದು ತಿಳಿಸಿದರು.

ಭಾರತೀಯ ಬಸವ ಬಳಗದ ರಾಜ್ಯ ಅಧ್ಯಕ್ಷ ಬಾಬುವಾಲಿ ಮಾತನಾಡಿದರು. ಗಾಂಧಿಗಂ???ನ ಹಿರಿಯ ವ್ಯಾಪಾರಿಗಳಾದ ಅಣ್ಣಾರಾವ್ ಮೊಗಶೆಟ್ಟಿ, ನಾಗಶೆಟ್ಟೆಪ್ಪ ದಾಡಗಿ, ಪ್ರಮುಖರಾದ ರಾಜೇಂದ್ರಕುಮಾರ ಗಂದಗೆ, ಬಾಬುರಾವ್ ದಾನಿ, ಪಂಚಾ-ಕ್ಷರಿ ಪುಣ್ಯಶೆಟ್ಟಿ, ಕುಶಾಲರಾವ್ ಪಾಟೀಲ ಖಾಜಾಪುರ, ಭಗವಂತ ಔದತ್ತಪುರ, ಬಂಡೆಪ್ಪ, ಕಂಟೆಪ್ಪ ಗಂದಿಗುಡೆ, ಉಮೇಶ ಗಾಯಗೊಂಡ, ಗೋವಿಂದರಾವ್ ಬಿರಾದಾರ, ಸೋಮನಾಥ ಗಂಗಶೆಟ್ಟಿ, ಚಂದ್ರಪ್ಪ ಹಳ್ಳಿ, ಶರಣಪ್ಪ ಲಾಡಗೇರಿ, ವೀರಭದ್ರಯ್ಯ ಬುಯ್ಯಾ, ಮಲ್ಲಿಕಾರ್ಜುನ ಪಂಚಾಕ್ಷರಿ, ಯೋಗೇಂದ್ರ ಯದಲಾಪುರೆ, ಅಣ್ಣೆಪ್ಪ ಹುಡಗೆ, ಡಾ. ಸುಲೋಚನಾ ಪಾಟೀಲ, ಡಾ.ದೇವಕಿ ನಾಗೂರೆ, ನಿರ್ಮಲಾ ಮಸೂದಿ, ರೂಪಾ ಪಾಟೀಲ, ಸ್ಫೂರ್ತಿ ಧನ್ನೂರ, ಸಂತೋಷಿ ಗಂದಗೆ, ವಿಜಯಲಕ್ಷ್ಮಿ ಪಾಟೀಲ ಮತ್ತಿತರರು ಇದ್ದರು.

ಮಹಾಸಭಾ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಜೊನ್ನಿಕೇರಿ ಸ್ವಾಗತಿಸಿದರು. ಜಿಲ್ಲಾ ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿ ಜಯದೇವಿ ಯದಲಾಪುರೆ ನಿರೂಪಿಸಿದರು. ಅಧ್ಯಕ್ಷೆ ಉಷಾ ಮಿರ್ಚೆ ವಂದಿಸಿದರು. ಜಗನ್ನಾಥ ನಾನಕೇರಿ ಹಾಗೂ ಸಿದ್ದುಸಾಯಿ ನಾನಕೇರಿ ವಚನ ಗಾಯನ ನಡೆಸಿಕೊಟ್ಟರು. ಬಿ.ಕೆ.ಡಿ. ಫೌಂಡೇಷನ್ ಕಾರ್ಯದರ್ಶಿ ಸುವರ್ಣಾ ಬಿ. ಧನ್ನೂರ ಭಕ್ತಿ ದಾಸೋಹಗೈದರು.

ಈಚೆಗೆ ಕೆಲ ಪಟ್ಟಭದ್ರ ಹಿತಾಸಕ್ತಿಗಳು ಶರಣರ ವಚನ ಸಾಹಿತ್ಯದ ಮೇಲೆ ದಾಳಿ ಮಾಡಲು ಪ್ರಯತ್ನಿಸುತ್ತಿವೆ. ಹೀಗಾಗಿ ಜನರಲ್ಲಿ ವಚನ ಪ್ರಜ್ಞೆ ಮೂಡಿಸಲು ಹಾಗೂ ವಚನಗಳ ಕುರಿತು ಚಿಂತನೆಗೆ ಹಚ್ಚಲು ವಚನ ಮಂಟಪ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.



ಕಲಬುರಗಿ: ಕನ್ನಡ ಭವನದಲ್ಲಿ ಡಾ॥ ಬಿ.ಆರ್. ಅಂಬೇಡ್ಕರ ನೇ 134 ಜನ್ಮ ದಿನದ ನಿಮಿತ್ಯ ಜಿಲ್ಲಾ ಜಯಂತ್ಯೋತ್ಸವ ಸಮಿತಿ ವತಿಯಿಂದ ಡಾ.ಬಿ.ಆರ್. ಅಂಬೇಡ್ಕರ ಅವರ ಜೀವನ ಮತ್ತು ಅವರ ಸಾಧನೆ ಬಗ್ಗೆ ಪ್ರಬಂಧ ಸ್ಪರ್ಧೆ ನಡೆಯಿತು. ಈ ಸಂದರ್ಭದಲ್ಲಿ ಸಲಹೆಗಾರ ಹಣಮಂತ ಜಿ. ಯಳಸಂಗಿ, ಗೌರವ ಅಧ್ಯಕ್ಷ ಲಕ್ಷ್ಮಣ ಮೂಲಭಾರತಿ, ಜಿಲ್ಲಾ ಜಯಂತೆ-ತ್ಯೋದ ಅಧ್ಯಕ್ಷ ಮಹೇಶ ತೇಲ್ಲೂರಕರ್, ಮಾಜಿ ಅಧ್ಯಕ್ಷರಾದ ಅರವಿಂದ ಕಮಲಾಪೂರ, ಮಂಜುನಾಥ ಭಂಡಾರಿ, ಪ್ರಚಾರ ಸಮಿತಿ ಅಧ್ಯಕ್ಷ ವಿನೋದ ಕಾಂಬಳೆ, ಖಜಾಂಚಿ ಸಮಿತಿ ಅಧ್ಯಕ್ಷ ನಾಗರಾಜ ಹೊಸಮನಿ, ಸತೀಶಕುಮಾರ ಪರತಾಬಾದ ಸೇರಿದಂತೆ ಇತರರು ಇದ್ದರು. ನಂತರ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

# ನಶಿಸುತ್ತಿರುವ ಜಾನಪದ ಕಲೆಗಳ ಉಳಿಸುವ ಅಗತ್ಯವಿದೆ:ಸೋನಾರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 31: ಇಂದು ಆಧುನಿಕತೆಯ ಭರಾಟೆಯಲ್ಲಿ ವ್ಯಕ್ತಿ ದೇಶಿ ಸಂಸ್ಕೃತಿಯನ್ನು ಮರೆತು ಹಪಾಹಪಿತನದಿಂದ ವಿದೇಶಿ ಸಂಸ್ಕೃತಿಗೆ ಮಾರು ಹೋಗುತ್ತಿದ್ದಾನೆ. ಇದರಿಂದ ರಾಜ್ಯದಲ್ಲಿ ಜಾನಪದ ಸಂಸ್ಕೃತಿ, ಕಲೆ, ಸಾಹಿತ್ಯ ದಿನೇ ದಿನೇ ಮರೆಮಾಚುತ್ತಿದೆ. ಅದನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಎಲ್ಲಾ ಸಂಘ-ಸಂಸ್ಥೆಗಳ ಮೇಲಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ ಅಭಿಪ್ರಾಯಪಟ್ಟರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು, ರಂಗ ತರಂಗ ಸಾಮಾಜಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ಚಿಕ್ಕಪೇಟ ಬೀದರ ಇವರ ಸಂಯುಕ್ತಾಶ್ರಯದಲ್ಲಿ 2020-21ನೇ ಸಾಲಿನ ಸಂಘ-ಸಂಸ್ಥೆಗಳ ವಿಶೇಷ ಘಟಕ ಯೋಜನೆಯಡಿಯಲ್ಲಿ ಬಲ್ಲೂರ ಗ್ರಾಮದ ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಯ ಸಭಾಂಗಣದಲ್ಲಿ



ಯುಗಾದಿ ಹಬ್ಬದ ಪ್ರಯುಕ್ತ ಜಾನಪದ ಸಂಗೀತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಜಾನಪದ ಕಲೆ ಬುಲಾಯಿ, ಜೋಗುಳ, ಸಂಪ್ರದಾಯದ ಹಾಡುಗಳು, ಕೋಲಾಟ ಇವುಗಳು ಮುಂದಿನ ಪೀಳಿಗೆಗೆ ತಿಳಿಸಬೇಕಾದರೆ ಜಾನಪದ ಸಂಸ್ಕೃತಿ ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತ್ಯಗತ್ಯವಾಗಿದೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಶಿಂಧೆ ಮಾತನಾಡಿ ಜಾನಪದ ಸಂಸ್ಕೃತಿ ಉಳಿಸಿ ಬೆಳೆಸಲು ಸರ್ಕಾರ ಸಾಕಷ್ಟು ಪ್ರೋತ್ಸಾಹ ನೀಡುತ್ತಿದೆ. ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹೆಚ್ಚು ಹೆಚ್ಚು ಮುಂದೆ ಬಂದು ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ರಂಗ ತರಂಗ ಸಾಮಾಜಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ಅಧ್ಯಕ್ಷ ಎಂ.ಪಿ.ಮುದಾಳೆ ಮಾತನಾಡಿ ಜನಪದ ಕಲೆ ಸಾಹಿತ್ಯ ಸಂಸ್ಕೃತಿಯ ಸಂವರ್ಧನೆಗಾಗಿ ಈ ಜಾನಪದ ಸಂಗೀತೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದ್ದು, ಸುಮಾರು 10ಕ್ಕೂ ಅಧಿಕ ಜಾನಪದ ಕಲಾಪ್ರಕಾರಗಳನ್ನು ಒಂದೇ ವೇದಿಕೆ ಮೇಲೆ ಕಲಾವಿದರಿಂದ ಪ್ರಸ್ತುತಪಡಿಸಲಾಗಿದೆ. ಜನಪದ ಕಲಾವಿದರನ್ನು ಪ್ರೋತ್ಸಾಹಿಸುವ ಅಗತ್ಯವಿದೆ ಎಂದರು. ವೇದಿಕೆ ಮೇಲೆ ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಯ ಪ್ರಾಚಾರ್ಯರಾದ ಸುನೀಲಕುಮಾರ ಸಿಂಗಾರೆ, ವಸತಿ ನಿಲಯ ಪಾಲಕ ಶ್ರೀಮಂತ ಸಪಾಟೆ, ಪತ್ರಕರ್ತ ಸುನೀಲ ಭಾವಿಕಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಎಂ.ಪಿ.ಮುದಾಳೆ ಸ್ವಾಗತಿಸಿದರು. ಶಿವಕುಮಾರ ನಿರೂಪಿಸಿದರು. ಗೌತಮ ವಂದಿಸಿದರು.

ಜಾನಪದ ಸಾಂಸ್ಕೃತಿಕ ಕಾರ್ಯಕ್ರಮ: ಮಾರುತಿ ಕೋಳಿ ಅವರ ವಚನ ಗಾಯನ, ಪುಂಡಲಿಕರಾವ ಗುಮ್ಮಾ ಅವರ ಜಾನಪದ ಗಾಯನ, ಆಶಾ ಪಾಟೀಲ ಅವರ ಕೋಲಾಟ, ಶ್ರೀಮತಿ ರಂಗಮ್ಮ ಅವರ ಜನಪದ ಹಾಡುಗಳು, ಅರುಣಾ ಹಾಗೂ ಕಲಾತಂಡದ ಜಾನಪದ ನೃತ್ಯ, ಶಿವಾಜಿರಾವ ಅವರ ತತ್ವಪದಗಾಯನ, ಝುರೆಮ್ಮಾ ಅವರ ವಚನ ಗಾಯನ, ನಾಗನಾಥ ಮಡಿವಾಳ ಅವರ ಭಕ್ತಿಗೀತೆಗಳ ಗಾಯನ, ಸರಸ್ವತಿ ಸಂಗಡಿಗರಿಂದ ಸಂಪ್ರದಾಯ ಪದಗಳು, ಚಂದ್ರಪ್ಪ ಕಾಂಬಳೆ ಅವರ ಪೈತ್ರಿ ಪದ, ಸವಿತಾ ಅವರ ಬುಲಾಯಿ ಹಾಡುಗಳು, ವಿಜಯಲಕ್ಷ್ಮಿ ಚಿದ್ರಿ ಅವರ ವಚನ ಗಾಯನ, ಪಾರ್ವತಿ ನಾಗನಪಲ್ಲಿ ಅವರ ಜಾನಪದ ಗಾಯನ ಸಭೀಕರ ಗಮನ ಸೆಳೆಯಿತು. ಕಾರ್ಯಕ್ರಮದಲ್ಲಿ ವಿವಿಧ ಕಡೆಗಳಿಂದ ಆಗಮಿಸಿದ ಜಾನಪದ ಕಲಾವಿದರು, ಕಲಾಸಕ್ತರು ಹಾಗೂ ಶಾಲೆಯ ಸಿಬ್ಬಂದಿ ವರ್ಗದವರು ಮಕ್ಕಳು ಹಾಜರಿದ್ದರು.

# ಸಂಸ್ಕಾರದ ಬೀಜ ಬಿತ್ತಿ ಆದರ್ಶವಂತರನ್ನು ಬೆಳೆಸೋಣ : ಡಾ. ಸುಜಾತಾ ಜಂಗಮಶೆಟ್ಟಿ



ಕಲಬುರಗಿ: ಮಾ.31: ಮಕ್ಕಳಿಗೆ ಸಂಸ್ಕಾರದ ಬೀಜ ಬಿತ್ತಿ ಪ್ರತಿಭಾವಂತರನ್ನು ಬೆಳೆಸಿ ಆದರ್ಶ ಸಮಾಜ ಕಟ್ಟೋಣ ಎಂದು ರಂಗಾಯಣದ ನಿರ್ದೇಶಕಿ, ಡಾ. ಸುಜಾತಾ ಜಂಗಮಶೆಟ್ಟಿ ಹೇಳಿದರು. ಕಲಬುರಗಿಯ ಡಾ. ಪಿ. ಎಸ್ ಶಂಕರ್ ಪ್ರತಿಷ್ಠಾನ, ದಕ್ಷಿಣ ಕನ್ನಡ ಸಂಘ ಮತ್ತು ರೋಟರಿ ಕ್ಲಬ್ ನ ಸಂಯುಕ್ತ ಆಶ್ರಯದಲ್ಲಿ ಮಾರ್ಚ್ 30ರಂದು ರೋಟರಿ ಸಭಾಂಗಣದಲ್ಲಿ ನಡೆದ ಚೈತ್ರೋತ್ಸವ – 2025 ರ ಅಂಗವಾಗಿ ವಿಶೇಷ ಸಾಧಕ ಮಕ್ಕಳಿಗೆ "ಚಿಗುರು ಚಿನ್ಮಯ" ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿ ಪೋಷಕರು ತಮ್ಮ ಮಕ್ಕಳನ್ನು ಅವರ ಕನಸಿನಂತೆ ಬೆಳೆಸಲು ಬಿಡಬೇಕಾಗಿದೆ. ಅಂಕದ ಬೆನ್ನು ಹತ್ತಿ ವೈದ್ಯರು ಇಂಜಿನಿಯರ್ ಗಳನ್ನು ಮಾತ್ರ ಸೃಷ್ಟಿ ಮಾಡಲು ಹೊರಟರೆ ಸಾಹಿತ್ಯ, ಸಂಗೀತ, ನಾಟಕ ,ಕ್ರೀಡಾ ಕ್ಷೇತ್ರದಲ್ಲಿ ಪ್ರತಿಭಾವಂತರನ್ನು ಕಾಣುವುದು ಕಷ್ಟ ಸಾಧ್ಯ. ಎಳವೆಯಲ್ಲಿ ಪ್ರತಿಭೆಯನ್ನು ಗುರುತಿಸಿದರೆ ಅವರು ಭವಿಷ್ಯದಲ್ಲಿ ಶ್ರೇಷ್ಠ ಸಾಧಕರಾಗಿ ದೇಶಕ್ಕೆ ದೊಡ್ಡ ಕೊಡುಗೆ ನೀಡುತ್ತಾರೆ. ಅದಕ್ಕಾಗಿ ಶಿಬಿರ, ತರಬೇತಿಗಳಿಗೆ ಮಕ್ಕಳನ್ನು ಕಳುಹಿಸಿ ಬಹುಮುಖ ವ್ಯಕ್ತಿತ್ವ ಅರಳುವಂತೆ ಮಾಡಬೇಕು ಎಂದು ಹೇಳಿದರು. ಡಾ. ಪಿ ಎಸ್ ಶಂಕರ್ ಪ್ರಾಸ್ತಾವಿಕವಾಗಿ ಮಾತನಾಡಿ ಕಳೆದ 25 ವರ್ಷಗಳಿಂದ ಪ್ರತಿಷ್ಠಾನವು ಶಿಕ್ಷಣ, ಆರೋಗ್ಯ,ಸಾಂಸ್ಕೃತಿಕ ಕ್ರೀಡೆ ಸಾಹಿತ್ಯ, ಪ್ರಕಟಣೆ ಕ್ಷೇತ್ರಗಳಲ್ಲಿ ಅಪಾರವಾದ ಕೊಡುಗೆ ನೀಡಿ ಈ ಭಾಗದಲ್ಲಿ ಪ್ರಗತಿಗೆ ಕೈಜೋಡಿಸಿದೆ. ಚಿಗುರು ಚಿನ್ಮಯ ಪ್ರಶಸ್ತಿ ಪುರಸ್ಕೃತರು ಇಂದು ಶ್ರೇಷ್ಠ ಸಾಧಕರಾಗಿ ಹಲವು ರಂಗಗಳಲ್ಲಿ ಮಿಂಚುತ್ತಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು. ಭರತನಾಟ್ಯದಲ್ಲಿ ಸುಪ್ರಿಯಾ ಸುತಾರ, ವಚನ ಗಾಯನದಲ್ಲಿ ಸೌಮ್ಯ ರಾಯ ರಾಮ, ಕ್ರಿಕೆಟ್ ನಲ್ಲಿ ಸನ್ಮಯ ರುದ್ರವಾಡಿ, ಗಣರಾಜ್ಯೋತ್ಸವ ಪಥ ಸಂಚಲನದಲ್ಲಿ ಹರ್ಷಾ ಸಿದ್ದಾರೆಡ್ಡಿ, ಅಂಚೆ ಚೀಟಿ ಸಂಗ್ರಹಕಾರ ಸುಶಾಂತ ಪಿ ಭಟ್, ಹಾರ್ವರ್ಡ್ ವಿಶ್ವವಿದ್ಯಾಲಯದ ಬೇಸಿಗೆ ಶಿಬಿರಕ್ಕೆ ಆಯ್ಕೆಯಾದ ಅದ್ವೈತ ಜಾಜಿ ಅವರಿಗೆ ನಗದು ಹಾಗು ಸ್ಮರಣಿಕೆ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ದಕ್ಷಿಣ ಕನ್ನಡ ಸಂಘದ ಅಧ್ಯಕ್ಷರಾದ ಚಂದ್ರಶೇಖರ ಶೆಟ್ಟಿ ಉಪಸ್ಥಿತರಿದ್ದರು. ಪ್ರತಿಷ್ಠಾನದ ಕಾರ್ಯಾಧ್ಯಕ್ಷರಾದ ಡಾ. ಎಚ್ ವೀರಭದ್ರಪ್ಪ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಡಾ ಸದಾನಂದ ಪೆರ್ಲ, ಡಾ ವಿಕ್ರಂ ಸಿದ್ದಾರೆಡ್ಡಿ ಬೆಳಗಾವಿ ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರಾದ ಸಕ್ರೆಪ್ಪ ಗೌಡ, ಸದಾನಂದ ಪಾಟೀಲ, ಪುರಂದರ ಭಟ್ ಲತಾ ಶ್ರೀನಿವಾಸ್ ಆಚಾರ್ಯ ಡಾ.ಇಂದಿರಾ ವೀರಭದ್ರಪ್ಪ, ಡಾ. ರಾಜಶ್ರೀ ರೆಡ್ಡಿ, ಡಾಕ್ಟರ್ ವೀಣಾ ಸಿದ್ದಾರೆಡ್ಡಿ, ಉದ್ಯಮಿ ರವಿ ಮುಕ್ಕಾ, ಕರ್ನಾಟಕ ಪೀಪಲ್ಸ್ ಶಿಕ್ಷಣ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಶಾಂತಪ್ಪ ಸೂರನ್, ರಾಮಕೃಷ್ಣ ರೆಡ್ಡಿ, ಸಿಎ ಮಣಿಲಾಲ್ ಶಹಾ, ಡಾ. ದಡೆದ್ ಡಾ.ಸಂಗ್ರಾಮ್ ಬಿರಾದಾರ್, ರೋಟರಿ ಕ್ಲಬ್ ಅಧ್ಯಕ್ಷರಾದ ಚನ್ನಬಸಪ್ಪ ಸಮಾನಿ ಸ್ವಾಗತಿಸಿದರು. ಡಾ. ರಾಜೇಂದ್ರ ಕೊಂಡ ಧನ್ಯವಾದವಿತ್ತರು. ಪ್ರೊಫೆಸರ್ ನರೇಂದ್ರ ಬಡಶೇಷಿ ನಿರೂಪಣೆ ಮಾಡಿದರು. ಪ್ರಶಸ್ತಿ ಪಡೆದ ಸುಪ್ರಿಯಾ ಸುತಾರ ನೃತ್ಯ ಪ್ರದರ್ಶನ ನೀಡಿದರು ಹಾಗೂ ಪ್ರಶಸ್ತಿ ಪುರಸ್ಕೃತರು ಅಭಿಪ್ರಾಯಗಳನ್ನು ಹಂಚಿಕೊಂಡರು.

# ಯುವತಿಯೊಂದಿಗೆ ಪ್ರೇಮ ಪುರಾಣ, ಲವರ್ ಸಹೋದರರಿಂದ ಬಿತ್ತು ಪ್ರಿಯತಮನ ಹೆಣ!

ಮಲ್ಲಮ್ಮ ನುಡಿ ವಾರ್ತೆ



ಬೀದರ. ಮಾ. 31 : ಯುವಕನೋರ್ವನು ತಾನು ಪ್ರೀತಿಸಿದ ಯುವತಿಯ ಅಣ್ಣಂದಿರಿಂದಲೇ ಭೀಕರವಾಗಿ ಹತ್ಯೆಯಾಗಿರುವ ಘಟನೆ ಜಿಲ್ಲೆಯ ಬಸವಕಲ್ಯಾಣ ತಾಲೂಕಿನ ನಿರಗುಡಿ ಗ್ರಾಮದಲ್ಲಿ ನಡೆದಿದೆ.

25 ವರ್ಷದ ಪ್ರಶಾಂತ್ ಬಿರಾದಾರ್ ಎಂಬ ಯುವಕನ ತಲೆ ಮೇಲೆ ಕಲ್ಲು ಎತ್ತಿ ಹಾಕಿ ಯುವತಿಯ ಸಹೋದರರು ಬರ್ಬರವಾಗಿ ಹತ್ಯೆಗೈದಿರುವ ಆರೋಪ ಕೇಳಿಬಂದಿದೆ.

ಈ ವಿಷಯಕ್ಕೆ ಶುಕ್ರವಾರ ರಾತ್ರಿ 9 ಗಂಟೆಗೆ ಯುವತಿಯ ಸಹೋದರರಾದ ಯಲ್ಲಾಲಿಂಗ ಮೇತ್ರೆ, ಪ್ರಶಾಂತ್ ಮೇತ್ರೆ, ಮತ್ತು ಯುವಕ ಪ್ರಶಾಂತ್ ಬಿರಾದಾರ ಜೊತೆ ಗಲಾಟೆ ನಡೆದಿದೆ.

ನಮ್ಮ ತಂಗಿಯನ್ನೇ ಪ್ರೀತಿ ಮಾಡುತ್ತೀಯ ಎಂದು ಥಳಿಸಿದ್ದಾರೆ. ಪ್ರೀತಿಸಿದ ಯುವತಿಯನ್ನ ಬಿಡಲು ಯುವಕ ನಿರಾಕರಿಸಿದ್ದಾನಂತೆ. ಇದರಿಂದ ಯುವಕನನ್ನು ಅದೇ ಗ್ರಾಮದ ಯಲ್ಲಾಲಿಂಗ ಮೇತ್ರೆ ಹಾಗೂ ಪ್ರಶಾಂತ್ ಮೇತ್ರೆ ಕೊಲೆ ಮಾಡಿರುವ ಆರೋಪ ಎದುರಿಸುತ್ತಿದ್ದಾರೆ. ಸದ್ಯ ಈ ಇಬ್ಬರು ಆರೋಪಿಗಳನ್ನು ಪೊಲೀಸರು ಅರೆಸ್ಟ್? ಮಾಡಿದ್ದಾರೆ.

ಇದೇ ಗ್ರಾಮದ ಪ್ರಶಾಂತ್ ಹಾಗೂ ಯುವತಿ ಪರಸ್ಪರ ಪ್ರೀತಿಸುತ್ತಿದ್ದರು ಒಂದೇ ಗ್ರಾಮದವರು ಆಗಿದ್ದರಿಂದ ಇಬ್ಬರ ಮಧ್ಯೆ ಕಳೆದ ಕೆಲ ವರ್ಷಗಳಿಂದ ಪ್ರೀತಿ ಬೆಳೆದಿತ್ತು ಇಂಜಿನೀಯರಿಂಗ್ ಪದವಿ ಪಡೆದಿದ್ದ ಯುವತಿ, ಬೆಂಗಳೂರಿನ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದಳು. ಅತ್ತ ಐಟಿಐ ಮುಗಿಸಿರುವ ಮೃತ ಪ್ರಶಾಂತ್, ಮಹಾರಾಷ್ಟ್ರ ರಾಜ್ಯದ ಪುಣೆಯಲ್ಲಿ ಹಣ್ಣಿನ ವ್ಯಾಪಾರ ಮಾಡಿಕೊಂಡಿದ್ದ.

ಸಹೋದರಿ ಮದುವೆಗಾಗಿ ಪ್ರಶಾಂತ್ ಊರಿಗೆ ಬಂದಿದ್ದನು. ಇನ್ನು ಪ್ರಶಾಂತ್ ಹಾಗೂ ಯುವತಿ ಪ್ರೀತಿಗೆ ಯುವತಿಯ ಕುಟುಂಬಸ್ಥರು ವಿರೋಧಿಸಿದ್ದರು ಯುವತಿಯನ್ನು ಫಾಲೋ ಮಾಡ್ಬೇಡ, ಮಾತನಾಡಿಸ್ಬೇಡ ಅಂತ ಈಗಾಗಲೇ ವಾರ್ನಿಂಗ್ ಮಾಡಿದ್ರಂತೆ. ಆದರೂ ಇಬ್ಬರ ನಡುವೆ ಪ್ರೀತಿ, ಪ್ರೇಮ ಮುಂದುವರೆದಿತ್ತು. ಇದೇ ಮಾರ್ಚ್ 26ರಂದು ಪ್ರಶಾಂತ್‌ನ ಸಹೋದರಿ ಮದುವೆಗೆ ಬಂದಿದ್ದ ಈ ಹಿನ್ನೆಲೆಯಲ್ಲಿ ಮಾರ್ಚ್ 20ರಂದು ಪುಣೆಯಿಂದ ನಿರಗುಡಿ ಗ್ರಾಮಕ್ಕೆ ಪ್ರಶಾಂತ್ ಬಂದಿದ್ದ ಎನ್ನಲಾಗಿದೆ ಈ ಬೆನ್ನಲ್ಲೇ ಪ್ರೇಯಸಿಯೂ ಕೂಡಾ ಗ್ರಾಮಕ್ಕೆ ಆಗಮಿಸಿದ್ದಳಂತೆ.

ಇನ್ನು ಘಟನಾ ಸ್ಥಳಕ್ಕೆ ಬಸವಕಲ್ಯಾಣ ಗ್ರಾಮೀಣ ಠಾಣೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ರು. ಇತ್ತ ಮಗನನ್ನು ಕಳೆದುಕೊಂಡ ಕುಟುಂಬಸ್ಥರು ಆಕ್ರಂದನ ಮುಗಿಲು ಮುಟ್ಟಿದೆ.

# ಛಾಯಾಗ್ರಾಹಕ ಶರಣಪ್ಪ ಹಳ್ಳಿಖೇಡ ನಿಧನ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ:ಮಾ.31: ನಗರದ ವಿದ್ಯಾನಗರ ನಿವಾಸಿ, ಪ್ರಿಲಾನ್ಸ್ ಫೋಟೋಗ್ರಾಫರ್ ಶರಣಪ್ಪ ಹಳ್ಳಿಖೇಡ (ವೇಗವಾಹಿನಿ) ಅವರು ರವಿವಾರ ರಾತ್ರಿ 2.45 ಕ್ಕೆ ಹೃದಯಾಘಾತದಿಂದ ನಿಧನರಾದರು. ಅವರಿಗೆ 61 ವರ್ಷ ವಯಸ್ಸಾಗಿತ್ತು. ಶ್ರೀಯುತರು ತಾಯಿ, ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅವರು ಅಗಲಿದ್ದಾರೆ. ಕಳೆದ 30ಕ್ಕೂ ಹೆಚ್ಚು ವರ್ಷಗಳಿಂದ ಅವರು ಫ್ರೀಲಾನ್ಸ್ ಫೋಟೋಗ್ರಾಫರ್ ಆಗಿ ಸೇವೆ ಸಲ್ಲಿಸಿದ್ದರು. ಮೃತರ ಪಾರ್ಥಿವ ಶರೀರದ ಅಂತ್ಯಕ್ರಿಯೆ ಸೋಮವಾರ ಸಂಜೆ 5 ಗಂಟೆಗೆ ಇಲ್ಲಿನ ವೆಂಕಟೇಶ ನಗರದ ಕ್ರಿಶ್ಚನ್ ರುದ್ರಭೂಮಿಯಲ್ಲಿ ನಡೆಯಿತು ಎಂದು ಅವರ ಕುಟುಂಬದ ಮೂಲಗಳು ತಿಳಿಸಿವೆ.

# ಬಸನಗೌಡ ಪಾಟೀಲ್ ಯತ್ನಾಳ ಉಚ್ಚಾಟನೆ ವಿರೋಧಿಸಿ ಏ. 2ರಂದು ರ್‍ಯಾಲಿ

ಮಲ್ಲಮ್ಮ ನುಡಿ ವಾರ್ತೆ



ಲಿಂಗಸುಗೂರು:ಮಾ.31: ಬಸನಗೌಡ ಪಾಟೀಲ್ ಯತ್ನಾಳರವರನ್ನು ಬಿಜೆಪಿ ಪಕ್ಷದಿಂದ ಉಚ್ಚಾಟನೆ ಮಾಡಿರುವುದರನ್ನು ವಿರೋಧಿಸಿ ಲಿಂಗಸುಗೂರು ಪಟ್ಟಣದಲ್ಲಿ ಏಪ್ರಿಲ್ 2ರಂದು ಬೆಳಗ್ಗೆ 10ಗಂಟಗೆ ರ್‍ಯಾಲಿ ನಡೆಸಲಾಗುವುದೆಂದು ವೀರಶೈವ ಲಿಂಗಾಯತ ಪಂಚಮಾಲಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಡಾ.ಸುಭಾಸ್ ಪಲ್ಲೇದ ಯುವ ಘಟಕದ ಅಧ್ಯಕ್ಷ ಮಹೇಶ ಪಾಟೀಲ್ ಅಮರಾವತಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿಜೆಪಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ರವರ ಕುಮ್ಮಕ್ಕಿನಿಂದ ಹಿಂದುಗಳ ಹುಲಿ ಎಂದು ಹೆಸರಾದ ಬಸನಗೌಡ ಪಾಟೀಲ್ ಯತ್ನಾಳ ರವರನ್ನು 6 ವರ್ಷಗಳ ಬಿಜೆಪಿ ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ. ಇದನ್ನು ಖಂಡಿಸಿ ವೀರಶೈವ ಲಿಂಗಾಯತ ಪಂಚಮಸಾಲಿ ಸಮುದಾಯದ ಹಾಗೂ ಇತರೆ ಸಮುದಾಯಗಳೊಂದಿಗೆ ಪಟ್ಟಣದ ರಾಯಚೂರು ರಸ್ತೆಯ ಲಕ್ಷ್ಮೀ ಗುಡಿ ದೇವಸ್ಥಾನದಿಂದ ಈಶ್ವರ ದೇವಸ್ಥಾನದ ವರೆಗೂ ರ್‍ಯಾಲಿ ನಡೆಸಲಾಗುತ್ತದೆ. ಆದ ಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಜನರು ರ್‍ಯಾಲಿಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬ್ರೈಟ್ ಫ್ಯೂಚರ್ ಆಂಗ್ಲ ಮಾಧ್ಯಮ ಶಾಲೆಯ ಎರಡು ವಿದ್ಯಾರ್ಥಿಗಳು ನವೋದಯಕ್ಕೆ ಆಯ್ಕೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರು ತಾಲೂಕಿನ ಕುದರಿಮೋತಿ ಗ್ರಾಮದಲ್ಲಿ ಬ್ರೈಟ್ ಫ್ಯೂಚರ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ 7ನೇ ವರ್ಷದ ವಾರ್ಷಿಕೋತ್ಸವದ ನೆಡೆಯಿತು. ಶಿಶು ಅಭಿವೃದ್ಧಿ ಅಧಿಕಾರಿಗಳಾದ ಬೇಟದಪ್ಪ ಮಾಳೆಕೊಪ್ಪ ಅವರು ಉದ್ಘಾಟಿಸಿ ಮಾತನಾಡಿ ಗ್ರಾಮೀಣ ಭಾಗದಲ್ಲಿ ಇಂತಹ ಒಂದು ಶಿಕ್ಷಣ ಸಂಸ್ಥೆ ಹುಟ್ಟಿಕೊಂಡಿರುವುದು ನಮಗೆಲ್ಲ ಹೆಮ್ಮೆಯ ವಿಷಯ ಏಕೆಂದರೆ ಈ ಸಂಸ್ಥೆಯಲ್ಲಿ ಎರಡು ವಿಧ್ಯಾರ್ಥಿಗಳು ನವೋದಯಕ್ಕೆ ಆಯ್ಕೆ ಆಗಿದಕ್ಕೆ ಸಂಸ್ಥೆಯ ಅಧ್ಯಕ್ಷರು ಹಾಗೂ ಶಿಕ್ಷಕರ ಪರಿಶ್ರಮದಿಂದ ಆಯ್ಕೆ ಆಗಿದ್ದಾರೆ ಮತ್ತು ಓದುತ್ತಿರುವ 16 ಮಕ್ಕಳ ಪೈಕಿ 13 ಮಕ್ಕಳು ಮೊರಾರ್ಜಿ ಶಾಲೆಗೆ ಆಯ್ಕೆಯಾಗಿದ್ದು, ಅವರು ರಾಜ್ಯದ ಮೂರನೇ ಸ್ಥಾನದಲ್ಲಿ ಆಯ್ಕೆಯಾಗಿದ್ದಾರೆ ಇದು ತುಂಬಾ ಖುಷಿಪಡುವ ವಿಚಾರ. ಇನ್ನು ಇದು ಇಡೀ ಕೊಪ್ಪಳ ಜಿಲ್ಲೆಯಲ್ಲಿ ಇದುವರೆಗೂ ಯಾರು ಇಂತಹ ಸಾಧನೆಯನ್ನು ಕುದುರೆಮೋತಿಯಲ್ಲಿ ಮಾಡಿರಲಿಲ್ಲ. ಈ ಶಾಲೆಯ ಸಂಸ್ಥೆ ಹುಟ್ಟಿಕೊಂಡು ಏಳು ವರ್ಷಗಳ ಇತಿಹಾಸದಲ್ಲಿ ಪ್ರಪ್ರಥಮ ಬಾರಿಗೆ ಇಂತಹ ಒಂದು ಅಮೋಘಸಾಧನೆಯನ್ನು ಮಾಡಿದೆ ಇಂತಹ ಸಾಧನೆ ಇನ್ನೂ ಹೆಚ್ಚು ಹೆಚ್ಚು ಮುಂದುವರೆಯಲಿ ಎಂದು ಹೇಳಿದರು.

ನಂತರ ಮಾತನಾಡಿದ ದಳಪತಿ ಹನುಮಗೌಡ ಪೊ.ಪಾಟೀಲ್ ಇವರು ಗ್ರಾಮೀಣ ಮಕ್ಕಳ ಭವಿಷ್ಯಕ್ಕೆ ಈ ಸಂಸ್ಥೆ ದಾರಿದೀಪವಾಗಲಿ ಮುಂದಿನ ದಿನಗಳಲ್ಲಿ ಇನ್ನೂ ನಮ್ಮ ಕುದರಿಮೋತಿ ಗ್ರಾಮದಿಂದ ಇನ್ನೂ ಹೆಚ್ಚಿನ ವಿಧ್ಯಾರ್ಥಿಗಳು ಸಾಧನೆ ಮಾಡಬೇಕು ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಉಪಾಧ್ಯಕ್ಷ ಲಕ್ಷ್ಮೀ ವಿಜಯ ದಾಸರ್, ಉಪನ್ಯಾಸಕರಾದ ಶಿವನಗೌಡ ನವಲಹಳ್ಳಿ, ಪೌಲ್ಟ್ರಿ ಫಾರಂ ವ್ಯವಸ್ಥಾಪಕರಾದ ಸತ್ಯನಾರಾಯಣರೆಡ್ಡಿ.ಕಾಂಗ್ರೆಸ್ ಪಕ್ಷದ ಯುವ ಮುಖಂಡ ದುರಗಪ್ಪ ದೂಪಂ, ಶಿಕ್ಷಕ ಬೀರಪ್ಪ ಅಂಡಗಿ,ರೇವಣಪ್ಪ,

ಮಾಂತಪ್ಪ ಸಿಡ್ನಳಿ, ಶಿಕ್ಷಣ ಪ್ರೇಮಿ ರಾಮರಾವ್ ಕುಲಕರ್ಣಿ, ಅಶೋಕ್ ಸಜ್ಜನ, ಜಯಣ್ಣ, ಮಾಹಾಂತ,ಪ್ರಶಾಂತ ಅಬಕಾರಿ , ತಿಮ್ಮನಗೌಡ ಪಾಟೀಲ್, ಮಂಜುನಾಥ್ ಹಿರೇಮಠ್, ಹನಮಂತಪ್ಪ ಚಿತ್ರಗಾರ,ಸಂಸ್ಥೆಯ ಗೌರವ ಅಧ್ಯಕ್ಷ ಮಂಜುನಾಥ ಗಟ್ಟೆಪ್ಪನವರ್,ಮುಖ್ಯೋಪಾಧ್ಯಾಯ ಶಬ್ಬೀರ್ ಲೇಕಲಿ, ಸಂಸ್ಥೆಯ ಅಧ್ಯಕ್ಷ ಅಶೋಕ ಗಟ್ಟೆಪ್ಪನವರ್, ಪತ್ರಕರ್ತ ಶರಣಯ್ಯ ಕರಡಿಮಠ, ಸೇರಿದಂತೆ ಮುಂತಾದವರು ಇದ್ದರು.

# ಕವಿತೆಗಳಲ್ಲಿ ಹೊಸತನ ಮೂಡಬೇಕಿದೆ ವಿಜಯ್ ಅಮೃತ್ ರಾಜ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಾವು ಹಳೆಯ ಸಾಹಿತ್ಯದ ಪ್ರಕಾರಗಳನ್ನು ಉಳಿಸುವುದರ ಜೊತೆಗೆ ಹೊಸ ರೀತಿಯ ಸಾಹಿತ್ಯ ಪ್ರಕಾರವನ್ನು ಅಳವಡಿಸಿಕೊಳ್ಳುವ ಮೂಲಕ ಬರವಣಿಗೆಯಲ್ಲಿ ತೊಡಗಿಕೊಳ್ಳಬೇಕು ಎಂದು ಬರಹಗಾರ ವಿಜಯ್ ಅಮೃತ್ ರಾಜ್ ಹೇಳಿದರು.

ಯುಗಾದಿ ಹಾಗೂ ರಂಜಾನ್ ಹಬ್ಬದ ನಿಮಿತ್ತ ಕವಿ ಸಮೂಹ ಕೊಪ್ಪಳ ಬಹುತ್ವ ಭಾರತ ಬಳಗ ಕೊಪ್ಪಳದ ಸಂಯುಕ್ತ ಆಶಯದಲ್ಲಿ ನಡೆದ ಕವಿಗೋಷ್ಠಿಯಲ್ಲಿ ಮಾತನಾಡಿದ ಅವರು

ಕವಿತೆಗಳಲ್ಲಿ ಹೊಸತನ ಬರಬೇಕಿದೆ ಮತ್ತೊಮ್ಮೆ ಜನಪದ ಸಾಹಿತ್ಯ ಪರಂಪರೆಯನ್ನು ಉಳಿಸುವ ಕೆಲಸವನ್ನು ಮಾಡಬೇಕಿದೆ. ಕನ್ನಡದಲ್ಲಿ ವಿಟ್ ಪ್ರಕಾರ ಇದುವರೆಗೆ ಬಂದಿಲ್ಲ. ಕೌಬಾಯ್ ಪದ್ಯಗಳು ಬರೆಯುವ ಪ್ರಯತ್ನ ನಡೆಯಬೇಕಿದೆ. ಜೊತೆಗೆ ನಿರಂತರವಾಗಿ ಸಾಹಿತ್ಯ ವಿಚಾರಗಳು ಚರ್ಚೆ ಆಗಬೇಕಿದೆ ಎಂದು ಕಿವಿಮಾತು ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಕವಿಗೋಷ್ಠಿಯಲ್ಲಿ ಹತ್ತಕ್ಕೂ ಹೆಚ್ಚು ಕವಿಗಳು ತಮ್ಮ ಕವಿತೆಯನ್ನು ವಾಚನ ಮಾಡಿದರು. ಅರುಣ ನರೇಂದ್ರ ರಂಜಾನ್ ಹಾಗೂ ಯುಗಾದಿ ಕುರಿತ ಕವಿತೆಯನ್ನು ವಾಚನ ಮಾಡಿದರು, ಪುಷ್ಪಲತಾ ಏಳುಭಾವಿ– ನನ್ನ ಕೊಂದುಬಿಡು ಹಾಗೂ ಅಂದು ಮತ್ತು ಇಂದು, ಶ್ರೀನಿವಾಸ್ ಚಿತ್ರಗಾರ್ – ಡುಬ್ಬ ಚಪ್ಪರಿಸುವವರು ಹಾಗೂ ಕಟ್ಟ ಕಡೆಯ ಹಾದಿ, ಜಿಎಸ್ ಗೋನಾಳ್ – ಶಾಂತಿ ಪ್ರೀತಿ ಸೌಹಾರ್ದತೆ ರಂಜಾನ್ ಮತ್ತು ಯುಗಾದಿ, ವಿಜಯ್ ಅಮೃತ್ ರಾಜ್ –– ಯುಗಾದಿ ಹಾಗೂ ರಂಜಾನ್, ಪೀ ಎಸ್ ಅಮರದೀಪ್ – ಬೇವು ಬೆಲ್ಲ , ಖಾಲಿ ಬಿಳಿಹಾಳೆ, ಬಿಎಸ್ ವೀರಾಪುರ್ – ಕೊಪ್ಪಳ ಉಳಿಸೋಣ ಬನ್ನಿ, ಯುಗಾದಿ ಹರುಷ ತರಲಿ, ಬೀರಪ್ಪ ಅಂಡಗಿ – ಕಿವಿ , ಅನಸೂಯ ಜಾಗೀರ್ದಾರ್ – ಅಳಲಾರದ ಮಕ್ಕಳು ಹಾಗೂ ಯುಗಾದಿ ಚೈತ್ರಳ ಸ್ವಗತ ಕವಿತೆ, ಸಿರಾಜ್ ಬಿಸರಳ್ಳಿ – ದ್ವಿಪದಿಗಳು , ನನಗೆ ನಿನ್ನ ದರ್ಶನ ಭಾಗ್ಯವಿಲ್ಲ ಕವಿತೆಗಳನ್ನು ವಾಚನ ಮಾಡಿದರು.

ವಾಚನ ಮಾಡಿದ ಕವಿತೆಗಳ ಕುರಿತು ಮಾತನಾಡಿದ ಕವಿ ಪಿಎಸ್ ಅಮರದೀಪ್ ಎಲ್ಲರೂ ಸಾಂದರ್ಭಿಕ ಕವಿತೆಗಳನ್ನು ವಾಚನ ಮಾಡುವುದರ ಮೂಲಕ ಕವಿಗೋಷ್ಠಿಯ ಅಂದವನ್ನು ಹೆಚ್ಚಿಸಿದ್ದೀರಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮೌಲಾ ಹುಸೈನ್ ತಳಕಲ್, ಮಂಜು ತೋಟಗಾರ , ನರೇಂದ್ರ ಪಾಟೀಲ್ ಸೇರಿದಂತೆ ಇತರರು ಉಪಸಿತರಿದ್ದರು.

# ಏಪ್ರಿಲ್ 2 ರಂದು ಕೊಪ್ಪಳದಲ್ಲಿ ಸಾರಿಗೆ ಅದಾಲತ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕೊಪ್ಪಳ ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ಸಾರಿಗೆ ಅದಾಲತ್ ಕಾರ್ಯಕ್ರಮವು ಏಪ್ರಿಲ್ 2 ರಂದು ಮಧ್ಯಾಹ್ನ 4 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಸಾರಿಗೆ ಇಲಾಖೆಗೆ ಸಂಬಂಧಿಸಿದ ಸಾರ್ವಜನಿಕರ ಕುಂದು ಕೊರತೆಗಳ ಅಹವಾಲು ಸ್ವೀಕರಿಸಲು ಕೊಪ್ಪಳ ನಗರದ ಹೊಸಪೇಟೆ ರಸ್ತೆಯ ಎಸ್.ಕೆ. ಪಾಟೀಲ್ ಬಡಾವಣೆಯಲ್ಲಿರುವ ಆರ್.ಟಿ.ಓ ಕಚೇರಿಯಲ್ಲಿ ಸಾರಿಗೆ ಅದಾಲತ್ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು,ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೊಪ್ಪಳ ಪ್ರಾದೇಶಿಕ ಸಾರಿಗೆ ಅಧಿಕಾರಿ ಕೆ.ದಾಮೋದರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೂತನ ಅಧ್ಯಕ್ಷರಾದ ಮಾಪಣ್ಣ ಬಡಿಗೇರ್ ರವರಿಗೆ ದೇವಿನ ಬಳಗದ ವತಿಯಿಂದ ಅದ್ದೂರಿ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ಮದ್ದರಕಿ ಗ್ರಾಪಂ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ದೊಡ್ಡಮಾಪಣ್ಣ ಬಡಿಗೇರ

ದೇವಿ ನಗರ ಬಳಗದ ವತಿಯಿಂದ ಹಾಗೂ ಅವರ ಅಭಿಮಾನಿ ಬಳಗದ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಅಪ್ಪಣ್ಣ ದಶವಂತ್. ದೇವಪ್ಪ ದೇವಿನಗರ್. ಮಲ್ಲು ಪೋಲೀಸ್. ರವಿ ದೇವನಗರ್. ಸರ್ವೇಶ್ ದೇವಿ ನಗರ್ . ಹನುಮಂತ್ ದೇವಿನಗರ್.ಬಸವರಾಜ ಕಡಗಂಚಿ. ಯಲ್ಲಪ್ಪ ದೇವಿನಗರ್. ಹೀಗೆ ದೇವಿನಗರ ಆಪ್ತ ಬಂಧುಗಳು ವಿಜ್ರಮಣೆಯಿಂದ ಸನ್ಮಾನಿಸಲಾಯಿತು.

# ಬೆಂಗಳೂರಿನಲ್ಲಿ ರೈಲ್ವೆ ಸಚಿವರನ್ನು ಭೇಟಿಯಾಗಿ ಅಭಿನಂದನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಬಹು ನಿರೀಕ್ಷಿತ ಗದಗ– ವಾಡಿ ರೈಲ್ವೆ ಯೋಜನೆಯ ಕಾಮಗಾರಿ ಕುಷ್ಟಗಿ ಭಾಗದವರೆಗೆ ಪೂರ್ಣಗೊಂಡಿದ್ದು, ಪ್ರಯೋಗಾರ್ಥ ರೈಲು ಸಂಚಾರ ಯಶಸ್ವಿಯಾಗಿರುವುದು ಸಂತಸ ತಂದಿದೆ ಎಂದು ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯರಾಗಿರುವ ವೈದ್ಯ ಬಸವರಾಜ ಕ್ಯಾವಟರ್ ಸಂತಸ ವ್ಯಕ್ತಪಡಿಸಿದರು.

ಬೆಂಗಳೂರಿನ ಸಚಿವರ ನಿವಾಸದಲ್ಲಿ ರಾಜ್ಯ ರೈಲ್ವೆ ಸಚಿವ ವಿ.ಸೋಮಣ್ಣ ಅವರನ್ನು ಶನಿವಾರ ಭೇಟಿಯಾಗಿ ಅಭಿನಂದನೆ ಸಲ್ಲಿಸಿದ ಕ್ಯಾವಟರ್ ಅವರು, ಕೇಂದ್ರ ಸರಕಾರದ ಕ್ರಮಕ್ಕೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ಮಾರ್ಚ 28ರಂದು ಗದಗ–ವಾಡಿ ಹೊಸ ರೈಲ್ವೆ ಮಾರ್ಗ ವ್ಯಾಪ್ತಿಯಲ್ಲಿ ನಿಂಗಲಬಂಡಿ– ಕುಷ್ಟಗಿವರೆಗೆ ಸಿಆರ್ ಎಸ್ ತಂಡದಿಂದ ರೈಲ್ವೆ ಮಾರ್ಗದ ತಾಂತ್ರಿಕ ತಪಾಸಣೆ, ಪ್ರಯೋಗಾರ್ಥ ರೈಲು ಸಂಚಾರ ಅತ್ಯಂತ ಯಶಸ್ವಿಯಾಗಿ ನಡೆದಿದೆ.

ಇದು, ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ ಹಾಗೂ ತಮ್ಮ ಸಹಕಾರದ ಪ್ರತಿಫಲವಾಗಿದೆ.

ಹೀಗಾಗಿ ಕೇಂದ್ರ ಸರಕಾರ ಹಾಗೂ ರೈಲ್ವೆ ಇಲಾಖೆಯ ಬದ್ಧತೆಗೆ ಅಭಿನಂದಿಸುತ್ತೇನೆ ಎಂದು ಸಚಿವ ಸೋಮಣ್ಣನವರ ಎದುರು ಬಸವರಾಜ ಕ್ಯಾವಟರ್ ಅವರು ಪ್ರಸ್ತಾಪಿಸಿದ್ದಾರೆ. ಸ್ವಾತಂತ್ರ್ಯ ನಂತರ ಕುಷ್ಟಗಿಗೆ ಬಂದ ಮೊದಲ ರೈಲು ಇದಾಗಿದ್ದು, ಈ ಭಾಗದ ಜನತೆಯ ಹಲವು ದಶಕಗಳ ಕನಸು ಕೊನೆಗೂ ಸಾಕಾರಗೊಂಡಿ–ದೆ. ಆರಂಭಿಕವಾಗಿ ಕುಷ್ಟಗಿ–ಹುಬ್ಬಳ್ಳಿ, ಕುಷ್ಟಗಿ–ಯಶವಂತಪುರ ಮಾರ್ಗವಾಗಿ ರೈಲು ಸಂಚಾರ ಕಲ್ಪಿಸಬೇಕೆನ್ನುವುದು ಜನತೆ ಪ್ರಮುಖ ಬೇಡಿಕೆಯಾಗಿದೆ. ಈ ರೈಲು ಸಂಚಾರದಿಂದ ಸಾರ್ವಜನಿಕರಿಗೆ ಹಾಗೂ ಸರಕು ಸಾಗಾಣಿಕೆಗೆ ಅನಕೂಲವಾಗುವ ಜತೆಗೆ ಭವಿಷ್ಯದಲ್ಲಿ ಆದಾಯ ದ್ವಿಗುಣವಾಗುವ ಭರವಸೆ ಮೂಡಿಸಿದೆ.

ಈ ಭಾಗದ ಬಹುದಿನಗಳ ಕನಸು ಗದಗ–ವಾಡಿ ರೈಲ್ವೆ ಯೋಜನೆಯ ತಳಕಲ್ ನಿಂದ ಕುಷ್ಟಗಿವರೆಗೆ ಈ ರೈಲು ಮಾರ್ಗ ವಾಡಿವರೆಗೂ ಪೂರ್ಣಗೊಂಡರೆ ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಸಂಪರ್ಕ ಸಾಧ್ಯವಾಗಲಿದೆ. ಜನರ ಆಶೋತ್ತರಗಳಿಗೆ ಸ್ಪಂಧಿಸಿದ ನಮ್ಮ ಕೇಂದ್ರ ಸರಕಾರ ಹಾಗೂ ನೈಋತ್ಯ ರೈಲ್ವೆ ಇಲಾಖೆಗೆ ಮತ್ತೊಮ್ಮೆ ಅಭಿನಂದಿಸಿ, ಧನ್ಯವಾದ ಹೇಳುವೆ ಎಂದು ಸಚಿವರಿಗೆ ತಿಳಿಸಿದ್ದಾರೆ.

ಈ ವೇಳೆ ಮುಖಂಡ ನೀಲಕಂಠಯ್ಯ ಹಿರೇಮಠ ಇದ್ದರು.

# ಅಲ್ಲಾಹುವಿನ ಅನುಗ್ರಹಕ್ಕೆ ಬಡವರ ಸೇವೆ ಮಾಡಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಶಾಂತಿ ಸಹನೆ ಹಾಗೂ ಭಾತೃತ್ವದ ಸಂಕೇತವಾದ ಪವಿತ್ರ ರಮಜಾನ್ ಹಬ್ಬದ ಅಂಗವಾಗಿ ಸೋಮವಾರ ವಿಶೇಷ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಪಟ್ಟಣದ ಐತಿಹಾಸಿಕ ಈದ್ಗಾ, ಶಾಹಿ ಈದ್ಗಾ,ಮಿಲ್ಲತನಗರ ಈದ್ಗಾಗಳಲ್ಲಿ ಅಲ್ಲಾಹು ಅಕ್ಬರ್ ಅಲ್ಲಾಹು ಅಕ್ಬರ್ ಎಂಬ ಅಲ್ಲಾಹನ ನಾಮ ಸ್ಮರಣೆ ಮಾಡುತ್ತಾ ಈದ್ಗಾಗಳಿಗೆ ತೆರಳಿ ಸಾವಿರಾರು ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ನಮಾಜ್ ನಂತರ ಮನುಕುಲದ ಕಲ್ಯಾಣ ಹಾಗೂ ಒಳಿತಿಗಾಗಿ ದುವಾ( ಪ್ರಾರ್ಥನೆ) ಮಾಡಲಾಯಿತು. ಬಳಿಕ ತಮ್ಮ ತಮ್ಮ ಮನೆಗಳಿಗೆ ತೆರಳಿ ಹಬ್ಬದ ಪ್ರಯುಕ್ತ ಸಿದ್ಧಪಡಿಸಿದ ವಿಶೇಷ ಖಾದ್ಯವಾದ ಶೀರ– ಕುರಮಾ( ವಿಶೇಷ ಸಿಹಿ ಪದಾರ್ಥ) ಸವಿದರು. ತ್ಯಾಗ–ಸಹನೆ ಮುಖ್ಯ: ಐತಿಹಾಸಿಕ ನೂತನ ಈದ್ಗಾ ಮೈದಾನದಲ್ಲಿ ಸಾಮೂಹಿಕ ನಮಾಜ್ ನಿರ್ವಹಿಸಿದ ನಂತರ ಧರ್ಮ ಸಂದೇಶ ನೀಡಿದ ವಿದ್ವಾಂಸ ಡಾ.ಮಿನಹಾಜ್ಜುದ್ದೀನ ಖಾಜಿ ಮಾತನಾಡಿ ಮಾನವೀಯತೆಯ ಒಳಿತಿಗಾಗಿ ತನ್ನನ್ನು ತಾನು ಅರ್ಪಿಸುವವನೇ ನೈಜವಾದ ಮುಸ್ಲಿಂ, ಸತ್ಯಮಾರ್ಗದಲ್ಲಿ ನಡೆಯುವಾಗ ಎದುರಾಗುವ ಸಂಕಷ್ಟಗಳನ್ನು ಎದುರಿಸಲು ಬೇಕಾಗುವ ಸಹನೆಯ ಗುಣವನ್ನು ಬೆಳೆಸಲು, ಹಾಗೂ ಹಸಿದವರ ಸಂಕಷ್ಟವನ್ನು ಅರಿಯಲು ಒಂದು ತಿಂಗಳವರೆಗೆ ಉಪವಾಸ ವೃತಗಳ ತರಬೇತಿಯನ್ನು ನೀಡಲಾಯಿತು, ಸಮಾಜದಲ್ಲಿರುವ ಬಡವರ ನಿರ್ಗತಿಕರ ಕಲ್ಯಾಣಕ್ಕಾಗಿ ಧನವನ್ನು ತ್ಯಾಗ ಮಾಡುವ ಮನೋಭಾವ ರೂಡಿಸಿಕೊಳ್ಳಬೇಕು, ಸದಾ ಸತ್ಯದ ಪಥದಲ್ಲಿ ನಡೆಯಬೇಕು, ಸುಳ್ಳು ನಮ್ಮನ್ನು ಪಾಪದ ಪ್ರತಾಪಕ್ಕೆ ತಳ್ಳುತ್ತದೆ, ಅದು ನಮ್ಮನ್ನು ಹಾಳುಮಾಡುತ್ತದೆ ಸುಳ್ಳನ್ನು ತ್ಯಜಿಸಿ ಸತ್ಯದ ಮಾರ್ಗದಲ್ಲಿ ನಡೆಯಿರಿ, ದುರ್ಗಣಗಳನ್ನು ತ್ಯಜಿಸಿ ಸದ್ಗುಣಗಳನ್ನು ಅಳವಡಿಸಿಕೊಂಡು ಸಂಸ್ಕಾರಯುತ ಬದುಕು ನಡೆಸಲು ಪ್ರಯತ್ನಿಸಬೇಕು ಎಂದು ಹೇಳಿದರು. ಧಾರ್ಮಿಕ ಮುಖಂಡ ಸೈಯದ್ ಶಕೀಲ ಅಹ್ಮದ್ ಖಾಜಿ, ಈದ್ಗಾ ಕಮಿಟಿ ಅಧ್ಯಕ್ಷ ಕೆ.ಎಂ.ಡೋಣಿ, ಉಪಾಧ್ಯಕ್ಷ ಅಬ್ದುಲ್ ರಜಾಕ್ ಮನಗೂಳಿ, ಕಾರ್ಯದರ್ಶಿ ಅಬ್ದುಲ್ ರೆಹಮಾನ ಎಕೀನ, ಜಾಮೀಯಾ ಮಸೀದಿ ಅಧ್ಯಕ್ಷ ಖಾಜಾ ಹುಸೇನ್ ಸಗರ,ಜಮಾತೆ ಇಸ್ಲಾಮಿ ಹಿಂದ್ ಅಧ್ಯಕ್ಷ ಮುಜಾಹೀದ ನಮಾಜಕಟ್ಟಿ,ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಿಬೂಬ ಚೋರಗಸ್ತಿ, ಮುಸ್ಲಿಂ ಬ್ಯಾಂಕ್ ಅಧ್ಯಕ್ಷ ಚಾಂದಹುಸೇನ ಖಾಂಜಾದೆ, ಗಣ್ಯರಾದ ಗನಿಸಾಬ ಲಾಹೋರಿ, ಅಲ್ಲಾಭಕ್ಷನಮಾಜಕಟ್ಟಿ,ಸಿಕಂದರಸಾಬ ವಠಾರ, ಎಂ.ಎ.ಮೇತ್ರಿ,ರೋಶನ್ ಡೋಣಿ, ನಿರಂಜನ ಶಾಮಕಾಂದಾರ,ಅಬ್ದುಲ್ ಸತ್ತಾರ ಅವಟಿ,ಶಮ್ಸುದ್ದೀನ ನಾಲಬಂದ ಹಸನಸಾಬ ಮನಗೂಳಿ ಮತ್ತಿತರರು ಇದ್ದರು.

# ಬ್ಯಾಂಕ್ ಕಾಲೋನಿಯಲ್ಲಿ ಸಂಸ್ಕಾರ ಭಾರತಿಯಿಂದ ಚೈತ್ರದ ಚಿಗುರು



ಬಳ್ಳಾರಿ:ಮಾ.31 :ಸಂಸ್ಕಾರ ಭಾರತಿ ಜಿಲ್ಲಾ ಘಟಕ ಯುಗಾದಿ ಹಬ್ಬದ ಪ್ರಯುಕ್ತ ಚೈತ್ರದ ಚಿಗುರು ಕಾರ್ಯಕ್ರಮ ನಿನ್ನೆ ಸಂಜೆ ಬ್ಯಾಂಕ್ ಕಾಲೋನಿಯ ಉದ್ಯಾನವನದ ಬಯಲು ರಂಗವೇದಿಕೆಯಲ್ಲ ನಡೆಯಿತು.

ಕಾರ್ಯಕ್ರಮದ ಅಂಗವಾಗಿ ಕಾಲೋನಿಯ ಗೃಹಿಣಿಯರಿಗಾಗಿ ಸಂಜೆ ರಂಗೋಲಿ ಸ್ಪರ್ಧೆ, ಮಕ್ಕಳಿಗಾಗಿ ಭಾರತೀಯ ಸಾಂಪ್ರದಾಯಿಕ ಉಡುಪು ಪ್ರದರ್ಶನ ಏರ್ಪಡಿಸಲಾಗಿತ್ತು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಅದ್ಯಕ್ಷ ಯಲ್ಲನಗೌಡ ಶಂಕರ ಬಂಡೆ ವಹಿಸಿದ್ದರು.

ಪ್ರಾರ್ಥನೆ ಮತ್ತು ಧ್ಯೇಯಗೀತೆಯನ್ನು ಲಕ್ಷ್ಮಿ ಪವನ್ ಕುಮಾರ್ ನೆರವೇರಿಸಿದರು. ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಧಾನ ಕಾರ್ಯದರ್ಶಿ ಅಂಬರೀಶ ಹಚ್ಚೊಳ್ಳಿ, ಇಂದಿನ ವಿದ್ಯಾರ್ಥಿಗಳಲ್ಲಿ ವಿದ್ಯೆಯ ಜೊತೆಗೆ ಸಂಸ್ಕಾರ ಇರಬೇಕು ಸಮಾಜದಲ್ಲಿ ಸಂಸ್ಕಾರವಂತರಾಗಿದ್ದಲ್ಲಿ ಮಾತ್ರ ಉತ್ತಮ ಸಮಾಜವೆನಿಸುತ್ತದೆ ಈ ನಿಟ್ಟಿನಲ್ಲಿ ಪೋಷಕರು ತಮ್ಮ ಮಕ್ಕಳಲ್ಲಿ ಉತ್ತಮ ಸಂಸ್ಕಾರ ಕಲಿಸಬೇಕು ಎಂದರು.

ಶಶಿಕಲಾ ಕಾರ್ಯಕ್ರಮ ಉದ್ಘಾಟಿಸಿ ಶುಭ ಹಾರೈಸಿದರು "ಭಾರತದ ಭವ್ಯ ಪರಂಪರೆ ಹಾಗೂ ಯುಗಾದಿ ಹಬ್ಬ " ಕುರಿತಾಗಿ ವಿಶೇಷ ಉಪನ್ಯಾಸ ನೀಡಿದ ಎ.ಎಂ.ಪಿ ವೀರೇಶಸ್ವಾಮಿ, ಭಾರತೀಯರು ಆಚರಿಸುವ ಹಬ್ಬಗಳು ಈ ದೇಶದ ಸಂಸ್ಕಾರದ ಅಸ್ಮಿತೆಯಾಗಿದೆ,ಅದರಲ್ಲೂ ಯಗಾದಿ ಭಾರತೀಯರ ಪಾಲಿಗೆ ಹೊಸ ವರ್ಷವಾಗಿದ್ದು ಈ ಸಮಯದಲ್ಲಿ ಭಾರತೀತರಯ ಹೊಸ ಬಟ್ಟೆ ಧರಿಸಿ ದೇವರ ದರ್ಶನ ಪಡೆದು ಬೇವು ಬೆಲ್ಲವನ್ನು ಸವಿಯುವುದು, ಸಾಯಂಕಾಲ ಪಂಚಾಂಗ ಶ್ರವಣ ಬಿದಿಗೆ ಚಂದ್ರ ದರ್ಶನ ಇವುಗಳೆಲ್ಲವೂ ಈ ಹಬ್ಬದ ವಿಶೇಷತೆಗಳಾಗಿವೆ ಎಂದರು .

ಮಹಾಂತಯ್ಯ, ಶಿವೇಶ್ವರಗೌಡ ಕಲ್ಲುಕಂಭ ಉಪಸ್ಥಿತರಿದ್ದರು ರಂಗೋಲಿ ಹಾಗೂ ಉಡುಪು ಪ್ರದರ್ಶನದ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಶ್ರೀನಿವಾಸ್ ಜಿ ಉತ್ತರ ಕರ್ನಾಟಕ ಸಂಘಟಕರು ಮತ್ತು ಕೆ ಎಂ ಸಿದ್ದಲಿಂಗಯ್ಯ ಬಹುಮಾನ ವಿತರಿಸಿದರು ಜಾನಪದ ಕಲಾವಿದ ಯಲ್ಲನಗೌಡ ಶಂಕರ ಬಂಡೆ ಹಾಗೂ ಜಡೇಶ್ ಎಮ್ಮಿಗನೂರು ಅವರು ಕು.ವೆಂ ಪು ವಿರಚಿತ ಭಾವಗೀತೆಗಳನ್ನು ಹಾಡಿದರು. ಆರಂಭದಲ್ಲಿ ರಂಗೈಕ್ಯರಾದ ಜೋಯಿಸ್ ವೆಂಕೋಬಚಾರ್ಯ ಹಾಗೂ ಮೇಕಪ್ಪ ಕಲಾವಿದ ರಾಮಲು ಇವರಿಗೆ ಶ್ರದ್ಧಾಂಜಲಿ ಅರ್ಪಿಸಿಲಾಯಿತು.

ವಿಷ್ಣು ಹಡಪದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು ಈ ಸಂದರ್ಭದಲ್ಲಿ ತೊಗಲುಗೊಂಬೆ ಕಲಾವಿದ ಹೊನ್ನೂರು ಸ್ವಾಮಿ ನೇತಿ ರಘುರಾಮ್ ಮತ್ತು ಬ್ಯಾಂಕ್ ಕಾಲೋನಿಯ ನಾಗರಿಕರು ಇದ್ದರು.

# ಯುಗಾದಿ ಭಾರತೀಯರಿಗೆ ಹೊಸವರ್ಷ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಮಾ.31: ಯುಗಾದಿ ಹಬ್ಬದ ದಿನವೇ ಭಾರತೀಯರಿಗೆ ಹೊಸ ವರ್ಷದ ದಿನ ಎಂದು ಕರ್ನಾಟಕ ರಾಜ್ಯ ಕ್ರಿಯಾಶೀಲ ಶಿಕ್ಷಕರ ವೇದಿಕೆ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ರವಿಚೇಳ್ಳಗುರ್ಕಿ ಹೇಳಿದರು.

ಅವರು ಇಂದು ತಾಲೂಕಿನ ಸಂಜೀವರಾಯನಕೋಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಯುಗಾದಿ ಹಬ್ಬಕ್ಕೆ ವಿನೂತನ ಸ್ವಾಗತ ಎಂಬ ಘೋಷಾ ವಾಕ್ಯದೊಂದಿಗೆ ಹಮ್ಮಿಕೊಂಡಿದ್ದ 'ಬುದ್ಧ–ಬಸವ–ಅಂಬೇಡ್ಕರ್ ಅವರ ವಿಚಾರಧಾರೆ ಕಾರ್ಯಕ್ರಮವನ್ನು ಮಕ್ಕಳಿಗೆ ಬೇವು ಬೆಲ್ಲ ತಿನ್ನಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಸಂಕ್ರಾಂತಿಯಂದು ಎಳ್ಳು ಬೆಲ್ಲ ಯುಗಾದಿಯಂದು ಬೇವು ಬೆಲ್ಲ ಹಂಚಿ ಸಂತೋಷ ವಿನಿಮಯ ಮಾಡಿಕೊಳ್ಳುವುದು ವಾಡಿಕೆ.ದ್ವೇಷ ಮರೆತು ಒಟ್ಟಿಗೆ ಬಾಳುವುದುರ ಸಂಕೇತವಾಗಿದೆ.


ಪುರಾತನ ಕಾಲದಿಂದಲೂ ಭಾರತೀಯರಿಗೆ ಯುಗಾದಿ ಹಬ್ಬ ಪವಿತ್ರ ಹಬ್ಬವಾಗಿದೆ. ಅಂದು ರೈತ ಹೊಲಕ್ಕೆ ಹೋಗಿ ಭೂ ತಾಯಿಗೆ ಪೂಜೆ ಸಲ್ಲಿಸಿ ಈ ವರ್ಷ ಉತ್ತಮ ಮಳೆ ಬೆಳೆ ನೀಡುವಂತೆ ಪ್ರಾರ್ಥನೆ ಸಲ್ಲಿಸುತ್ತಾನೆ.

ಬುದ್ಧ ಬಸವ ಅಂಬೇಡ್ಕರ್ ಅವರು ಸಾಮಾಜ ಸುಧಾರಣೆ ಹಾಗೂ ಏಳಿಗೆಗಾಗಿ ಶ್ರಮಿಸಿದವರು.ಅವರ ಆದರ್ಶ ಗುಣಗಳನ್ನು ನಾವು ನೀವು ಅಳವಡಿಸಿಕೊಳ್ಳೋಣ ಎಂದು ಹೇಳಿದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಶಿಕ್ಷಕರಾದ ದಿಲ್ಷಾದ್ ಬೇಗಂ, ಸುಮತಿ, ವೈಶಾಲಿ, ಉಮ್ಮೆಹಾನಿ, ಶಶಮ್ಮ, ರಾಮಾಂಜಿನೇಯ, ಗುರುಪ್ರಸಾದ್, ವಿಜಯ ಮುಂಡ್ರಿಗಿ ಹಾಗೂ ವಿದ್ಯಾರ್ಥಿ ಪ್ರತಿನಿಧಿ ಕೆ.ಎಸ್. ಅನುಷ, ಲಾವಣ್ಯ ಹಾಗೂ ನಿತ್ಯ ಮುಂತಾದವರು ಉಪಸ್ಥಿತರಿದ್ದರು.

# ಸಮತಾ ಸೈನಿಕ ದಳ ಸಂಘ ಶತಮಾನೋತ್ಸವ ಪೂರ್ವ ಬಾವಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ:ದಿನಾಂಕ29.03.2025 ಶನಿವಾರ ದಂದು ಆರ್ ವಾಯಿ ದಿಗ್ಗಿ ಕಾಲೇಜ್ ನಲ್ಲಿ ಡಾ. ಬೀ ಆರ್ ಅಂಬೇಡ್ಕರ್ ಅವರ ಸ್ಥಾಪಿತವಾದ, ಸಮತಾ ಸೈನಿಕ ದಳ ಸಂಘ 2025 ಕ್ಕೆ 100 ವರ್ಷ ಪೂರೈಸಿದ್ದು ಇದರ ಅಂಗವಾಗಿ ಶತಮಾನೋತ್ಸವ ಕಾರ್ಯಕ್ರಮ ಸಭೆ ಕರೆಯಲಾಗಿದ್ದು ಇದರ ಅಧ್ಯಕ್ಷತೆ ರಾಜ್ಯ ಕಾರ್ಯಾಧ್ಯಕ್ಷ ಮಹಾದೇವ್ ದಿಗ್ಗಿ ವಹಿಸಿ ಅಂಬೇಡ್ಕರ್ ಅವರ ಹೋರಾಟದ ಬಗ್ಗೆ ಮರು ನೆನಪಿಸಿ ಇವತ್ತಿನ ಹೋರಾಟದ ಬಗ್ಗೆ ಬೇಸರ ವ್ಯಕ್ತಪಡಿಸಿದರು ಮತ್ತು ಶತಮಾನೋತ್ಸವದ ಬಗ್ಗೆ ತಾಲೂಕಿನ ಸ್ಥಳಿಯ ಜನತೆಯನ್ನು ಬಾಗವಹಿಸುವಂತ್ತೆ ಮಾಡಿ ಸಮಾಜದ ಮುಖಂಡರಿಗೆ ಕರೆಯಿಸಿ ಅಚ್ಚು ಕಟ್ಟಾಗಿ ಮಾಡಬೇಕೆಂದು ತಿಳಿಸಿದರು. ಈ ಸಭೆಯಲ್ಲಿ ಜಿಲ್ಲಾ ಅಧ್ಯಕ್ಷ ಅಂಬ್ರೇಶ್ ದಿಗ್ಗಿ , ಸುರುಪರ ತಾಲೂಕ ಅಧ್ಯಕ್ಷ ಪರಶುರಾಮ್ ಗಡ್ಡದ,ಶಹಾಪೂರ ತಾಲೂಕ ಅಧ್ಯಕ್ಷ ಡಾ.ಮರೆಪ್ಪ ಪರಮೇಶ್ವರ, ಮಹೇಂದ್ರಕುಮಾರ ದಿಗ್ಗಿ ಅವರು ಈ ಕಾರ್ಯಕ್ರಮ ತುಂಬ ವಿಜೃಂಭಣೆಯಿಂದ ಹಾಗೂ ವ್ಯವಸ್ಥಿತವಾಗಿ ಬೇರೆ ಬೇರೆ ಜಿಲ್ಲೆಗಳಿಂದ ವಿದ್ವಾಂಸರಿಗೆ ಕರೆಯಿಸಿ ಅಂಬೇಡ್ಕರ್ ಅವರ ವಿಚಾರಗಳು ಜನರಿಗೆ ತಲುಪುವಂತೆ ಮಾಡಬೇಕು ಇದು ಒಂದು ಮುಂದಿನ ಜನಾಂಗಕ್ಕೆ ಹೊಸ ದಾರಿ ದೀಪವಾಗಬೇಕು ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು ,ಮಾಸ್ತಿ ಸರ್ ಇತರರು ಉಪಸ್ಥಿತರು ಇದ್ದರು ಮಾಸ್ತಿ ಆರ್ ನಿರೂಪಿಸಿದರು ಮರೆಪ್ಪ ಎಮ್ ವಂದಿಸಿದರು.

# ರಾಘವ ಕಲಾಮಂದಿರದಲ್ಲಿ ಪಂಚಾಂಗ ಶ್ರವಣ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.31:ವಿಶ್ವಾವಸುನಾಮ ಸಂವತ್ಸರ ನೂತನ ವರ್ಷದ ಶುಭ ಸಂದರ್ಭದಲ್ಲಿ ನಗರದ ರಾಘವ ಕಲಾಮಂದಿರದಲ್ಲಿ ಪಂಚಾಂಗ ಶ್ರವಣ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಪಂಚಾಂಗ ಕರ್ತ ಬಳ್ಳಾರಿಯ ನಾಗಲ ಕೇರಿ ನಿವಾಸಿಗಳಾದ ಡಾಕ್ಟರ್ ಎ ಮಹೇಶ್ ಶರ್ಮಾ ಮತ್ತು ಸಂಸ್ಥೆಯ ಗೌರವಾಧ್ಯಕ್ಷ ಕೆ ಚನ್ನಪ್ಪ ಅಧ್ಯಕ್ಷರಾದ ಕೆ ಕೊಟೆಶ್ವರ ರಾವ್ ಉಪಾಧ್ಯಕ್ಷರಗಳಾದ ಹೆಚ್ ವಿಷ್ಣುವರ್ಧನ್ ರೆಡ್ಡಿ ಮತ್ತು ಜಂಟಿ ಕಾರ್ಯದರ್ಶಿ ಎಂ ರಾಮಾಂಜನೇಯಲು ಎಲ್ಲರೂ ಸೇರಿ ರಾಮನ ಫೋಟೋಗೆ ಪೂಜೆ ಸಲ್ಲಿಸಿ ನೂತನ ವರ್ಷದ ಯುಗಾದಿ ಪಂಚಾಂಗ ಪಠಣ ಕಾರ್ಯಕ್ರಮ ಆಚರಿಸಲಾಯಿತು. ಡಾಕ್ಟರ್ ಎ ಮಹೇಶ್ ಶರ್ಮಾ ರವರು ಈ ವರ್ಷದ ರಾಶಿ ಪಲಗಳ ಬಗ್ಗೆ ಮತ್ತು ಮಳೆ ಮತ್ತು ರಾಜಕೀಯ ಬಗ್ಗೆ ವಿವರಣೆ ನೀಡಿದರು. ಶ್ರೀ ಎನ್ ಬಸವರಾಜ ಅವರು ಕಾರ್ಯಕ್ರಮ ನಿರ್ವಹಿಸಿದರು.

# ಸಂಭ್ರಮದ ಕಣವಿ ವೀರಭದ್ರೇಶ್ವರ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.31-ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಆವರಣದಲ್ಲಿರುವ ಕಣವಿ ವೀರಭದ್ರೇಶ್ವರ ಮಹಾರಥೋತ್ಸವ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ರವಿವಾರ ವೈಭವಯುತವಾಗಿ ಜರುಗಿತು.

ಬೆಳಗಿನ ಜಾವ ಶ್ರೀ ವೀರಭದ್ರೇಶ್ವರ ದೇವರಿಗೆ ಮಹಾರುದ್ರಾಭಿಷೇಕ, ಪುಷ್ಪಾಲಂಕಾರ,ಮಹಾಮಂಗಳಾರುತಿ ನಡೆಯಿತು.ಸಾಯಂಕಾಲ ಜನಸಾಗರದ ಹರ್ಷೋದ್ಘಾರದೊಂದಿಗೆ ರಥೋತ್ಸವ ಸಂಭ್ರಮದಿಂದ ಜರುಗಿತು. ಭಕ್ತರು ತೇರಿಗೆ ಉತ್ತತ್ತಿ, ಹೂವು, ಹಣ್ಣು ಎಸೆದು ಹರಕೆ ತೀರಿಸಿದರು.

ಬೀಳಗಿ ಕಲ್ಮಠದ ಪೂಜ್ಯ ಗುರುಪಾದ ಸ್ವಾಮಿಗಳು ರಥೋತ್ಸವಕ್ಕೆ ಚಾಲನೆ ನೀಡಿದರು. ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಸಂಘದ ಸದಸ್ಯರುಗಳು, ಕಣವಿ ವೀರಭದ್ರೇಶ್ವರ ಟ್ರಸ್ಟ್ ಮತ್ತು ಜಾತ್ರಾ ಕಮೀಟಿಯ ಸದಸ್ಯರುಗಳು ಸೇರಿದಂತೆ ನಗರದ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಭಾಗವಹಿಸಿದ್ದರು.

# ಭದ್ರಕಾಳಮ್ಮ ಯಾತ್ರಿ ನಿವಾಸ ಲೋಕಾರ್ಪಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.31-ಐತಿಹಾಸಿಕ ಮುಚಖಂಡಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಯಾತ್ರಿ ನಿವಾಸ ನಿರ್ಮಿಸುವ ಮೂಲಕ ಮುಚಖಂಡಿ ಕ್ಷೇತ್ರದ್ರ ಬೆಳವಣಿಗೆಗೆ ಜೀರ್ಣೋದ್ದಾರ ಕಮೀಟಿ ಉತ್ತಮ ಕಾರ್ಯ ಮಾಡಿದೆ ಎಂದು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಹೇಳಿದರು.

ಸಮೀಪದ ಮುಚಖಂಡಿಯಲ್ಲಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ದೇವಸ್ಥಾನ ಜೀರ್ಣೋದ್ದರ ಕಮೀಟಿಯಿಂದ ನಿರ್ಮಿತವಾಗಿರುವ ಭದ್ರಕಾಳಮ್ಮ ಯಾತ್ರಿನಿವಾಸವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು,ಮುಚಖಂಡಿ ವೀರಭದ್ರೇಶ್ವರ ಕ್ಷೇತ್ರಕ್ಕೆ ಬರುವ ಜನರಿಗೆ ವಸತಿಗಾಗಿ ಈ ಯಾತ್ರಾ ನಿವಾಸ ಬಹಳಷ್ಟು ಅನುಕೂಲವಾಗಲಿದೆ ಭಕ್ತಾಧಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ವೀರಭದ್ರೇಶ್ವರ ದೇವಸ್ಥಾನ ಜೀರ್ಣೋದ್ದರ ಕಮೀಟಿ ಅಧ್ಯಕ್ಷ ಗುರುಬಸವ ಸೂಳಿಭಾವಿ ಮಾತನಾಡಿ, ಭಕ್ತರ ದೇಣಿಗೆ ಹಾಗೂ ಸಮಿತಿಯಿಂದ ಅತ್ಯಂತ ಸುಸಜ್ಜಿತವಾದ 3-4 ಬೆಡ್‌ಗಳ 16 ಕೋಠಡಿಗಳ ಭವ್ಯ ಯಾತ್ರಿನಿವಾಸ ನಿರ್ಮಿಸಲಾಗಿದ್ದು, ಇದರಲ್ಲಿ ಕೆಲವು ತಂಪು ಹವಾ ನಿಯಂತ್ರಿತ ಕೊಠಡಿಗಳು ಕೂಡಾ ಇವೆ. ದೇವಸ್ಥಾನದ ಕ್ಷೇತ್ರ ಬೆಳವಣಿಗೆಗೆ ಇದು ಕೂಡಾ ಸಹಕಾರಿಯಾಗಲಿದೆ. ಭಕ್ತಾಧಿಗಳ ಅನುಕೂಲಕ್ಕಾಗಿ ಇನ್ನು ಅನೇಕ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಬಿಲ್‌ಕೆರೂರ ಬಿಲ್ವಾಶ್ರಮದ ಸಿದ್ದಲಿಂಗ ಶಿವಾಚಾರ್ಯ ಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಇದೇ ಸಂದರ್ಭದಲ್ಲಿ ಕಟ್ಟಡದ ಕೊಠಡಿ ದಾನಿಗಳಿಗೆ ಹಾಗೂ ಕಟ್ಟಡ ನಿರ್ಮಾಣ ಮಾಡಿರುವವರನ್ನು ಎಲ್ಲರಿಗೂ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಪ್ರಧಾನ ಅರ್ಚಕರ ಪ್ರಭುಸ್ವಾಮಿ ಸರಗಣಾಚಾರಿ,ಸಂಗಯ್ಯ ಸರಗಣಾಚಾರಿ, ಮಲ್ಲಿಕಾರ್ಜುನ ಹಂಡಿ, ಸಂಗಮೇಶ ಹೊನ್ನೂರ, ಸಿದ್ದರಾಮಯ್ಯ ಹಿರೇಮಠ, ರಾಚಯ್ಯ ಸರಗಣಾರಿ. ಹರೀಶ ಪಾಟೀಲ, ವೀರಣ್ಣ ಗಂಗಾವತಿ, ಅಲ್ಲಯ್ಯ ಸರಗಣಾಚಾರಿ,ರಂಗಯ್ಯ ಜಳೇಂದ್ರ, ಬಸವರಾಜ ಲುಕ್ ಭಾಗವಹಿಸಿದ್ದರು.

# ಶಾಕಲಾಸಪಲ್ಲಿ ಗ್ರಾಮದ ಜಲ ಜೀವನ ಮಿಷನ್ ಕಾಮಗಾರಿ ಪೂರ್ಣಗೊಳಿಸಿ ಗ್ರಾಮಸ್ಥರು ಆಗ್ರಹ.



ಮಲ್ಲಮ್ಮ ನುಡಿ ವಾರ್ತೆ

ಸೇಡಂ:ಮಾ.31.ತಾಲೂಕಿನ ಮೋತಕಪಲ್ಲಿ ಗ್ರಾಮ ಪಂಚಾಯಿತಿವ್ಯಾಪ್ತಿಗೆ ಬರುವ ಶಕಲಾಸಪಲ್ಲಿ ಗ್ರಾಮದಲ್ಲಿ ಜನರಿಗೆ ಮನೆ ಮನೆಗೆ ನೀರು ತಲುಪಲಿ ಎಂದು ಜಲಜೀವನ್ ಮಿಷನ್ ಎಂಬ ಯೋಜನೆಯು ಜನರಿಗೆ ನೀರಿನ ಸಮಸ್ಯೆ ಪರಿಹರಿಸಲು ಕೇಂದ್ರ ಸರ್ಕಾರದಿಂದ ಜಾರಿಗೊಂಡಿರುವ ಯೋಜನೆಯಾಗಿದ್ದು.

ಈ ಯೋಜನೆಯ ಶಕಲಾಸಪಲ್ಲಿ ಗ್ರಾಮದಲ್ಲಿ ಅನುಷ್ಠಾನಗೊಂಡಿದ್ದು ಕಾರ್ಯ ಪ್ರಾರಂಭವಾಗಿ ಎರಡು ತಿಂಗಳಗಳ ಕಾಲ ಕೆಲಸ ಪ್ರಾರಂಭಿಸಿ ಕೆಲವೊಂದು ಓಣಿಗಳಲ್ಲಿ ಅರ್ಧ ಕೆಲಸ ಮಾಡಿ ಗ್ರಾಮದಲ್ಲಿ ಸಿ. ಸಿ. ರಸ್ತೆ ಮಧ್ಯ ಬಾಗದಲ್ಲಿ ಕೊರೆದು ತೆಗ್ಗು ಗುಂಡಿಗಳನ್ನಾಗಿ ಮಾಡಿ ಅರ್ಧ ಕೆಲಸವನ್ನು ಮಧ್ಯದಲ್ಲಿ ಬಿಟ್ಟು ಹೋಗಿದ್ದಾರೆ.

ಇದರಿಂದ ಜನರು ವಾಹನಗಳು ರಾತ್ರಿಸಮಯದಲ್ಲಿ ತೆಗ್ಗುಗಳಲ್ಲಿ ಬಿದ್ದು ಗಾಯಗಳಾಗಿ ಜನರು ತುಂಬಾ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಗುತ್ತೇದಾರರು ಈ ಕೆಲಸವನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕೆಂದು ಗ್ರಾಮಸ್ಥರು ಆಗ್ರಹಿಸಿದರು.

# ಸಂಭ್ರಮದ ಬೀರಲಿಂಗೇಶ್ವರ ಜಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.31-ತಾಲೂಕಿನ ಕಲಾದಗಿ ಬಳಿಯ ಹಿರೇಸಂಶಿ ಗ್ರಾಮದ ಬೀರಲಿಂಗೇಶ್ವರ ಜಾತ್ರಾ ಮಹೋತ್ಸವ ಸೋಮವಾರ ಸಂಭ್ರಮದಿಂದ ಜರುಗಿತು.

ಬೆಳಿಗ್ಗೆಯಿಂದಲೇ ದೇವಸ್ಥಾನದಲ್ಲಿ ವಿವಿಧ ಪೂಜಾ ಕೈಂಕರ್ಯಗಳು ನಡೆದವು. ನಂತರ ಘಟಪ್ರಭಾ ನದಿ ದಡದಲ್ಲಿ ಗಂಗಾಪೂಜೆ ನೆರವೇರಿಸಲಾಯಿತು.

ಸರ್ಕಾರಿ ತೋಟದ ಶಾಲೆಯಿಂದ ಆರಂಭವಾದ ಪಲ್ಲಕ್ಕಿ ಮೆರವಣಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ನಂತರ ದೇವಸ್ಥಾನ ತಲುಪಿತು. ಮೆರವಣಿಗೆಯುದ್ದಕ್ಕೂ ಭಂಡಾರ ಎರಚಿ,ಬೀರಲಿಂಗೇಶ್ವರನಿಗೆ ಜೈಕಾರ ಹಾಕುತ್ತ ಭಕ್ತರು ಸಂಭ್ರಮಿಸಿದರು.

ಮಹಿಳೆಯರು ಆರತಿ ಹಿಡಿದು ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದರು. ದೇವಸ್ಥಾನದ ಆವರಣದಲ್ಲಿ ಮಧ್ಯಾಹ್ನ ಅನ್ನಸಂತರ್ಪಣೆ ನಡೆಯಿತು.

# ಕಳುವಾದ ದ್ವಿಚಕ್ರ ವಾಹನಗಳ ಮಾಲೀಕರು ಗಮನಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಮಾ.31-ಕಲಬುರಗಿನಗರ ವಿಶ್ವವಿದ್ಯಾಲಯದ ಪೊಲೀಸ್ ಠಾಣೆಯ ಆವರಣದಲ್ಲಿ ವಾರಸುದಾರರಲ್ಲದ ಒಟ್ಟು ಹಳೆಯ 77 ದ್ವಿಚಕ್ರ ವಾಹನಗಳನ್ನು ನಿಲ್ಲಿಸಲಾಗಿದೆ. ಆದರೆ ಈವರೆಗೆ ವಾಹನಗಳ ಮಾಲೀಕರು ಪತ್ತೆಯಾಗಿರುವುದಿಲ್ಲ ಎಂದು ಕಲಬುರಗಿ ನಗರ ವಿಶ್ವವಿದ್ಯಾಲಯದ ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷಕರು ತಿಳಿಸಿದ್ದಾರೆ. ಆರ್.ಟಿ.ಓ. ಇವರಿಂದ ಈ ವಾಹನ ಮಾಲೀಕರ ಮಾಹಿತಿಯನ್ನು ಪಡೆದುಕೊಂಡಿದ್ದು, ವಾಹನ ಮಾಲೀಕರ ಪತ್ತೆಗಾಗಿ ಈ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದ್ದು, ಯಾರಾದರೂ ತಮ್ಮ ವಾಹನಗಳು ಕಳೆದು ಹೋದಲ್ಲಿ ಕಲಬುರಗಿ ನಗರದ ವಿಶ್ವವಿದ್ಯಾಲಯದ ಪೊಲೀಸ್ ಠಾಣೆಗೆ ಭೇಟಿ ನೀಡಿ ತಮ್ಮ ದ್ವಿಚಕ್ರ ವಾಹನ ಗುರುತಿಸಿಕೊಂಡು ತಮ್ಮ ವಾಹನದ ಮೂಲ ದಾಖಲೆಗಳನ್ನು ತೆಗೆದುಕೊಂಡು ಬರಬೇಕು. ಈ ವಾಹನಗಳ ಮಾಲೀಕರು ಬಾರದೇ ಇದ್ದಲ್ಲಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿರಿ:8073731722

# ರಾಯಕೋಡ ಶಾಲೆಯಲ್ಲಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ಸೇಡಂ. ಮಾ. 27. ವಿಧಾನಸಭಾ ಕ್ಷೇತ್ರದ ರಾಯಕೋಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 7ನೇ ತರಗತಿಯ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಎಸ್. ಡಿ. ಎಮ್. ಸಿ. ಅಧ್ಯಕ್ಷ ಮುಸ್ತಪ್ಪ ಸದಸ್ಯರಾದ ಶಾಂತಕುಮಾರ ಮುಖ್ಯಗುರುಗಳಾದ ಮಲ್ಲಯ್ಯ ಸ್ವಾಮಿ ಅತಿಥಿ ಶಿಕ್ಷಕರಾದ ಬ್ರಹ್ಮಾನಂದರಡ್ಡಿ ಗೋಟುರ ಹನುಮಂತ,ಸಂತೋಷ,ನಾಗಮ್ಮ ಮಂಗಲಗಿ ಮತ್ತು ಎಲ್ಲಾ ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ ಎಲ್ಲಾ ಅತಿಥಿಗಳು ಮಾತನಾಡುತ್ತ ವಿದ್ಯಾರ್ಥಿಗಳು ಮುಂದಿನ ವಿದ್ಯಾಭ್ಯಾಸವನ್ನು ಅತ್ಯಂತ ಶ್ರದ್ಧೆಯಿಂದ ಮಾಡಿ ಶಾಲೆಗೆ ಮತ್ತು ನಿಮ್ಮ ತಂದೆ ತಾಯಿಗಳಿಗೆ ಕೀರ್ತಿ ತರಲೆಂದು ತಿಳಿ ಹೇಳಿದರು.

ಈ ಕಾರ್ಯಕ್ರಮದಲ್ಲಿ 2025 ನೇ ಸಾಲಿನ ನವೋದಯ ಶಾಲೆಗೆ ಈ ಶಾಲೆಯಿಂದ ಆಯ್ಕೆಯಾದ ಶಿವರಾಮರೆಡ್ಡಿ ತಂದೆ ಬ್ರಹ್ಮಾನಂದರೆಡ್ಡಿ ವಿದ್ಯಾರ್ಥಿ ಗೆ ಎಸ್. ಡಿ. ಎಮ್. ಸಿ. ವತಿಯಿಂದ ಸನ್ಮಾನಿಸಿದರು.

ಈ ಕಾರ್ಯಕ್ರಮವು ಅತ್ಯಂತ ವಿಜ್ರಂಭಣೆಯಿಂದ ನೆರವೇರಿಸಲಾಯಿತು

# ಇಂದಿನಿಂದ ಮಹಾತ್ಮಗಾಂಧಿ ನರೇಗಾ ಕೂಲಿ 370/- ರೂ. ಗೆ ಹೆಚ್ಚಳ ಹಾಗೂ ಬೇಸಿಗೆಯಲ್ಲಿ ನಿರಂತರ ಕೆಲಸ: ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.31-ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ನೀಡುತ್ತಿದ್ದ ಕೂಲಿಯು ಏ.01 ರಿಂದ 370/-ರೂ. ಗೆ ಹೆಚ್ಚಳವಾಗಿದ್ದು, ಬೇಸಿಗೆ ಅವಧಿಯಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ನಿರಂತರವಾಗಿ ಕೆಲಸ ನೀಡಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ತಿಳಿಸಿದ್ದಾರೆ.

ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೂಲಿ ಪ್ರಸ್ತುತ ವರ್ಷದಲ್ಲಿ ನೀಡುತ್ತಿರುವ 349/-ರೂ. ಗಳಿಂದ 370/- ರೂ. ಗಳಿಗೆ ಪರಿಷ್ಕರಿಸಿ ಏ.01 ರಿಂದ ಆರ್ಥಿಕ ವರ್ಷ 2025-26 ನೇ ಸಾಲಿಗೆ ಅನ್ವಯವಾಗುವಂತೆ ಪಾವತಿಸಲು ಕ್ರಮವಹಿಸುವಂತೆ ಕೇಂದ್ರಸರ್ಕಾರ ಆದೇಶಿಸಿದೆ.

ಜನರು ವಲಸೆ ಹೋಗುವುದನ್ನು ತಡೆಗಟ್ಟಲು ಗ್ರಾಮದ ಬಡ ಕೂಲಿ ಕಾರ್ಮಿಕರು ನಮೂನೆ-6 ರಲ್ಲಿ ಅರ್ಜಿಯನ್ನು ಗ್ರಾಮ ಪಂಚಾಯತಿಗೆ ಸಲ್ಲಿಸಿ, ಕೂಲಿ ಕೆಲಸವನ್ನು ತಮ್ಮ ಗ್ರಾಮದಲ್ಲೇ ಪ್ರತಿ ಕುಟುಂಬವು 100 ದಿನಗಳವರೆಗೆ ನರೇಗಾ ಕೆಲಸದಲ್ಲಿ ಭಾಗವಹಿಸುವಂತೆ ಅವರು ತಿಳಿಸಿದ್ದಾರೆ.

*ವಿಶೇಷ ಚೇತನರು ಹಾಗೂ ಮಹಿಳೆಯರಿಗೆ ಸಿಗುವ ಸೌಲಭ್ಯಗಳು:*

ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ವಿಶೇಷ ಚೇತನರು ಹಾಗೂ ಹಿರಿಯ ನಾಗರಿಕರಿಗೆ ದಿನ ಒಂದಕ್ಕೆ ನಿಗದಿತ ಕೂಲಿ ಪಡೆಯಲು ನಿರ್ವಹಿಸಬೇಕಾದ ಕೆಲಸದ ಪ್ರಮಾಣದಲ್ಲಿ ಶೇ.50 ರಷ್ಟು ರಿಯಾಯತಿ ಇರುತ್ತದೆ.

ಶೇ.60 ಕ್ಕಿಂತ ಹೆಚ್ಚಿನ ಪ್ರಮಾಣದ ಮಹಿಳೆಯರನ್ನು ಹೊಂದಿರುವ ಕಾಮಗಾರಿಗಳಲ್ಲಿ ಮಹಿಳೆಯರು ನಿರ್ವಹಿಸಬೇಕಾದ ಕೆಲಸದ ಪ್ರಮಾಣದಲ್ಲಿ ಶೇ.10 ರಷ್ಟು ರಿಯಾಯತಿ ನೀಡಲಾಗುತ್ತದೆ.

ನರೇಗಾ ಯೋಜನೆಯ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ 06 ತಿಂಗಳ ಗರ್ಭಿಣಿಯರಿಗೆ ಮಗುವಿನ ಜನನದವರೆಗೆ ಹಾಗೂ ಬಾಣಂತಿಯರಿಗೆ ಮಗುವಿನ ಜನನ ದಿನಾಂಕದಿಂದ 06 ತಿಂಗಳವರೆಗೆ ಯೋಜನೆಯಡಿ ನಿಗದಿತ ಕೂಲಿ ಪಡೆಯಲು ನಿಗದಿಪಡಿಸಲಾದ ಕೆಲಸದ ಪ್ರಮಾಣದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಲಾಗಿದೆ. ರಿಯಾಯತಿ ಪಡೆಯಲು ಆರೋಗ್ಯ ಇಲಾಖೆಯು ನೀಡುವ ತಾಯಿ ಕಾರ್ಡ್ ನ್ನು ಆಧಾರವಾಗಿ ಪರಿಗಣಿಸಲಾಗುತ್ತದೆ.

ನಮೂನೆ-1 ರಲ್ಲಿ 18 ವರ್ಷ ಮೇಲ್ಪಟ್ಟ ಕುಟುಂಬದ ಸದಸ್ಯರು ಉದ್ಯೋಗ ಚೀಟಿಗೆ ಅರ್ಜಿ ಸಲ್ಲಿಸುವುದು. ಅರ್ಜಿ ಜೊತೆಗೆ ಪಾಸ್ ಫೋಟ್ ಅಳತೆಯ ಫೋಟೋ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ಬ್ಯಾಂಕ್ ಖಾತೆ ಮಾಹಿತಿಯನ್ನು ಆಯಾ ಗ್ರಾಮ ಪಂಚಾಯತಿಗೆ ನೀಡಿ, ಉದ್ಯೋಗ ಚೀಟಿಯನ್ನು ಪಡೆದುಕೊಳ್ಳಬಹುದು ಎಂದು ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸೋದ್ಯಮ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಮಾ.31-ಪ್ರವಾಸೋದ್ಯಮ ಇಲಾಖೆಯಿಂದ 2024-25ನೇ ಸಾಲಿಗೆ ಎಸ್.ಸಿ.ಎಸ್.ಪಿ.-ಟಿ. ಎಸ್.ಪಿ. ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ/ ಆತಿಥ್ಯಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ ಅಯೋಜಿಸಲಾಗುತ್ತಿದ್ದು, ಇದಕ್ಕಾಗಿ ಜಿಲ್ಲೆಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಇಲಾಖೆಯ ಕಲಬುರಗಿ ಉಪನಿರ್ದೇಶಕರು ತಿಳಿಸಿದ್ದಾರೆ

ಪರಿಶಿಷ್ಟ ಜಾತಿಗೆ ಸೇರಿದ 292 ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯಕ್ಷೇತ್ರದ ಸಂಸ್ಥೆಗಳಾದ ಮೈಸೂರಿನ ಫುಡ್ ಕ್ರಾಫ್ಟ್ ಇನ್‌ಸ್ಟಿಟ್ಯೂಟ್ (ಎಫ್.ಸಿ.ಐ.) ಮತ್ತು ಬೆಂಗಳೂರಿನ ಇನ್‌ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್‌ಮೆಂಟ್ ಸಂಸ್ಥೆ (ಐ.ಹೆಚ್.ಎಮ್.)ಗಳಲ್ಲಿ ವಸತಿ ಸಹಿತ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ತರಬೇತಿ ಕಾರ್ಯಕ್ರಮಗಳ ವಿವರ: ಫುಡ್ ಆಂಡ್ ಬೆವರೇಜ್ ಸರ್ವಿಸ್ ಸ್ಟೀವಾರ್ಡ್ ತರಬೇತಿ ಪಡೆಯಲು ಕನಿಷ್ಠ 10ನೇ ತರಗತಿ ಪಾಸಾಗಿರಬೇಕು. ಮಲ್ಟಿ ಕ್ಯೂಸೈನ್ ಕುಕ್ ತರಬೇತಿ ಪಡೆಯಲು ಕನಿಷ್ಠ 8ನೇ ತರಗತಿ ಉತ್ತೀರ್ಣರಾಗಿರಬೇಕು. ವಯೋಮಿತಿ 20 ರಿಂದ 45 ವರ್ಷದೊಳಗಿರಬೇಕು. ಈ ತರಬೇತಿ ಪಡೆಯಲು ಆಸಕ್ತಿ ಇರುವ ಅರ್ಹ ಎಸ್.ಸಿ-ಎಸ್.ಟಿ. ಅಭ್ಯರ್ಥಿಗಳು ಕಲಬುರಗಿ ನಗರದ ಸಾರ್ವಜನಿಕ ಉದ್ಯಾನವನದಲ್ಲಿರುವ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರ ಕಚೇರಿಯಿಂದ ಅರ್ಜಿಗಳನ್ನು ಪಡೆದ ಭರ್ತಿ ಮಾಡಿದ ಅರ್ಜಿಯೊಂದಿಗೆ ಅಭ್ಯರ್ಥಿಗಳು ಸ್ವಯಂ ಧೃಢೀಕರಿಸಿದ ಆಧಾರ್ ಕಾರ್ಡ್, ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ ಹಾಗೂ ಪಾಸ್‌ಪೋರ್ಟ್ ಅಳತೆಯ ಎರಡು ಭಾವಚಿತ್ರ ಲಗತ್ತಿಸಿ ಇದೇ ಕಚೇರಿಗೆ 2025ರ ಏಪ್ರಿಲ್ 5 ರೊಳಗಾಗಿ ಸಲ್ಲಿಸಬೇಕು.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ವಿಭಾಗದ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಪ್ರಧಾನಮಂತ್ರಿ ಇಂಟರ್ನ್‌ಶಿಫ್ ಯೋಜನೆಯಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಮಾ.31-ಪ್ರಸಕ್ತ 2024-25ನೇ ಸಾಲಿನ ಪ್ರಧಾನಮಂತ್ರಿ ಇಂಟರ್ನ್‌ಶಿಫ್ ಯೋಜನೆ (PrimeMinister,s Internship Scheme in Top Companies) ಯಡಿ ಕೌಶಲ್ಯಾಭಿವೃದ್ಧಿ ತರಬೇತಿ ಪಡೆಯಲು ಆಸಕ್ತಿಯುಳ್ಳ ಸೇಡಂ ಪಟ್ಟಣದ ಯುವಕ, ಯುವತಿಯರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸೇಡಂ ಪುರಸಭೆ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಅಭ್ಯರ್ಥಿಗಳ ವಯೋಮಿತಿ 21 ರಿಂದ 24 ವರ್ಷದೊಳಗಿರಬೇಕು. ಅಭ್ಯರ್ಥಿಗಳು ಎಸ್. ಎಸ್.ಎಲ್.ಸಿ, ಐಟಿಐ, ಪಿಯುಸಿ, ಬಿ.ಎ, ಬಿಎಸ್ಸಿ, ಬಿಕಾಂ, ಬಿಸಿಎ, ಬಿಬಿಎ, ಬಿ.ಫಾರ್ಮ, ಮತ್ತಿತರ ವಿದ್ಯಾರ್ಹತೆ ಹೊಂದಿರಬೇಕು.

ಉನ್ನತ ಮಟ್ಟದ 500 ಕಂಪನಿಗಳಲ್ಲಿ ಒಂದು ಕೋಟಿ ಯುವಕರಿಗೆ ಇಂಟರ್ನ್‌ಶಿಫ್ (ಖಟಣಜಡಿಟ್ಞುರಿ) ಮೂಲಕ ಕೌಶಲ್ಯವನ್ನು ವೃದ್ಧಿಸಲು ಯುವಕ/ಯುವತಿಯರು ಅವಶ್ಯಕ ದಾಖಲಾತಿಯೊಂದಿಗೆ 2025ರ ಮಾರ್ಚ್ 31 ರೊಳಗಾಗಿ ರೊಳಗಾಗಿ www.pminternship.mca.gov.in/login ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಬೇಕು. ಅರ್ಹತೆ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಸೇಡಂ ಪುರಸಭೆ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಡಾ. ಗುರಮ್ಮ ಸಿದ್ದಾರೆಡ್ಡಿಗೆ ಅಮ್ಮ ಅನ್ನಪೂರ್ಣೇಶ್ವರಿ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಮಾ.31: ಇಲ್ಲಿಯ ಕೃಷ್ಣ ದರ್ಶಿನಿ ಸಭಾಂಗಣದಲ್ಲಿ ಭಾನುವಾರ ನಡೆದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕದಿಂದ ಡಾ. ಎಸ್. ಎಸ್. ಸಿದ್ದಾರೆಡ್ಡಿ ಫೌಂಡೇಷನ್ ಅಧ್ಯಕ್ಷೆ ಡಾ. ಗುರಮ್ಮ ಸಿದ್ದಾರೆಡ್ಡಿ ಸೇರಿದಂತೆ ಸಾಧಕ ಮಹಿಳೆಯರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಗುರಮ್ಮ ಸಿದ್ದಾರೆಡ್ಡಿ ಅವರಿಗೆ ಅಮ್ಮ ಅನ್ನಪೂರ್ಣೇಶ್ವರಿ ಪ್ರಶಸ್ತಿ, ರಾಣಿ ಸತ್ಯಮೂರ್ತಿ, ಭಾಗೀರಥಿ ಕೊಂಡಾ, ಮಂಗಲಾ ಭಾಗವತ್, ಪುಣ್ಯವತಿ ವಿಸಾಜಿ, ಡಾ. ಸುನೀತಾ ಕೂಡ್ಲಿಕರ್, ಸುಷ್ಮಿತಾ ಮೋರೆ, ಸುನೀತಾ ಜೀರೋಬೆ, ಮಲ್ಲಮ್ಮ ಸಂತಾಜಿ, ಸ್ಫೂರ್ತಿ ಧನ್ನೂರ, ಗೀತಾ ಶ್ರೀಗಿರಿ, ಹೇಮಲತಾ ವೀರಶೆಟ್ಟಿ ಅವರಿಗೆ ಸಂಚಿ ಹೊನ್ನಮ್ಮ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಮಹಿಳೆಯರು ಏನು ಬೇಕಾದರೂ ಸಾಧಿಸಬಹುದು ಎಂಬುದ್ದಕ್ಕೆ ರಾಜ್ಯ ಮಹಿಳಾ ಕಾರ್ಯಪಡೆಯ ಮಾಜಿ ಅಧ್ಯಕ್ಷೆಯೂ ಆದ ಗುರಮ್ಮ ಸಿದ್ದಾರೆಡ್ಡಿ ನಿದರ್ಶನವಾಗಿದ್ದಾರೆ. ಅವರ ಸಾಧನೆ ಹಾಗೂ ಸಮಾಜ ಸೇವೆಯಿಂದ ಮಹಿಳೆಯರು ಪ್ರೇರಣೆ ಪಡೆಯಬೇಕು ಎಂದು ಕಾರ್ಯಕ್ರಮ ಉದ್ಘಾಟಿಸಿದ ಬೀದರ್ ವಿಶ್ವವಿದ್ಯಾಲಯದ ಕುಲಸಚಿವೆ ಸುರೇಖಾ ಹೇಳಿದರು.

ಗುರಮ್ಮ ಅವರು 80ನೇ ವಯಸ್ಸಿನಲ್ಲೂ ಕ್ರಿಯಾಶೀಲರಾಗಿದ್ದಾರೆ. ಸಮಾಜಕ್ಕೆ ಕೈಲಾದ ಕೊಡುಗೆ ನೀಡುತ್ತಿದ್ದಾರೆ ಎಂದು ತಿಳಿಸಿದರು.

ಸಮಾಜ ಇನ್ನೂ ಶೋಷಣೆ ಮುಕ್ತವಾಗಿಲ್ಲ. ಈಗಲೂ ಅನೇಕ ಮಹಿಳೆಯರು ಶೋಷಣೆಗೆ ಒಳಗಾಗುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಶೋಷಣೆ ಮುಕ್ತ, ಸಮಾನತೆ ಹಾಗೂ ಮಹಿಳಾ ಸ್ವಾವಲಂಬನೆಯ ಸಮಾಜ ನಿರ್ಮಾಣದ ಅಗತ್ಯವಿದೆ ಎಂದು ಹೇಳಿದರು.

ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷೆ ಭಾರತಿ ವಸ್ತ್ರದ್ ಮಾತನಾಡಿ, ಮಹಿಳೆಯರು ಪರಸ್ಪರ ಸಹಕಾರದಿಂದಲೂ ಸಾಧನೆ ಮಾಡಬಹುದು ಎಂದು ತಿಳಿಸಿದರು.

ವಿದ್ಯಾವತಿ ಹಿರೇಮಠ ವಿಶೇಷ ಉಪನ್ಯಾಸ ನೀಡಿದರು. ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಪ್ರತಿನಿಧಿ ಜಯದೇವಿ ಯದಲಾಪುರೆ, ಬಸವ ಕೇಂದ್ರದ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ವಿದ್ಯಾವತಿ ಬಲ್ಲೂರ, ವಿದ್ಯಾರಣ್ಯ ಪ್ರೌಢಶಾಲೆ ಮುಖ್ಯಶಿಕ್ಷಕಿ ಪ್ರತಿಭಾ ಚಾಮಾ ಇದ್ದರು.

ರೇಖಾ ಅಪ್ಪಾರಾವ್ ಸೌದಿ ನಾಡಗೀತೆ ಹಾಡಿದರು. ಸ್ವರೂಪರಾಣಿ ನಾಗೂರೆ ಸ್ವಾಗತಿಸಿದರು. ರೂಪಾ ಪಾಟೀಲ ನಿರೂಪಿಸಿದರು. ಡಾ. ಶ್ರೇಯಾ ಮಹೇಂದ್ರಕರ್ ವಂದಿಸಿದರು.

ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಮಹಿಳಾ ಮಂಡಳ ವತಿಯಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು.

# ರಂಜಾನ್ ಹಬ್ಬ: ಮುಸ್ಲಿಂ ಭಾಂಧವರಿಗೆ ಶುಭಾಶಯ ತಿಳಿಸಿದ ಖಂಡ್ರೆ



ಬೀದರ. ಮಾ. 31 : ಮುಸ್ಲಿಂರ ಪವಿತ್ರಹಬ್ಬವಾದ ಈದ್ ಉಲ್ ಫಿತರ್ (ರಂಜಾನ್) ಹಬ್ಬದ ದಿನದಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಮುಸ್ಲಿಂ ಬಾಂಧವರಿಗೆ ಶುಭಾಶಯ ತಿಳಿಸಿದ್ದಾರೆ. ಇಂದು ನಗರದ ಭಾಲ್ಕಿಯ ಈದ್ಗಾ ಮೈದಾನಕ್ಕೆ ಭೇಟಿ ನೀಡಿದ ಸಚಿವ ಈಶ್ವರ್ ಖಂಡ್ರೆ ಅವರು, ಈ ಪವಿತ್ರ ಹಬ್ಬ ಎಲ್ಲರ ಜೀವನದಲ್ಲಿ ಸಂತೋಷ, ಸಮೃದ್ಧಿ ಮತ್ತು ಶಾಂತಿಯ ಬೆಳಕು ಹೊತ್ತೊಯ್ಯಲಿ ಎಂದು ಶುಭ ಹಾರೈಸಿದರು. ಈ ಹಬ್ಬದ ದಿನದಂದು ಸೌಹಾರ್ದ, ಸಹೋದರತ್ವ, ಶಾಂತಿ ಮತ್ತು ಸಹಬಾಳ್ವೆಯ ಮಹತ್ವವನ್ನು ವಿವರಿಸಿ. ಹಿಂದೂ-ಮುಸ್ಲಿಂ-ಸಿಖ್-ಇಸಾಯಿ ಬಾಂಧವರ ನಡುವೆ ಭಾವೈಕ್ಯತೆ ಮತ್ತು ಶ್ರೇಷ್ಠವಾದ ಸಹೋದರತ್ವ ಬೆಳೆಸುವ ಸಂದೇಶವನ್ನು ನೀಡಿ ಎಂದು ಮುಸ್ಲಿಂ ಸಹೋದರರಿಗೆ ತಿಳಿಸಿದರು.

# ಕಲಾದಗಿಯಲ್ಲಿ ಸಂಭ್ರಮದ ರಂಜಾನ್:ಸಾಮೂಹಿಕ ಪ್ರಾರ್ಥನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.31-ತಾಲೂಕಿನ ಕಲಾದಗಿಯಲ್ಲಿ ಸೋಮವಾರ ಮುಸ್ಲಿಂ ಬಾಂಧವರು ಪವಿತ್ರ ರಂಜಾನ್ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಿದರು.

ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ಈ-ದುಲ್-ಫಿತರ್ (ರಂಜಾನ್) ಹಬ್ಬದ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಬಳಿಕ ಪರಸ್ಪರ ಶುಭಾಶಯ ಕೋರಿದರು.

ಮೌಲಾನಾ ಫಯಾಜ್ ಅಹ್ಮದ್ ಖಾಜಿ, ರಂಜಾನ್ ಹಬ್ಬದ ಆಚರಣೆ ಹಾಗೂ ದಾನ ಧರ್ಮದ ಮಹತ್ವದ ಕುರಿತು ಬೋಧನೆ ಮಾಡಿದರು.

ಕೆಪಿಸಿಸಿ ಉಪಾಧ್ಯಕ್ಷ ಎಂ.ಬಿ.ಸೌದಾಗರ, ಅಂಜುಮನ್ ಮಿಲತ್ ಕಮಿಟಿ ಅಧ್ಯಕ್ಷ ರಫೀಕ್ ಬೇಪಾರಿ, ಉಪಾಧ್ಯಕ್ಷ ಚಾಂದ್‌ಸಾಬ್ ಕಲಾದಗಿ, ಆರ್.ಆರ್.ಗೋಟೆ, ಇಬ್ರಾಹಿಂ ಸೋಲ್ಜರ್, ಸೈಪುದೀನ ನದಾಫ, ಬಂದೇನವಾಜ ಸೌದಾಗರ, ಹಸನ್ ಅಹಮದ್ ರೋಣ, ರೈಮಾನ್ ಸಾಬ ಬಾರೂದವಾಲೆ, ಎಚ್.ಎಮ್. ಹೊಸಕೋಟಿ, ಬಂದೇನವಾಜ್ ಮನಿಯಾರ, ಎ.ಡಿ.ಅಡ್ವಾನಿ, ದಿವಾನಸಾಬ ಕಾಲೇಸಾಬಣ್ಣವರ, ಎ.ಎಚ್.ಬೀಳಗಿ ಇದ್ದರು.

# ಏ.2ರಿಂದ ರಾಜ್ಯಾದ್ಯಂತ ಭಾರೀ ಮಳೆ ಸಾಧ್ಯತೆ



ಮಲ್ಲಮ್ಮ ನುಡಿ ವಾರ್ತೆ


ಬೆಂಗಳೂರು,ಮಾ.31:ಬಂಗಾಳ ಕೊಲ್ಲಿಯಲ್ಲಿ ಮೇಲೆ ಸುಳಿಗಾಳಿ ಹಾಗೂ ಕರ್ನಾಟಕದ ಒಳನಾಡಿನಲ್ಲಿ ಟ್ರಫ್ ಉಂಟಾಗಿರುವ ಪರಿಣಾಮ ಏಪ್ರಿಲ್ ನಾಲ್ಕರವರೆಗೆ ಮಳೆಯಾಗುವ ಮುನ್ಸೂಚನೆಗಳಿವೆ.

ರಾಜ್ಯಾದ್ಯಂತ ಮಳೆ ಮುಂದುವರೆಯುವ ಲಕ್ಷಣಗಳಿದ್ದು, ಚದುರಿದಂತೆ ಹಗುರ ಮಳೆಯಾಗಲಿದೆ. ಕೆಲವೆಡೆ ಗುಡುಗು, ಮಿಂಚಿನಿಂದ ಕೂಡಿದ ಮಳೆಯಾಗಲಿದೆ, ಅಲ್ಲದೆ, ಕೆಲವೆಡೆ ಆಲಿಕಲ್ಲು ಸಹಿತ ಮಳೆಯಾಗುವ ಸಾಧ್ಯತೆಗಳಿವೆ ಎಂದು ಭಾರತೀಯ ಹವಾಮಾನ ಇಲಾಖೆ ಬೆಂಗಳೂರು ಪ್ರಾದೇಶಿಕ ಕೇಂದ್ರದ ನಿರ್ದೇಶಕ ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ.

ಏ.2ರಿಂದ ಏ.4ರವರೆಗೆ ಬೆಂಗಳೂರು ಸುತ್ತಮತ್ತ ಗುಡುಗು, ಮಿಂಚಿನಿಂದ ಕೂಡಿದ ಮಳೆಯಾಗುವ ಸಾಧ್ಯತೆಗಳಿವೆ. ಉತ್ತರ ಕನ್ನಡ, ದಕ್ಷಿಣ ಕನ್ನಡ, ಹಾವೇರಿ, ಗದಗ, ಧಾರವಾಡ, ಚಿಕ್ಕಮಗಳೂರು, ಶಿವಮೊಗ್ಗ, ಹಾಸನ, ಕೊಡಗು, ಮೈಸೂರು, ಚಾಮರಾಜನಗರ ಜಿಲ್ಲೆಗಳ ಕೆಲವೆಡೆ ಗುಡುಗು, ಮಿಂಚಿನಿಂದ ಕೂಡಿದ ಮಳೆಯಾಗುವ ಮುನ್ಸೂಚನೆಗಳಿದ್ದು, ಈ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಣೆ ಮಾಡಿರುವುದಾಗಿ ಅವರು ಹೇಳಿದ್ದಾರೆ. ಮಳೆಯಾಗುವ ಸಾಧ್ಯತೆ ಇರುವುದರಿಂದ ಏ.2ರಿಂದ ಏ.5ರ ನಡುವಿನ ಅವಧಿಯಲ್ಲಿ ಗರಿಷ್ಠ ತಾಪಮಾನದಲ್ಲಿ 3ರಿಂದ 4 ಡಿ.ಸೆಂ.ನಷ್ಟು ಇಳಿಕೆಯಾಗುವ ಸಾಧ್ಯತೆ ಇದೆ. ವಾತಾವರಣದಲ್ಲಿ ಉಂಟಾಗಿರುವ ಬದಲಾವಣೆಯಿಂದ ಕರಾವಳಿ, ಉತ್ತರ ಹಾಗೂ ದಕ್ಷಿಣ ಒಳನಾಡಿನ ಹಲವೆಡೆ ಮಳೆ ನಿರೀಕ್ಷಿಸಬಹುದಾಗಿದೆ ಎಂದಿದ್ದಾರೆ.

ಏಪ್ರಿಲ್ 3 ಮತ್ತು 4ರಂದು ರಾಜ್ಯದ ಕೆಲವೆಡೆ ಭಾಗಶಃ ವ್ಯಾಪಕ ಹಾಗೂ ರಾಜ್ಯಾದ್ಯಂತ ಅಲ್ಲಲ್ಲಿ ಮಳೆಯಾಗುವ ಮುನ್ಸೂಚನೆಗಳಿವೆ. ನಿನ್ನೆ ರಾಜ್ಯದ ಕೆಲವೆಡೆ ಮಳೆಯಾಗಿದೆ. ಧಾರವಾಡದಲ್ಲಿ 2 ಸೆ.ಮೀ.ನಷ್ಟು ಮಳೆಯಾಗಿದೆ. ಇನ್ನೂ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗಿದೆ. ಕಲಬುರಗಿಯಲ್ಲಿ ಗರಿಷ್ಠ ಉಷ್ಣಾಂಶ 41 ಡಿ.ಸೆಂ.ನಷ್ಟು ದಾಖಲಾಗಿದೆ. ಬೆಂಗಳೂರಿನಲ್ಲಿ 35ಡಿ.ಸೆಂ. ನಷ್ಟು ದಾಖಲಾಗಿದೆ ಎಂದು ಅವರು ಹೇಳಿದ್ದಾರೆ.

# ಸರ್ಕಾರ ಗಾಳಿಯೊಂದು ಬಿಟ್ಟು ಎಲ್ಲಾ ಬೆಲೆ ಏರಿಕೆ ಮಾಡಿದೆ: ವಿಜಯೇಂದ್ರ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.31: ಸರ್ಕಾರ ಗಾಳಿಯೊಂದನ್ನ ಬಿಟ್ಟು ಎಲ್ಲಾ ಬೆಲೆ ಏರಿಕೆ ಮಾಡಿದೆ. ಸಾಮಾನ್ಯ ಜನ, ರೈತರನ್ನ ಈ ಸರ್ಕಾರ ಅರ್ಥ ಮಾಡಿಕೊಂಡಿಲ್ಲ. ಕಾಂಗ್ರೆಸ್‌ಗೆ ಜನ ಆಶೀರ್ವಾದ ಮಾಡಿದ್ದಾರೆ. ಆದರೆ ಈ ಸರ್ಕಾರ ಮತದಾರರಿಗೆ ವರದಾನ ಆಗೋ ಬದಲು ಶಾಪಗ್ರಸ್ತವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಕಿಡಿಕಾರಿದ್ದಾರೆ. ಬೆಲೆ ಏರಿಕೆ ಕುರಿತು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬೆಲೆ ಏರಿಕೆ ಅಂದರೆ ಎಲ್ಲಾ ಏರಿಕೆ ಮಾಡಿದೆ. ವಿದ್ಯುತ್ ದರ ಏರಿಕೆ ಮಾಡಿದ್ದಾರೆ. ಹಾಲಿನ ದರ ಮೂರು ಬಾರಿ ಏರಿಕೆ ಮಾಡಿದ್ದಾರೆ. ಈಗ ಮತ್ತೆ ಏರಿಕೆ ಆಗಿದೆ. ಸರ್ಕಾರಿ ಆಸ್ಪತ್ರೆ ಚಿಕಿತ್ಸೆ ವೆಚ್ಚವನ್ನು ಜಾಸ್ತಿ ಮಾಡಿದ್ದಾರೆ. ಹೊರ ರೋಗಗಳ ಶುಲ್ಕ, ಮರಣೋತ್ತರ ಪರೀಕ್ಷೆ ಶುಲ್ಕ, ವೈದ್ಯಕೀಯ ಪ್ರಮಾಣ ಪತ್ರದ ದರ ಜಾಸ್ತಿ ಆಗಿದೆ. ಲ್ಯಾಬ್ ಶುಲ್ಕ ಜಾಸ್ತಿ ಆಗಿದೆ. ಬಡವರಿಗೂ ಬರೆ ಎಳೆಯೋ ಕೆಲಸ ಈ ಸರ್ಕಾರ ಮಾಡಿದೆ. ನೋಂದಣಿ-ಮುದ್ರಾಂಕ ಶುಲ್ಕ ಜಾಸ್ತಿ ಆಗಿದೆ. ಪ್ರೊಫೆಷನಲ್ ಟ್ಯಾಕ್ಸ್ ಜಾಸ್ತಿ ಮಾಡಿದ್ದಾರೆ. ಬಸ್ ಟಿಕೆಟ್ ದರ ಏರಿಕೆ ಆಗಿದೆ. ಬೀಜಗಳ ಬೆಲೆ ಜಾಸ್ತಿ ಮಾಡಿದ್ದಾರೆ. ನೀರಿನ ದರ ಜಾಸ್ತಿ ಮಾಡಿದ್ದಾರೆ. ಈ ಸರ್ಕಾರ ಜನರಿಗೆ, ಮತದಾರರಿಗೆ ಶಾಪ ಕೊಡುವ ಕೆಲಸ ಮಾಡಿದೆ ಎಂದು ವಾಗ್ದಾಳಿ ನಡೆಸಿದರು.

# 2056ಕ್ಕೇರಿದ ಸಾವಿನ ಸಂಖ್ಯೆ; ಒಂದು ವಾರ ಶೋಕಾಚರಣೆ!



ಮಲ್ಲಮ್ಮ ನುಡಿ ವಾರ್ತೆ

ಮ್ಯಾನ್ಮಾರ:ಮಾ.31:ನಾಲ್ಕು ದಿನಗಳ ಹಿಂದೆ ಮ್ಯಾನ್ಮಾರ್‌ನಲ್ಲಿ ಸಂಭವಿಸಿದ ಭೂಕಂಪವು ಭಾರಿ ವಿನಾಶವನ್ನುಂಟು ಮಾಡಿದೆ. ಕನಿಷ್ಠ 2056 ಮಂದಿ ಸಾವನ್ನಪ್ಪಿದ್ದು 3900ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಇದಲ್ಲದೆ ಸುಮಾರು 270 ಮಂದಿ ಕಾಣೆಯಾಗಿದ್ದು ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ಸತತ ನಾಲ್ಕು ದಿನಗಳಿಂದ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆ ಮುಂದುವರಿದಿದ್ದರೂ, ಸಾವಿರಾರು ಜನರು ಅವಶೇಷಗಳ ಅಡಿಯಲ್ಲಿ ಸಿಲುಕಿರುವ ವರದಿಗಳಿವೆ. ಇನ್ನು ಮ್ಯಾನ್ಮಾರ್‌ನಲ್ಲಿ ಸಂಭವಿಸಿದ ಭೀಕರ ಭೂಕಂಪಕ್ಕೆ ಒಂದು ವಾರ ರಾಷ್ಟ್ರೀಯ ಶೋಕಾಚರಣೆ ಘೋಷಿಸಲಾಗಿದೆ.

ಶುಕ್ರವಾರದಂದು ಸಂಭವಿಸಿದ 7.7 ತೀವ್ರತೆಯ ಭೂಕಂಪದಿಂದ ಉಂಟಾದ ಜೀವಹಾನಿ ಮತ್ತು ಹಾನಿಗೆ ಸಂತಾಪ ಸೂಚಿಸಿ ಏಪ್ರಿಲ್ 6ರವರೆಗೆ ರಾಷ್ಟ್ರಧ್ವಜಗಳನ್ನು ಅರ್ಧಕ್ಕೆ ಇಳಿಸಲಾಗುತ್ತದೆ ಎಂದು ಆಡಳಿತಾರೂಢ ಜುಂಟಾ ಹೇಳಿಕೆಯಲ್ಲಿ ತಿಳಿಸಿದೆ. ಈ ಪರಿಸ್ಥಿತಿಯ ನಡುವೆಯೂ, ಇಡೀ ಜಗತ್ತು ಮ್ಯಾನ್ಮಾರ್‌ಗೆ ಸಹಾಯಹಸ್ತ ಚಾಚಿದೆ. ಇವುಗಳಲ್ಲಿ ಭಾರತವು ಅಗ್ರಸ್ಥಾನದಲ್ಲಿದೆ. ಅದು ನೆರೆಯ ದೇಶದ ವಿರುದ್ಧ ನೇರವಾಗಿ ಆಪರೇಷನ್ ಬ್ರಹ್ಮ ಎಂಬ ಸಂಪೂರ್ಣ ಕಾರ್ಯಾಚರಣೆಯನ್ನು ಪ್ರಾರಂಭಿಸಿದೆ. ಸುಮಾರು 35 ಲಕ್ಷ ಜನರು ನಿರಾಶ್ರಿತರಾಗಿದ್ದಾರೆ ಎಂಬ ಅಂಶದಿಂದ ಭೂಕಂಪದ ಪ್ರಮಾಣವನ್ನು ಅಂದಾಜಿಸಬಹುದು. ಪರಿಸ್ಥಿತಿ ಹೇಗಿದೆ ಎಂದರೆ ಆಸ್ಪತ್ರೆಗಳಲ್ಲಿ ಸ್ಥಳಾವಕಾಶದ ಕೊರತೆ ಇದ್ದು, ರೋಗಿಗಳಿಗೆ ತಾತ್ಕಾಲಿಕವಾಗಿ ರಸ್ತೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಮ್ಯಾನ್ಮಾರ್‌ಗೆ ಸಹಾಯ ಮಾಡಲು ಭಾರತ ಆಪರೇಷನ್ ಬ್ರಹ್ಮವನ್ನು ಪ್ರಾರಂಭಿಸಿದೆ. ಮಾರ್ಚ್ 29 ರಂದು (ಶನಿವಾರ), ಭಾರತವು ಮ್ಯಾನ್ಮಾರ್‌ಗೆ ಸಹಾಯ ಮಾಡಲು ಎರಡು ನೌಕಾ ಹಡಗುಗಳನ್ನು ಕಳುಹಿಸಿತು. ಇದರ ಮೂಲಕ, ಸೇನಾ ಕ್ಷೇತ್ರ ಆಸ್ಪತ್ರೆಯನ್ನು ಸ್ಥಾಪಿಸಲು ಸರಬರಾಜು ಮತ್ತು 118 ವೈದ್ಯಕೀಯ ಸಿಬ್ಬಂದಿಯನ್ನು ಸಹ ಕಳುಹಿಸಲಾಯಿತು. ಇವುಗಳ ಮೂಲಕ ಗಾಯಾಳುಗಳಿಗೆ ಸಹಾಯ ಮಾಡಲು ವ್ಯವಸ್ಥೆ ಮಾಡಲಾಗುತ್ತಿದೆ. ಇದಲ್ಲದೆ, ಅಗತ್ಯ ನೆರವಿನೊಂದಿಗೆ ಇನ್ನೂ ಎರಡು ನೌಕಾ ಹಡಗುಗಳನ್ನು ಮ್ಯಾನ್ಮಾರ್‌ಗೆ ಕಳುಹಿಸಲಾಗಿದೆ. ಈ ಹಡಗುಗಳಲ್ಲಿ ಒಂದನ್ನು ಅಂಡಮಾನ್-ನಿಕೋಬಾರ್ ಕಮಾಂಡ್ ಅಡಿಯಲ್ಲಿ ಶ್ರೀವಿಜಯಪುರಂನಲ್ಲಿ ನಿಯೋಜಿಸಲಾಗಿದೆ. ಆಪರೇಷನ್ ಬ್ರಹ್ಮ ಅಡಿಯಲ್ಲಿ ಮ್ಯಾನ್ಮಾರ್‌ಗೆ ಸಹಾಯ ಹಸ್ತ ಚಾಚಿದ ಮೊದಲ ವ್ಯಕ್ತಿ ಭಾರತ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ ಮತ್ತು ಶನಿವಾರ ತಡರಾತ್ರಿಯ ವೇಳೆಗೆ ಐದು ಮಿಲಿಟರಿ ವಿಮಾನಗಳ ಮೂಲಕ ಪರಿಹಾರ ಸಾಮಗ್ರಿಗಳು, ರಕ್ಷಣಾ ತಂಡಗಳು ಮತ್ತು ವೈದ್ಯಕೀಯ ಉಪಕರಣಗಳನ್ನು ಕಳುಹಿಸಿದೆ.

ಚೀನಾ:ಶನಿವಾರವೇ ಚೀನಾ ಮ್ಯಾನ್ಮಾರ್‌ಗೆ ಸಹಾಯ ಮಾಡಲು 82 ರಕ್ಷಣಾ ಕಾರ್ಯಕರ್ತರ ತಂಡವನ್ನು ಕಳುಹಿಸಿತ್ತು. ಬೀಜಿಂಗ್ ಭಾನುವಾರ ತನ್ನ 118 ಸದಸ್ಯರ ತಂಡವು ಪ್ರಸ್ತುತ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿಸಿಕೊಂಡಿದೆ ಎಂದು ಘೋಷಿಸಿತು. ಇದಲ್ಲದೆ, ಯಾಂಗೂನ್‌ಗೆ ಒಂದು ತಂಡವನ್ನು ಕಳುಹಿಸಲಾಗಿದೆ. ಚೀನಾ ಸರ್ಕಾರವು ಮ್ಯಾನ್ಮಾರ್‌ಗೆ 100 ಮಿಲಿಯನ್ ಯುವಾನ್ ಮೌಲ್ಯದ ತುರ್ತು ಮಾನವೀಯ ನೆರವನ್ನು ಕಳುಹಿಸುವುದಾಗಿ ಘೋಷಿಸಿದೆ.

ಅಮೆರಿಕ:ಅಮೆರಿಕ ಇಲ್ಲಿಯವರೆಗೆ ಮ್ಯಾನ್ಮಾರ್‌ಗೆ ಎಷ್ಟು ನೆರವು ಕಳುಹಿಸಿದೆ ಎಂಬುದು ಸ್ಪಷ್ಟವಾಗಿಲ್ಲ. ಆದಾಗ್ಯೂ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭೂಕಂಪದ ಘಟನೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದು, ಇದನ್ನು ಭಯಾನಕ ಮತ್ತು ಕೆಟ್ಟದಾಗಿದೆ ಎಂದು ಬಣ್ಣಿಸಿದ್ದಾರೆ. ತಮ್ಮ ಅಧಿಕಾರಿಗಳು ಮ್ಯಾನ್ಮಾರ್ ನಾಯಕರೊಂದಿಗೆ ಮಾತನಾಡಿದ್ದಾರೆಂದು ಅವರು ಹೇಳಿದ್ದರು. ನಾವು ಅವರಿಗೆ ಸಹಾಯ ಮಾಡುತ್ತೇವೆ ಎಂದರು.



ಹುಮನಾಬಾದ: ಮುಸ್ಲಿಮರು ರಂಜಾನ್ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು. ಕಳೆದೊಂದು ತಿಂಗಳಿಂದ ಶ್ರದ್ಧಾಭಕ್ತಿಯಿಂದ ಉಪವಾಸ ವ್ರತಾಚರಣೆ ಮಾಡಿರುವ ಇವರು, ಸೋಮವಾರ ಬೆಳಗ್ಗೆ ಪಟ್ಟಣದ ಕಲ್ಲೂರ ರಸ್ತೆಯಲ್ಲಿರುವ ಈದ್ಗಾದಲ್ಲಿ ಏಕಕಾಲಕ್ಕೆ ನೂರಾರು ಮುಸ್ಲಿಮರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ನಂತರ ಪಟ್ಟಣದ ಶಿವಪೂರ ಬಡಾವಣೆಯಲ್ಲಿ ಮುಸ್ಲಿಂ ಬಾಂಧವರು ಪರಸ್ಪರವಾಗಿ ಕೈ-ಕೈ ಮಿಲಾಯಿಸುವುದರ ಮೂಲಕ ರಂಜಾನ್ ಹಬ್ಬ ಆಚರಿಸಿಕೊಂಡರು. ಮಹ್ಮದ್ ಅಸೀಫ್, ಮಹ್ಮದ್ ಸುಭಾನ್ ಲಕಪತಿ, ಮಹ್ಮದ್ ರಫೀಕ್, ಮಹ್ಮದ್ ಇದ್ರಿಸ್ ಮೌಲಾನಾ, ಮಹ್ಮದ್ ಗೌಸ್, ಮಹ್ಮದ್ ಮುಕ್ತರ್, ಶೇಕ್ ಫೇರೋಜ್, ಮಹ್ಮದ್ ರಫೀಕ್, ಮಹ್ಮದ್ ಖುತ್ಬೋದ್ದಿನ್, ಮಹ್ಮದ್ ಬಡೇಸಾಬ್ ಇದ್ದರು. (ಮಲ್ಲಮ್ಮ ನುಡಿ ಚಿತ್ರ)



ಕಲಬುರಗಿ: ಪವಿತ್ರ ರಂಜಾನ್ ಹಬ್ಬದ ಅಂಗವಾಗಿ ಮುಸ್ಲಿಂ ಬಾಂಧವರು ನಗರದ ರಾಜಾಪೂರ ಬಡಾವಣೆಯ ಈದ್ಗಾ ಮೈದಾನದಲ್ಲಿ ಸೋಮವಾರ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

# ಕಮಲನಗರ: ಸಂಭ್ರಮದ ರಂಜಾನ ಹಬ್ಬ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.31: ರಂಜಾನ ಹಬ್ಬದ ಪ್ರಯುಕ್ತ ಪಟ್ಟಣದ ಸೋನಾಳ ರಸ್ತೆ ಪಕ್ಕ ಇರುವ ಈದ್ದಗ ನಲ್ಲಿ ತಾಲೂಕಿನ ಮುಸ್ಲಿಂ ಬಂಧುಗಳಿಂದ ಮುಫ್ತಿ ಶಾರಿಕ್ ಅವರ ನೇತೃತ್ವದಲ್ಲಿ ಸಾಮೋಹಿಕ ನಮಜಾ ಮಾಡಿ ಪ್ರಾಥನೆ ಸಲ್ಲಿಸಿದರು.

ಮುಫ್ತಿ ಶಾರಿಕ ಮಾತನಾಡಿ, ಮುಸ್ಲಿಮರಿಗೆ, ರಂಜಾನ್ ಎಂದರೆ ಗಾಸಿಪ್, ಚಾಡಿ, ಸುಳ್ಳು ಅಥವಾ ವಾದದಂತಹ ಯಾವುದೇ ನಕಾರಾತ್ಮಕ ಕೃತ್ಯಗಳನ್ನು ತಪ್ಪಿಸುವ ಮೂಲಕ ದೈಹಿಕವಾಗಿ ಮತ್ತು ಆಧ್ಯಾತ್ಮಿಕವಾಗಿ ತಮ್ಮನ್ನು ತಾವು ತರಬೇತಿ ಮಾಡಿಕೊಳ್ಳುವ ಸಮಯ.

ಮುಸ್ಲಿಮರು ಆತ್ಮಾವಲೋಕನ ಮತ್ತು ಆಧ್ಯಾತ್ಮಿಕ ಸುಧಾರಣೆಗೆ ಮತ್ತು ನೈತಿಕ ಶ್ರೇಷ್ಠತೆಯಲ್ಲಿ ಬೆಳೆಯಲು ಒಂದು ಅವಕಾಶವಾಗಿ ರಂಜಾನ್ ಅನ್ನು ಆಚರಿಸುತ್ತಾರೆ. ಮುಸ್ಲಿಮರು ಪರಸ್ಪರ ಉಪಾಹಾರಕ್ಕಾಗಿ ಆಹ್ವಾನಿಸುವುದರಿಂದ ಮತ್ತು ಮಸೀದಿಯಲ್ಲಿ ಪ್ರಾರ್ಥನೆಗಾಗಿ ಭೇಟಿಯಾಗುವುದರಿಂದ ರಂಜಾನ್ ಅತ್ಯಂತ ಸಾಮಾಜಿಕ ಸಮಯವಾಗಿದೆ ಎಂದು ಹೇಳಿದರು.

ಈ ವೇಳೆ ನಾಜಿಮ್ ಬಾಗವಾನ್, ಶೆರೋ ಬಾಗವಾನ್, ರ್ಝುದ್ ತಾಂಬೋಲಿ, ಇಲಾಹಿ ಬಾಗವಾನ್, ಅಜರ್ ಬಾಗವಾನ್, ಶಬ್ಬೀರ್ ಖುರೇಷಿ, ಸದರ್ ಜಮಿಯತ್ ಉಲಾಮ್ ಕಮಲನಗರ ಎಂ. ಮೊಹಮ್ಮದಿಯಾ ಮಸೀದಿ, ನಿಜಾಮ್ ಖುರೇಷಿ, ಫಾರೂಖ್ ಮನಿಯಾರ್, ಇರ್ಫಾನ್ ಶೇಖ್, ಖಯೂಮ್ ಖುರೇಷಿ, ಸೇರಿದಂತೆ ನೂರಾರು ಮುಸ್ಲಿಂ ಬಾಂದವರು ಈದ್ಗಾಹ್ ಪರ್ ನಮಾಜ ಮಾಡಿ ಪ್ರಾಥನೆ ಸಲ್ಲಿಸಿದ್ದರು.

# ಸಂಭ್ರಮದಿಂದ ರಂಜಾನ್ ಹಬ್ಬ ಆಚರಣೆ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾ.31: ಮುಸ್ಲಿಂ ಸಮುದಾಯದ ವಿಶಿಷ್ಟ ಹಬ್ಬ ರಂಜಾನ್ ಅನ್ನು ನಗರದಲ್ಲಿ ಸಂಭ್ರಮದಿಂದ ಆಚರಿಸಲಾಯಿತು. ನಗರದ ಜಿಲ್ಲಾ ನ್ಯಾಯಾಲಯ ಎದುರುಗಡೆ ಇರುವ ( ಖಾಧಿಮ್ ) ಹಳೆ ಈದ್ಗಾ ಮೈದಾನ ಹಾಗೂ ಸ್ಟೇಷನರಿಯಾದ ಈದ್ಗಾ ಮೈದಾನಕ್ಕೆ ತೆರಳಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಇಸ್ಲಾಂ ಕ್ಯಾಲೆಂಡರ್‌ನ 9ನೇ ತಿಂಗಳಿನಲ್ಲಿ ಉಪವಾಸದ ಹಬ್ಬವೆಂದೇ ಕರೆಸಿಕೊಳ್ಳುವ ಈ ಆಚರಣೆ ನಡೆಯುತ್ತದೆ. ಅಂತೆಯೆ ಈ ಮಾಸದಲ್ಲಿ 29 ದಿನ ಉಪವಾಸ ಆಚರಣೆ ಮಾಡಿದ ನಗರದ ಮುಸ್ಲಿಂ ಸಮುದಾಯದವರು ಕಡೇ ದಿನ 'ಈದ್ ಉಲ್ ಫಿತರ್' ಆಚರಿಸಿದರು. ಎಲ್ಲೆಡೆ ಬಡವರು ಶ್ರೀಮಂತರೆನ್ನದೆ ಹಬ್ಬದಲ್ಲಿ ಭಾಗವಹಿಸಿ ಪರಸ್ಪರ ಆಲಿಂಗಿಸಿ ಕೊಂಡು ಶುಭಾಶಯ ವಿನಿಮಯ ಮಾಡಿಕೊಳ್ಳುವ ದೃಶ್ಯ ಸಮಾನ್ಯವಾಗಿತ್ತು. ಪ್ರಾರ್ಥನೆಗೆ ತೆರಳುವ ಮುನ್ನ ಸಮುದಾಯದ ಉಳ್ಳವರು ಬಡವರಿಗೆ ತಮ್ಮ ದುಡಿಮೆಯ ಇಂತಿಷ್ಟು ಅಂಶವನ್ನು ದಾನವಾಗಿ ನೀಡಿದರು. ಕೆಲವರು ಗೋಧಿ, ಅಕ್ಕಿ, ರಾಗಿ ನೀಡಿದರೆ ಇನ್ನು ಹೆಚ್ಚು ಸ್ಥಿತಿವಂತರು ಗೋಡಂಬಿ, ದ್ರಾಕ್ಷಿ, ಅಂಜೂರ ಸೇರಿದಂತೆ ಇನ್ನಿತರ ವಸ್ತುಗಳನ್ನು ಕೊಡುಗೆಯಾಗಿ ನೀಡುತ್ತಾರೆ. ಪ್ರಾರ್ಥನೆಗೆ ತೆರಳುವಾಗ ಒಂದು ಹಾದಿಯಲ್ಲಿ ತೆರಳಿದರೆ ಬರುವಾಗ ತಮ್ಮ ಹಿರಿಯರ ಸಮಾಧಿಗಳಿಗೆ ನಮಸ್ಕರಿಸಿ ಮತ್ತೊಂದು ಹಾದಿಯಲ್ಲಿ ಮನೆಗೆ ತೆರಳಿದರು. ಚಂದ್ರನನ್ನು ನೋಡಿ ಉಪವಾಸವನ್ನು ಆರಂಭಿಸಲಾಗುತ್ತದೆ. ಅದೇ ರೀತಿ 29 ದಿನ ಪೂರ್ಣಗೊಂಡ ನಂತರ ಚಂದ್ರನ ನೋಡಿ ಉಪವಾಸ ಅಂತ್ಯಗೊಳಿಸ ಲಾಗುತ್ತದೆ. ಬೆಳಗ್ಗೆ ಸೂರ್ಯೋದಯಕ್ಕೂ ಮುನ್ನ ಉಪಾಹಾರ ಸೇವಿಸಲಾಗುತ್ತದೆ. ನಂತರ ಸಂಜೆ ಸೂರ್ಯ ಮುಳುಗಿದ ನಂತರ ಆಹಾರ ಸೇವಿಸಲಾಗುತ್ತದೆ.

ಬೆಳಗ್ಗೆಯೆ ಪ್ರಾರ್ಥನೆಗೂ ಮುನ್ನ 'ಶೀರ್ ಕುರ್ಮಾ' ಸೇವಿಸುತ್ತಾರೆ. ಈ ತಿನಿಸು ಈ ಹಬ್ಬದ ಒಂದು ವಿಶಿಷ್ಟ ಖಾದ್ಯ ವಾಗಿದೆ. ಹಾಲು, ಶಾವಿಗೆ, ಕರ್ಜೂರ, ಕೋವಾ, ಸೇರಿದಂತೆ ಇನ್ನಿತರ ಡ್ರೈ ಹಣ್ಣುಗಳನ್ನು ಬೆರೆಸಿ ತಯಾರು ಮಾಡಲಾಗುತ್ತದೆ. ಕೊಡುಗೆ ವಿಶೇಷ: ಈ ಹಬ್ಬದ ಮತ್ತೊಂದು ವಿಶೇಷವೆಂದರೆ ದೊಡ್ಡವರು ಚಿಕ್ಕಮಕ್ಕಳಿಗೆ ಈದಿ (ಕೊಡುಗೆ) ನೀಡುತ್ತಾರೆ. ಮಕ್ಕಳು ಈ ಹಬ್ಬದ ದಿನ ಕೊಡುಗೆ ಸ್ವೀಕರಿಸುವುದರಲ್ಲಿಯೂ ತಲ್ಲೀನರಾಗಿರುತ್ತಾರೆ. ಪ್ರತಿಯೊಬ್ಬರು ನಿನಗೆಷ್ಟು ಸಿಕ್ಕಿತು? ಎಂದು ಸಂತೋಷದಿಂದ ಕೊಡುಗೆ ಬಗ್ಗೆ ಸಂಭ್ರಮದಿಂದ ಮಾತನಾಡಿಕೊಳ್ಳುವುದು ಕಂಡು ಬಂತು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.